ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ಮಾರ್ಚ್ 29 ಶನಿವಾರ 2025

₹4

ಸಂಪುಟ: 45 | ಸಂಚಿಕೆ: 339 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ದೇವರಿಗೂ ಮಿಗಿಲಾದದ್ದು ಶಿಕ್ಷಕ ಸ್ಥಾನ

- ಅಖಿಲ ಭಾರತೀಯ ಸಂಘಟನಾ ಮಂತ್ರಿ ಬಿ.ಆರ್.ಶಂಕರಾನಂದಜೀ ಅಭಿಮತ
- ಕುಲಪತಿ, ರಾಷ್ಟ್ರಪತಿಗೆ ಕುಲಗುರು, ರಾಷ್ಟ್ರಗುರು ಪರ್ಯಾಯ ಪ್ರತಿಪಾದನೆ



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅತಿಥಿ ಗೃಹದ ಸಭಾಂಗಣದಲ್ಲಿ 'ಭಾರತೀಯ ಶಿಕ್ಷಣ ಪದ್ಧತಿ–ಅಧ್ಯಾಪಕರಿಗಾಗಿ' ಆಯೋಜಿಸಿದ್ದ ಎರಡು ದಿನಗಳ ತರಬೇತಿ ಕಾರ್ಯಾಗಾರದಲ್ಲಿ ಅಖಿಲ ಭಾರತೀಯ ಸಂಘಟನಾ ಮಂತ್ರಿ ಬಿ.ಆರ್.ಶಂಕರಾನಂದಜೀ ಮಾತನಾಡಿದರು.

ಮೈಸೂರು,ಮಾ.28(ಎಂಟಿವೈ)– ದೇವರಿಗಿಂತ ಮಿಗಿಲಾದ ಸ್ಥಾನ ಶಿಕ್ಷಕರದ್ದು, ರಾಷ್ಟ್ರ ಕಟ್ಟುವ ಏಕೈಕ ವೃತ್ತಿ ಶಿಕ್ಷಕರದ್ದಾಗಿದೆ ಎಂದು ಭಾರತೀಯ ಶಿಕ್ಷಣ ಮಂಡಲದ ಅಖಿಲ ಭಾರತೀಯ ಸಂಘಟನಾ ಮಂತ್ರಿ ಬಿ.ಆರ್.ಶಂಕರಾನಂದಜೀ ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅತಿಥಿ ಗೃಹದ ಸಭಾಂಗಣದಲ್ಲಿ ಮುಕ್ತ ವಿಶ್ವವಿದ್ಯಾನಿಲಯದ ಸ್ವಾಮಿ ವಿವೇಕಾನಂದ ಅಧ್ಯಯನ ಪೀಠ ಹಾಗೂ ಭಾರತೀಯ ಶಿಕ್ಷಣ ಮಂಡಲದ ದಕ್ಷಿಣ ಮತ್ತು ಉತ್ತರ ಕರ್ನಾಟಕ ಪ್ರಾಂತದ ಸಂಯುಕ್ತಾಶ್ರಯದಲ್ಲಿ 'ಭಾರತೀಯ ಶಿಕ್ಷಣ ಪದ್ಧತಿ–ಅಧ್ಯಾಪಕರಿಗಾಗಿ' ಆಯೋಜಿಸಿದ್ದ ಎರಡು ದಿನಗಳ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ಸದೃಢತೆ, ಸಮಾಜದ ಗುಣಮಟ್ಟವನ್ನು ಶಿಕ್ಷಣ ವ್ಯವಸ್ಥೆಯಿಂದ ಅಳೆಯಲಾಗುತ್ತದೆ. ಶಿಕ್ಷಣ ವ್ಯವಸ್ಥೆಯ ಗುಣಮಟ್ಟ ನಿಶ್ಚಯವಾಗುವುದು ಶಿಕ್ಷಣ ಸಂಸ್ಥೆಗಳಿಂದ ಎಂದರು.

ಶಿಕ್ಷಕರ ಗುಣಮಟ್ಟ ಆಧರಿಸಿ ದೇಶದ ರಕ್ಷಣಾ ವ್ಯವಸ್ಥೆ ಹಾಗೂ ಸಮಾಜದ ಗುಣಮಟ್ಟವನ್ನು ತಿಳಿದುಕೊಳ್ಳಬಹುದು. ಆ ಕಾರಣದಿಂದ ಶಿಕ್ಷಕ ವೃತ್ತಿ ಮಹತ್ವ ಹಾಗೂ ದೈವ ಪ್ರೇರಿತ ವೃತ್ತಿ ಎಂದು ಪ್ರತಿಪಾದಿಸಿದರು.

ಶಿಕ್ಷಣ ವ್ಯವಸ್ಥೆಯ ಆಧಾರದ ಮೇಲೆ ದೇಶದ ಗುಣಮಟ್ಟ ನಿಶ್ಚಯವಾಗಲಿದೆ. ಈ ಹಿನ್ನೆಲೆಯಲ್ಲಿ ಶಿಕ್ಷಕ ಎಂದರೆ ರಾಷ್ಟ್ರ ಕಟ್ಟುವ ಹೊಣೆ ಇರುವ ಸಮಾಜದ ಏಕೈಕ ವ್ಯಕ್ತಿ.

ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಬಹಳ ಮಹತ್ವದ್ದಾಗಿದೆ. ಶಿಕ್ಷಕ ಎಂದರೆ ದೇವರಿಗಿಂತ ದೊಡ್ಡವರು. ದೇವರು ಮತ್ತು ಶಿಕ್ಷಕ ಅಕ್ಕಪಕ್ಕದಲ್ಲಿ ನಿಂತಾಗ ನಾವು ಆಯ್ಕೆ ಮಾಡಿಕೊಡಬೇಕಾಗಿರೋದು ಗುರುವನ್ನು. ಯಾಕೆಂದರೆ ದೇವರ ಹತ್ತಿರ ಹೋಗಲು ದಾರಿಯನ್ನು ತೋರಿಸುವವನೇ ಗುರು ಎಂದರು.

ಶಿಕ್ಷಕರಿಗಾಗಿ ಆಯೋಜಿಸಿರುವ ಕಾರ್ಯಶಾಲೆಯಲ್ಲಿ ಕಲಿತದ್ದನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡಬೇಕು. ಕಾರ್ಯಾಗಾರ ಎನ್ನುವ ಪದ ಸರಿಯಲ್ಲ. ಅದನ್ನು ಕಾರ್ಯಶಾಲೆ ಎನ್ನುವುದು ಸೂಕ್ತ. ಎರಡು ದಿನ ತಿಳಿದುಕೊಂಡಿದ್ದನ್ನು, ಅಧ್ಯಯನ ಮಾಡಿರುವ ಸಂಗತಿಗಳನ್ನು ಇನ್ನಿತರ ಶಿಕ್ಷಕರಿಗೂ ತಲುಪಿಸಬೇಕು. ಶಿಕ್ಷಕ ವೃತ್ತಿಯನ್ನು ಭಗವಂತನ ಕೈಂಕರ್ಯ ಎಂದು ತಿಳಿದುಕೊಳ್ಳಬೇಕು. ಶಿಕ್ಷಕ ನಿರ್ಣಯ, ಸಂಕಲ್ಪ ಮಾಡದೆ ಇದ್ದರೆ ಶಿಕ್ಷಣ ವ್ಯವಸ್ಥೆಯಲ್ಲಿ ಬದಲಾವಣೆ ತರಲು ಆಗುವುದಿಲ್ಲ ಎಂದು ಅಭಿಪ್ರಾಯಪಟ್ಟರು.

ನೂರಾರು ಪದ ಬದಲಿಸಬೇಕಾಗಿದೆ: ದೇಶದಲ್ಲಿ ಪ್ರಚಲಿತದಲ್ಲಿರುವ ಅಜ್ಞಾನದಿಂದ ಕೂಡಿರುವ ಪದಗಳನ್ನು ಬದಲಿಸಬೇಕಾಗಿದೆ. ಕುಲಪತಿ, ರಾಷ್ಟ್ರಪತಿ ಪದ ಬಳಕೆ ಸರಿಯಾದ ಕ್ರಮವಲ್ಲ. ಕುಲಕ್ಕೆ ಹಾಗೂ ರಾಷ್ಟ್ರಕ್ಕೆ ಪತಿಯಾಗಲು ಸಾಧ್ಯವೇ ಇಲ್ಲ. ಆ ಕಾರಣದಿಂದ ಕುಲಪತಿಯನ್ನು ಕುಲಗುರು ಎಂತಲೂ, ರಾಷ್ಟ್ರಪತಿ ಪದವಿಯನ್ನು ರಾಷ್ಟ್ರಗುರು ಎಂತಲೂ ಕರೆಯಬೇಕು. ಈಗಾಗಲೇ ಹರಿಯಾಣ, ಮಧ್ಯಪ್ರದೇಶ, ಮಹಾರಾಷ್ಟ್ರ ಹಾಗೂ ಗುಜರಾತ್ ಸೇರಿದಂತೆ 14 ರಾಜ್ಯಗಳಲ್ಲಿ ಕುಲಪತಿ ಪದಕ್ಕೆ ಪರ್ಯಾಯವಾಗಿ ಕುಲಗುರು ಎಂದು ಬಳಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಕರ್ನಾಟಕದ ಮೈಸೂರು ಸೇರಿದಂತೆ ಇತರೆ ವಿಶ್ವವಿದ್ಯಾನಿಲಯಗಳಲ್ಲೂ ಎಲ್ಲಾ ದಾಖಲೆಗಳಲ್ಲಿ ಕುಲಪತಿಗೆ ಬದಲಾಗಿ ಕುಲಗುರು ಪದ ಬಳಕೆಯಾಗುವಂತೆ ನಿರ್ಣಯ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಭಾರತ ಪರಿಚಯವಾಗಬೇಕು: ದೇಶಕ್ಕೆ ಭಾರತ ಹೆಸರು ಸೂಕ್ತ. ಇಂಡಿಯಾ ಪದವನ್ನು ತೆಗೆದು ಹಾಕಿ ಎಲ್ಲಾ ದಾಖಲೆಗಳಲ್ಲೂ ಭಾರತ ಎಂದು ನಮೂದಿಸಬೇಕು. ಈ ನಿರ್ಣಯವನ್ನು ಇಂದೋರ್‌ನಲ್ಲಿರುವ ಅಹಲ್ಯಾಬಾಯಿ ವಿಶ್ವವಿದ್ಯಾಲಯದಲ್ಲಿ ಜಾರಿಗೊಳಿಸಲಾಗಿದ್ದು, ಅಂಕಪಟ್ಟಿಯಲ್ಲೂ ಭಾರತ ಎಂದು ಮುದ್ರಿಸಲಾಗಿದೆ. ಉನ್ನತ ವ್ಯಾಸಂಗಕ್ಕೆ ವಿದೇಶಕ್ಕೆ ಹೋಗುವ ವಿದ್ಯಾರ್ಥಿಗಳಿಗೆ ತೊಂದರೆಯಾಗಬಹುದು. ಭಾರತ ಎಂದರೆ ವಿದೇಶಿಗರಿಗೆ ಗೊತ್ತಾಗುವುದಿಲ್ಲ ಎಂಬ ಅಭಿಪ್ರಾಯವಿದೆ. ವಿದೇಶದಲ್ಲಿ ಇದುವರೆಗೂ ಇಂಡಿಯಾ ಗೊತ್ತಿತ್ತು. ಇನ್ನು ಮುಂದೆ ಭಾರತವನ್ನು ತಿಳಿದುಕೊಳ್ಳಲಿ ಎಂಬ ಉತ್ತರ ಅಹಲ್ಯಬಾಯಿ ವಿಶ್ವವಿದ್ಯಾನಿಲಯದ ನಿರ್ಣಯದಲ್ಲಿ ಹೇಳಲಾಗಿದೆ. ಹಾಗಾಗಿ ಇನ್ನು ಮುಂದೆ ಭಾರತವನ್ನು ಇನ್ನಷ್ಟು ಆಳವಾಗಿ ತಿಳಿದುಕೊಳ್ಳುವಂತೆ ನಾವು ಮಾಡಬೇಕಾಗಿದೆ ಎಂದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ, ಡೀನ್ ಪ್ರೊ.ಲಕ್ಷ್ಮೀ, ಸ್ವಾಮಿ ವಿವೇಕಾನಂದ ಅಧ್ಯಯನ ಪೀಠದ ಸಂಯೋಜನಾಧಿಕಾರಿ ಡಾ.ಜ್ಯೋತಿಶಂಕರ್, ಡಾ.ರಾಮನಾಥನ್ ನಾಯ್ಡು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮಾಜಿ ಶಾಸಕ ವಾಸು ಜನ್ಮದಿನ ಆಚರಣೆ



ಮಾಜಿ ಶಾಸಕ ವಾಸು ಅವರ ಜನ್ಮದಿನದ ಪ್ರಯುಕ್ತ ಮೈಸೂರಿನ ದೇವರಾಜ ಮೊಹಲ್ಲಾದ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಸಾರ್ವಜನಿಕರಿಗೆ ಸಿಹಿ ವಿತರಿಸಲಾಯಿತು. ಈ ವೇಳೆ ನಗರ ಪಾಲಿಕೆ ಮಾಜಿ ಸದಸ್ಯ ಪ್ರಶಾಂತ್ ಗೌಡ, ಹಾಪ್‌ಕಾಮ್ಸ್ ನಿರ್ದೇಶಕ ಶ್ರೀನಿವಾಸ್, ಗುರುರಾಜ್ ಶೆಟ್ಟಿ, ಅನೋಜ್ ಸರಸ್ವತ್, ನವೀನ್, ಗುರುಪ್ರಸಾದ್, ಮಂಜುನಾಥ್ ಗೌಡ, ಸಂತೋಷ, ನೀತು, ವಿನಯ್, ರಾಜು ಉಪಸ್ಥಿತರಿದ್ದರು.

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ಸರ್ವರ್ ಸಮಸ್ಯೆ

ಮೈಸೂರು ಸೇರಿ ದೇಶಾದ್ಯಂತ ಸದರಿ ಬ್ಯಾಂಕ್ ಸೇವೆ ಕೆಲ ಗಂಟೆ ಸ್ಥಗಿತ



ಸರ್ವರ್ ಸಮಸ್ಯೆಯಿಂದ ನೆಟ್‌ವರ್ಕ್ ಇಲ್ಲವೆಂದು ಮೈಸೂರಿನ ವಿವಿ ಮೊಹಲ್ಲಾದ ಟೆಂಪಲ್ ರಸ್ತೆಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಪ್ರವೇಶ ದ್ವಾರದಲ್ಲಿ ಫಲಕ ಹಾಕಲಾಗಿತ್ತು.

ಮೈಸೂರು, ಮಾ.28(ಬಿಎಲ್‌ಯು)– ಸರ್ವರ್ ಸಮಸ್ಯೆಯ ಹಿನ್ನೆಲೆಯಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್ (ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ)ನ ಕೆಲಸ–ಕಾರ್ಯಗಳು ಇಂದು ಕೆಲ ಗಂಟೆ ಸ್ಥಗಿತಗೊಂಡಿತ್ತು.

ಇಂದು ಬೆಳಿಗ್ಗೆ ಬ್ಯಾಂಕ್‌ಗೆ ಬಂದ ಸಿಬ್ಬಂದಿ ಕೆಲಸ ಆರಂಭಿಸಲು ಕಂಪ್ಯೂಟರ್ ಚಾಲನೆಗೊಳಿಸಿದಾಗ ಸಂಪರ್ಕ ಜಾಲ ಸ್ಥಗಿತಗೊಂಡಿತ್ತು. ಸರ್ವರ್ ಸಮಸ್ಯೆ ಇದಕ್ಕೆ ಕಾರಣ ಎಂದು ಮನದಟ್ಟಾಯಿತು.

ಎಸ್‌ಬಿಐನ ಪ್ರಧಾನ ಕಚೇರಿ ಮುಂಬೈನಲ್ಲಿ ಸರ್ವರ್ ಸಮಸ್ಯೆ ಉಂಟಾಗಿತ್ತು. ಇದರಿಂದ ಮೈಸೂರು ಸೇರಿದಂತೆ ದೇಶಾದ್ಯಂತ ಎಸ್‌ಬಿಐ ಬ್ಯಾಂಕ್ ಶಾಖೆಗಳ ಕೆಲಸ ಕಾರ್ಯ ಸ್ಥಗಿತವಾಗಿತ್ತು.

ಮೈಸೂರಿನ ವಿವಿ ಮೊಹಲ್ಲಾ ಟೆಂಪಲ್ ರಸ್ತೆ, ಸಯ್ಯಾಜಿರಾವ್ ರಸ್ತೆಯ ಶಾಖೆ ಸೇರಿದಂತೆ ಭಾರತೀಯ ಸ್ಟೇಟ್ ಬ್ಯಾಂಕ್‌ನ ಇನ್ನಿತರೆ ಶಾಖೆಗಳಲ್ಲಿ ಇದೇ ಪರಿಸ್ಥಿತಿ ಇತ್ತು. ಇದರಿಂದ ಬ್ಯಾಂಕ್ ಸಿಬ್ಬಂದಿ ಅಸಹಾಯಕರಾಗಿ ಕುಳಿತರು.

ಬ್ಯಾಂಕ್‌ನ ಪ್ರವೇಶ ದ್ವಾರಕ್ಕೆ ನೆಟ್‌ವರ್ಕ್ ಇಲ್ಲ ಎಂಬ ಫಲಕ ಹಾಕಲಾಗಿತ್ತು. ನಾನಾ ಕೆಲಸ–ಕಾರ್ಯಕ್ಕೆ ಬ್ಯಾಂಕ್‌ಗೆ ಬಂದ ಗ್ರಾಹಕರು ತಾಂತ್ರಿಕ ಸಮಸ್ಯೆ ಹಿನ್ನೆಲೆಯಲ್ಲಿ ಕೆಲವರು ವಾಪಸ್ಸಾದರು. ಇನ್ನೇನು ಸರ್ವರ್ ಸಮಸ್ಯೆ ಪರಿಹಾರವಾಗಬಹುದು. ತಮ್ಮ ಕೆಲಸ ಮುಗಿಸಿಕೊಂಡೇ ಹೋಗಬಹುದು ಎಂದು ಕೆಲ ಗ್ರಾಹಕರು ಚಾತಕ ಪಕ್ಷಿಯಂತೆ ಕಾದು ಕುಳಿತರು.

ಯುಗಾದಿ ಹಬ್ಬ ಹಾಗೂ ರಂಜಾನ್ ಹಿನ್ನೆಲೆ ಕೆಲವು ಹಣಕಾಸಿನ ತುರ್ತು ಅಗತ್ಯಗಳು, ಡಿಡಿ ಪಡೆಯುವುದು ಸೇರಿದಂತೆ ಹಲವು ಕಾರ್ಯದ ಅನಿವಾರ್ಯತೆ ಇದ್ದವರು ಕಾದು ಕುಳಿತರು. ಆದರೆ ಸರ್ವರ್ ಸಮಸ್ಯೆಯಿಂದ ಮಧ್ಯಾಹ್ನದ ತನಕ ಸೇವೆ ಸಾಧ್ಯವೇ ಆಗಲಿಲ್ಲ. ಇದರಿಂದ ಬೆಳಿಗ್ಗೆ ಬ್ಯಾಂಕ್‌ಗೆ ಬಂದ ಗ್ರಾಹಕರು ಮಧ್ಯಾಹ್ನದವರೆಗೆ ಬ್ಯಾಂಕ್‌ನಲ್ಲೇ ಕಾಲ ದೂಡಿದರು.

ಹಣ ಪಾವತಿ ಹಾಗೂ ನಗದು ಪಡೆಯಲು ಆಧುನಿಕ ತಂತ್ರಜ್ಞಾನದ ಎಟಿಎಂ, ಆನ್‌ಲೈನ್ ಬ್ಯಾಂಕಿಂಗ್ ವ್ಯವಸ್ಥೆ, ಗೂಗಲ್ ಪೇ, ಫೋನ್ ಪೇ ಸೇರಿದಂತೆ ಹಲವು ಅವಕಾಶದ ಹಿನ್ನೆಲೆಯಲ್ಲಿ ಜನರಿಗೆ ಅಂತಹ ತೊಂದರೆಯೇನೂ ಆಗಲಿಲ್ಲ.

ಆದರೆ ಡಿಡಿ ಪಡೆಯುವುದು, ಚೆಕ್ ಪುಸ್ತಕ ಪಡೆಯುವುದು, ಸಾಲ ಪಾವತಿ ಸೇರಿದಂತೆ ಹಲವು ಕಾರ್ಯಗಳಿಗೆ ಬ್ಯಾಂಕ್‌ನಲ್ಲೇ ಕಾರ್ಯ ಸಾಧಿಸಬೇಕಿದೆ. ಇದರಿಂದ ಗ್ರಾಹಕರಿಗೆ ತೊಂದರೆಯಾಗಿತ್ತು. ಎಸ್‌ಬಿಐ ಬಿಟ್ಟು ಉಳಿದ ಎಲ್ಲಾ ಬ್ಯಾಂಕ್‌ಗಳಲ್ಲಿ ಯಾವುದೇ ಸಮಸ್ಯೆ ಇಲ್ಲದೆ ಸಹಜ ಕಾರ್ಯ ನಿರ್ವಹಣೆ ಇತ್ತು.

ಮನೆ ಬಾಗಿಲು ಮುರಿದು 34.67 ಲಕ್ಷ ನಗದು; 89 ಗ್ರಾಂ ಚಿನ್ನಾಭರಣ ಕಳವು

ವಿಜಯನಗರ 3ನೇ ಹಂತದಲ್ಲಿ ಬುಧವಾರ ಘಟನೆ

ಮೈಸೂರು, ಮಾ.28(ಆರ್‌ಕೆ)– ಬಾಗಿಲು ಮುರಿದು 34,67,000 ರೂ. ನಗದು ಮತ್ತು 7 ಲಕ್ಷ ರೂ. ಮೌಲ್ಯದ 89 ಗ್ರಾಂ ಚಿನ್ನಾಭರಣ ಕಳವು ಮಾಡಿರುವ ಘಟನೆ ಮೈಸೂರಿನ ವಿಜಯನಗರ 3ನೇ ಹಂತದಲ್ಲಿ ಕಳೆದ ಬುಧವಾರ ನಡೆದಿದೆ.

ವಿಜಯನಗರ 3ನೇ ಹಂತ, 'ಸಿ' ಬ್ಲಾಕ್, 9ನೇ ಕ್ರಾಸ್ ನಿವಾಸಿ ಶಿವರಾಮೇಗೌಡರ ಮಗ ಎಸ್.ಬಸವರಾಜು ಮನೆಯಲ್ಲಿ ಹಣ, ಆಭರಣ ಕಳವಾಗಿದೆ. ತಮ್ಮ ಸಹೋದರ ಎಸ್.ದೀಪಕ್ ನಡೆಸುತ್ತಿರುವ ವಜ್ರೇಶ್ವರಿ ಡೆವಲಪರ್‌ನಲ್ಲಿ ರಿಯಲ್ ಎಸ್ಟೇಟ್ ಬ್ಯುಸಿನೆಸ್ ಮಾಡಿಕೊಂಡಿರುವ ಬಸವರಾಜು, ವಹಿವಾಟಿನಲ್ಲಿ ಬಂದ ಹಣವನ್ನು ತಮ್ಮ ಮನೆಯಲ್ಲಿ ಇರಿಸುತ್ತಿದ್ದರು.

ಅದರಂತೆ ಕಳೆದ 3 ತಿಂಗಳಿಂದ ದೀಪಕ್ ವ್ಯವಹಾರದಲ್ಲಿ ಬಂದಿದ್ದ 34,67,000 ರೂ. ಹಣ ಮತ್ತು 89 ಗ್ರಾಂ ಚಿನ್ನಾಭರಣವನ್ನು ಮನೆಯ ಕೊಠಡಿ ವಾಲ್‌ಡ್ರೋಬ್‌ನಲ್ಲಿ ಇಟ್ಟಿದ್ದರು. ಸ್ವಂತ ಗ್ರಾಮವಾದ ಚಾಮರಾಜನಗರ ಜಿಲ್ಲೆ, ಶಿವನಸಮುದ್ರದಲ್ಲಿ ಹಬ್ಬವಿದ್ದ ಕಾರಣ, ಮಾರ್ಚ್ 25ರಂದು ಕುಟುಂಬ ಸಮೇತ ತೆರಳಿದ್ದರು.

ಹಣ, ಚಿನ್ನಾಭರಣವಿದ್ದ ಕಾರಣ ತಂಗಿ ಮಂಗಳ ಮತ್ತು ಆಕೆ ಪುತ್ರಿ ಅಕ್ಷತಾ ಅವರನ್ನು ಮನೆಯಲ್ಲಿ ರಾತ್ರಿ ಮಲಗುವಂತೆ ಹೇಳಿ ಹೋಗಿದ್ದರು. ಅದರಂತೆ ಅಂದು ರಾತ್ರಿ ಮಲಗಿದ್ದ ಅವರು, ಮಾರ್ಚ್ 26ರಂದು ಮುಂಜಾನೆ 2.45ರ ವೇಳೆಗೆ ಮನೆಗೆ ಬೀಗ ಹಾಕಿಕೊಂಡು ಸಹೋದರ ದೀಪಕ್ ಜೊತೆ ಶಿವನಸಮುದ್ರಕ್ಕೆ ತೆರಳಿದ್ದರು.

ಹಬ್ಬ ಮುಗಿಸಿಕೊಂಡು ಅಂದು ರಾತ್ರಿ 11 ಗಂಟೆ ವೇಳೆಗೆ ಮನೆಗೆ ಹಿಂದಿರುಗಿದ್ದಾಗ ಮುಂದಿನ ಬಾಗಿಲು ತೆರೆದಿರುವುದು ಕಂಡಿತು. ನಂತರ ಒಳಗೆ ಹೋಗಿ ನೋಡಿದಾಗ, ಕೊಠಡಿ ವಾಲ್‌ಡ್ರೋಬ್ ಲಾಕ್ ಮುರಿದು 14,67,000 ರೂ. ಮತ್ತು ಕಿಚನ್ ವಾಲ್‌ಡ್ರೋಬ್‌ನಲ್ಲಿದ್ದ 20,00,000 ರೂ. ನಗದು ಹಾಗೂ 89 ಗ್ರಾಂ ಚಿನ್ನಾಭರಣ ಕಳವು ಮಾಡಿರುವುದು ತಿಳಿಯಿತು.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ವಿಜಯನಗರ ಠಾಣೆ ಇನ್ಸ್‌ಪೆಕ್ಟರ್ ಸುರೇಶ್ ಕುಮಾರ್ ಹಾಗೂ ಸಿಬ್ಬಂದಿ ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಘಟನಾ ಸ್ಥಳಕ್ಕೆ ಡಿಸಿಪಿ ಎಸ್.ಜಾಹ್ನವಿ, ವಿಜಯನಗರ ಉಪ ವಿಭಾಗದ ಎಸಿಪಿ ರವಿಪ್ರಸಾದ್ ಭೇಟಿ ನೀಡಿ, ಪರಿಶೀಲಿಸಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

29.03.2025 ಶನಿವಾರ, ಮಳೆ ನಕ್ಷತ್ರ: ಉತ್ತರಭಾದ್ರಾ
17.03.2025 ರಿಂದ 30.03.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು,
ಫಾಲ್ಗುಣ ಮಾಸ, ಕೃಷ್ಣ ಪಕ್ಷ,
ತಿಥಿ: ಅಮಾವಾಸ್ಯೆ, ನಕ್ಷತ್ರ: ಉಭಾ,
ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 9 ರಿಂದ ಮೂಲವ್ಯಾಧಿ/ಪೈಲ್ಸ್ ರೋಗ ಚಿಕಿತ್ಸಾ ಶಿಬಿರ, ವಸಂತ ವೇಮನ ದೇಹ ಶುದ್ಧಿ ಚಿಕಿತ್ಸಾ ಶಿಬಿರ, ಇಸುಬು ತಪಾಸಣಾ ಶಿಬಿರ, ಒಟೋಮೈಕೋಸಿಸ್ –ಕಿವಿಯ ಫಂಗಲ್ ಸೋಂಕಿಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.
- **ಶ್ರೀ ಅಮೃತೇಶ್ವರ ದೇವಸ್ಥಾನ:** ಶನಿದೇವ ಕುಂಭರಾಶಿಯಿಂದ ಮೀನ ರಾಶಿಗೆ ಪ್ರವೇಶ ಮಾಡುತ್ತಿರುವುದ ರಿಂದ ಮೇಷ, ಕರ್ಕಾಟಕ, ಸಿಂಹ, ತುಲಾ, ವೃಶ್ಚಿಕ, ಮಕರ ರಾಶಿಯವರಿಗೆ ಶನಿಮಹಾಶಾಂತಿ, ಬೆಳಗ್ಗೆ 7.30ಕ್ಕೆ ಹೋಮ, ಪೂರ್ಣಾಹುತಿ, ಸ್ಥಳ: ದೇವಸ್ಥಾನ, ದೇವರಾಜ ಮೊಹಲ್ಲಾ.
- **ಶಾರಾವಿ ಫೌಂಡೇಶನ್ :** ಮೂಳೆ ಮತ್ತು ಸಂಧಿಗಳ ಸಮಸ್ಯೆಗೆ ಉಚಿತ ಆಯುರ್ವೇದ ತಪಾಸಣಾ ಶಿಬಿರ, ಸ್ಥಳ: ಭವೇದ್ ಆಯುರ್ವೇದ, ಗೋಕುಲಂ, ಬೆಳಗ್ಗೆ 9 ರಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ :** ಒಬೆಸಿಟಿ (ತೂಕ ಇಳಿಸುವಿಕೆ) ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಗೆ.
- **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.
- **ಶ್ರೀಹೊಸ ಮಠ :** ಅಲ್ಲಮಪ್ರಭು ಜಯಂತಿ ಮತ್ತು ಚರಮೂರ್ತಿ ಆಸ್ಥಾನ ವಿದ್ವಾನ್ ಶ್ರೀ ಬಸವಲಿಂಗ ಸ್ವಾಮಿಗಳವರ 74ನೇ ವರ್ಷದ ಪುಣ್ಯಾರಾಧನಾ ಮಹೋತ್ಸವ, ಸಾನ್ನಿಧ್ಯ : ಶ್ರೀ ಹೊಸಮಠದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ : ಶಾಸಕ ಟಿ.ಎಸ್. ಶ್ರೀವತ್ಸ, ಅಧ್ಯಕ್ಷತೆ : ಶ್ರೀ ಗೌರಿಶಂಕರ ಸ್ವಾಮೀಜಿ, ಸಂಸ್ಕೃತಿ ಚಿಂತಕ ಶಂಕರ್ ದೇವನೂರು ಅವರಿಂದ ಆಧುನಿಕ ಜಗತ್ತಿಗೆ ಅಲ್ಲಮನ ಪ್ರಸ್ತುತತೆ ಕುರಿತು ಪ್ರವಚನ, ಉಪಸ್ಥಿತರು : ಶ್ರೀ ಗುರುಶಾಂತ ಸ್ವಾಮೀಜಿ, ಶ್ರೀ ಚಂದ್ರಶೇಖರ ಸ್ವಾಮೀಜಿ, ಶ್ರೀ ಇಮ್ಮಡಿ ಮಡಿವಾಳ ಸ್ವಾಮೀಜಿ, ಶ್ರೀ ಶಿವಪ್ರಭು ಸ್ವಾಮೀಜಿ, ಶ್ರೀ ನಂದಿಕೇಶ್ವರ ಸ್ವಾಮೀಜಿ, ಶ್ರೀ ನಟರಾಜ ಕಲಾ ತಂಡದಿಂದ ವಚನ ಗಾಯನ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30 ರಿಂದ.
- **ಬಿಜಿಎಸ್ ಬಿ.ಇಡಿ. ಕಾಲೇಜು :** ಬೋಧನೆ – ಕಲಿಕೆ ಸಮಕಾಲೀನ ಸಂದರ್ಭ ಹಾಗೂ ಸವಾಲುಗಳು ಕುರಿತು ಸಂವಾದ ಕಾರ್ಯಕ್ರಮ, ಸಾನ್ನಿಧ್ಯ : ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಶಾಖಾ ಮಠದ ಕಾರ್ಯದರ್ಶಿ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಲೇಖಕ ಪ್ರೊ. ರಹಮತ್ ತರೀಕೆರೆ ಅವರಿಂದ ವಿಶೇಷ ಉಪನ್ಯಾಸ, ಉಪಸ್ಥಿತರು : ಬಿಜಿಎಸ್ ವಿದ್ಯಾಪೀಠ ಆಡಳಿತಾಧಿಕಾರಿ ಶ್ರೀಮತಿ ಹೆಚ್. ಯಶೋಧ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಡಾ. ನಾಗರಾಜು, ಸ್ಥಳ: ಬಿಜಿಎಸ್ ಬಿ.ಇಡಿ ಕಾಲೇಜು ಸಭಾಂಗಣ, ಕುವೆಂಪುನಗರ, ಬೆಳಗ್ಗೆ 10.30ಕ್ಕೆ.
- **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಮೈಸೂರು ಶರಣ ಮಂಡಲಿ :** ಸಂತ ಶಿಶುನಾಳ ಪರಿಷತ್ ಪ್ರಶಸ್ತಿ ಪುರಸ್ಕೃತರಾದ ಪ್ರೊ. ಎಸ್. ಮಲ್ಲಣ್ಣ ಅವರಿಗೆ ಅಭಿನಂದನಾ ಸಮಾರಂಭ, ಅಧ್ಯಕ್ಷತೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಅಭಿನಂದಿಸುವವರು : ಮಾಜಿ ಶಾಸಕ ತೋಂಟದಾರ್ಯ, ಸಮಾಜ ಸೇವಕ ಕೆ. ರಘುರಾಂ ವಾಜಪೇಯಿ, ಸ್ಥಳ: ಜಿಲ್ಲಾ ಪತ್ರಕರ್ತರ ಸಂಘದ ಆವರಣ, ತ್ಯಾಗರಾಜ ರಸ್ತೆ, ಬೆಳಗ್ಗೆ 11.30ಕ್ಕೆ.
- **ಕಲಾಸುರುಚಿ ರಂಗಮನೆ :** ಕಥೆ ಕೇಳೋಣ ಬನ್ನಿ ಕಾರ್ಯಕ್ರಮ, ಕಥೆ ಹೇಳುವವರು : ನಿವೃತ್ತ ಉಪ ಪ್ರಾಂಶುಪಾಲರಾದ ಮಲ್ಲಮ್ಮ, ಸ್ಥಳ: ಸುರುಚಿ ರಂಗಮನೆ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 4.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ನಖ ಶಿಖಾಂತ–ಅಂದ ಆರೋಗ್ಯಗಳ ಆಪ್ತ ಮಾಹಿತಿ, ಪ್ರಸ್ತುತಿ: ಡಾ. ಕೇಶವ ಕೊರಸೆ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಅಂಬಯ್ಯನುಲಿ, ಎಂ.ಎಸ್. ಲಕ್ಷ್ಮೀಶ, ವ್ಯಾಖ್ಯಾನ– ಡಾ. ಮ. ರಾಮಕೃಷ್ಣ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಹಾದಿಯಲ್ಲಿ ಕಂಡ ಮುಖ – ಬಾನುಲಿ ಸರಣಿ, ಪ್ರಸ್ತುತಿ : ಅಬ್ದುಲ್ ರಶೀದ್, 9.00 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ನಮ್ಮೂರ್ ಹೆಸರು, ಪ್ರಸ್ತುತಿ: ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಹಿಂದಿ ಚಿತ್ರಗೀತೆಗಳು, 3.00 ಜನಪದ ಸಂಗೀತ, 3.30 ಮಕ್ಕಳ ಮಂಟಪ–ನಂಜನಗೂಡು ತಾಲೂಕು ಹೊಸಕೋಟೆ ಗ್ರಾಮದ ಮಹಾಂತೇಶ್ವರ ಆಂಗ್ಲ ಮಾಧ್ಯಮ ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.00 ನಾಟಕ–ಮುಖವಾಡ ಹೊದ್ದ ಮನಸ್ಸು, ಮೂಲ ನೇಪಾಳಿ–ರಾಜು ಪ್ರಧಾನ್ ಹಿಮಾಂಶು, ಹಿಂದಿ ಅನುವಾದ–ಶೋಭಾ ಲಿಂಬು, ಕನ್ನಡ ಅನುವಾದ– ಡಾ. ಹೆಚ್.ಎಂ. ಕುಮಾರಸ್ವಾಮಿ, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 4.30 ನೆನಪಿನಂಗಳ (ಧ್ವನಿ ಭಂಡಾರದಿಂದ), 6.50 ಕೃಷಿರಂಗ : ಕಿಸಾನ್ ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ ಸಮಗ್ರ ಕೃಷಿಯ ಪ್ರಾಮುಖ್ಯತೆ ಕುರಿತು ಸಂವಾದ. ಭಾಗವಹಿಸುತ್ತಾರೆ–ಕೆ.ಆರ್.ಪೇಟೆ ತಾಲೂಕು ಕಿಕ್ಕೇರಿ ಹೋಬಳಿ ಮಾಂಡಲೀಕನಹಳ್ಳಿಯ ಕೃಷಿಕ ದಂಪತಿ ಕೆ.ಎಸ್. ರಾಜೇಗೌಡ ಮತ್ತು ಕಾಂಚನಾ, ಪ್ರಸ್ತುತಿ : ಎನ್. ಕೇಶವಮೂರ್ತಿ, 8.15 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು, 9.30 ಯುವವಾಣಿ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ಪ್ರಬೀರ್ ಭಟ್ಟಾಚಾರ್ಯ–ಸಿತಾರ್ ವಾದನ

- **ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಸಪ್ತಸ್ವರ ಬಳಗ :** ಗಾನಯೋಗಿ ಪಂಡಿತ್ ಪಂಚಾಕ್ಷರ ಗವಾಯಿ ಸ್ಮರಣಾರ್ಥ ವಚನ ಗಾಯನ, ಉದ್ಘಾಟನೆ : ಸುಗಮ ಸಂಗೀತ ಕಲಾವಿದೆ ಶ್ರೀಮತಿ ಹೆಚ್.ಆರ್. ಲೀಲಾವತಿ, ಹಿಂದೂಸ್ಥಾನಿ ಗಾಯಕ ಪಂಡಿತ್ ರಮೇಶ್ ಕೋಲ್ಕುಂದ ಅವರಿಂದ ವಚನ ಗಾಯನ, ಪಂಡಿತ್ ಭೀಮಾಶಂಕರ್ ಬಿದನೂರು–ತಬಲ, ಪಂಡಿತ್ ವೀರಭದ್ರಯ್ಯ ಹಿರೇಮಠ– ಹಾರ್ಮೋನಿಯಂ, ಉಪಸ್ಥಿತರು : ಸಪ್ತಸ್ವರ ಬಳಗದ ಅಧ್ಯಕ್ಷ ಡಾ. ಜಿ. ಸಿದ್ದೇಶ್, ಕಾರ್ಯದರ್ಶಿ ಶ್ರೀಮತಿ ದಾಕ್ಷಾಯಿಣಿ ಸೋಮಶೇಖರಪ್ಪ, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು. ಸದಾನಂದಯ್ಯ, ಸ್ಥಳ: ರಮಾಗೋವಿಂದ ರಂಗ ಮಂದಿರ, ರಾಮಕೃಷ್ಣನಗರ, ಸಂಜೆ 5.30ಕ್ಕೆ.
- **ರಾಗ ಮ್ಯೂಸಿಕ್ ಅಕಾಡೆಮಿ :** 102ನೇ ಸಂಗೀತ ಕಾರ್ಯಕ್ರಮ, ವಿದುಷಿ ಧನ್ಯಾ ದಿನೇಶ್ ರುದ್ರಪಟ್ಣಂ ಅವರಿಂದ ಸಂಗೀತ ಗಾಯನ, ವಿದುಷಿ ಪೃಥ್ವಿ ಭಾಸ್ಕರ್–ವಯೋಲಿನ್, ವಿದ್ವಾನ್ ನಂದನ್ ಕಶ್ಯಪ್–ಮೃದಂಗ, ವಿದ್ವಾನ್ ಶ್ರೀನಿಧಿ ಕೌಂಡಿನ್ಯ–ಘಟಂ, ಸ್ಥಳ: ಶ್ರೀ ಬಿಡಾರಂ ಕೃಷ್ಣಪ್ಪ ಪ್ರಸನ್ನ ಸೀತಾರಾಮ ಮಂದಿರ, ಎನ್.ಎಸ್. ರಸ್ತೆ, ಸಂಜೆ 6ಕ್ಕೆ
- **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀ ರಾಮಕೃಷ್ಣ ವಚನವೇದ ಕುರಿತು ಪ್ರವಚನ, ಸ್ಥಳ: ಸ್ವಾಮಿ ಶಾಂಭವಾನಂದಜಿ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.
- **ಕಲಾಸುರುಚಿ ರಂಗಮನೆ :** ಸಾಹಿತ್ಯ ಚಾವಡಿ ಸಂವಾದ ಕಾರ್ಯಕ್ರಮ, ಪ್ರಾಧ್ಯಾಪಕರು ಹಾಗೂ ಗಮಕಿ ಡಾ.ಜ್ಯೋತಿಶಂಕರ್ ಸಂಚಿಯ ಹೊನ್ನಮ್ಮನ ಹದಿಬದೆಯ ಧರ್ಮ ಕೃತಿಯ ಕುರಿತು ಭಾಷಣ, ಸ್ಥಳ: ಸುರುಚಿ ರಂಗಮನೆ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6.30ಕ್ಕೆ.
- **ರಂಗಾಯಣ :** ರಂಗಾಯಣ ಧಾರವಾಡದ ಕಲಾವಿದರಿಂದ ಸತ್ತವರ ನೆರಳು ನಾಟಕ ಪ್ರದರ್ಶನ, ರಚನೆ : ಜಡಭರತ, ನಿರ್ದೇಶನ : ಹುಲುಗಪ್ಪ ಕಟ್ಟೀಮನಿ, ಸ್ಥಳ : ಭೂಮಿಗೀತ, ರಂಗಾಯಣ, ಸಂಜೆ 6.30ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 29 ಶನಿವಾರ 2025

₹4

ಸಂಪುಟ: 45 | ಸಂಚಿಕೆ: 339 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ನಕ್ಕರೆ ಅದೇ ಸ್ವರ್ಗ

ಶಿಕ್ಷಕರು : ಗಾಳಿ ಪಟ ಎಷ್ಟೇ ದೂರ ಹೋದ್ರೂ ದಾರ ನಮ್ಮ ಕೈಯಲ್ಲೇ ಇರುತ್ತೆ. ಇದಕ್ಕೆ ಒಂದು ಉದಾಹರಣೆ ಕೊಡು?

ವಿದ್ಯಾರ್ಥಿ : ಮೆಸೇಜ್ ಎಷ್ಟೇ ದೂರ ಹೋದ್ರೂ ಮೊಬೈಲ್ ನಮ್ಮ ಕೈಯಲ್ಲೇ ಇರುತ್ತೆ.

ಮೈಸೂರು ಮಿತ್ರ

ಶನಿವಾರ, 29 ಮಾರ್ಚ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ನೀವು ಬೇರೆಯವರ ತಪ್ಪುಗಳಿಂದ ಕಲಿಯಬೇಕು. ಏಕೆಂದರೆ ಎಲ್ಲ ತಪ್ಪುಗಳನ್ನು ನೀವೇ ಮಾಡಿ ಕಲಿಯುವಷ್ಟು ದೊಡ್ಡ ಜೀವನ ನಿಮ್ಮ ನಿಮ್ಮ ಬಳಿಯಿಲ್ಲ. – ಚಾಣಕ್ಯ ಆಚಾರ್ಯ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕಣ್ಣಾರೆ ಕಂಡರೂ ಪರಿಶೀಲಿಸಿ ನೋಡಬೇಕು.

ನಿಮ್ಮ ಪತ್ರಗಳು

ರಸ್ತೆ ಅಗೆದು ಹಾಗೆ ಬಿಟ್ಟಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಿ

ಮಾನ್ಯರೆ,



ಇದು ಮೈಸೂರಿನ ಕುವೆಂಪು ನಗರದ ವಿಶ್ವ ಮಾನವ ಜೋಡಿ ರಸ್ತೆಯ ಕುಕ್ಕರ ಹಳ್ಳಿ ರಸ್ತೆ "ರಿವರ್" ಶೋ ರೂಂ ಎದುರು ನೀರಿನ ಸಂಪರ್ಕ ಪಡೆಯವ ಸಲುವಾಗಿ ಮುಖ್ಯ ರಸ್ತೆಯನ್ನು ಅಗೆದು ಕಳೆದ ನಾಲ್ಕು ದಿನಗಳಿಂದ ಮುಚ್ಚದೇ ಹಾಗೇ ಬಿಟ್ಟಿರುವುದರಿಂದ ಇಲ್ಲಿ ರಸ್ತೆ ಅಪಘಾತಗಳು ಸಂಭವಿಸುತ್ತಲೇ ಇವೆ. ಈ ರಸ್ತೆಯಲ್ಲಿ ಮೈಸೂರಿನಲ್ಲೇ ಅತ್ಯಂತ ಹೆಚ್ಚು ವಾಹನಗಳು ಓಡಾಡುವುದರಿಂದ ಅಪಘಾತಗಳು ಸಂಭವಿಸುತ್ತಿವೆ. ನಿನ್ನೆ ಒಂದೇ ದಿನ ಇಲ್ಲಿ ನಾಲ್ಕು ವಾಹನ ಅಪಘಾತಗಳು ಸಂಭವಿಸಿದ್ದು ವಾಹನ ಸವಾರರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ನೀರಿನ ಸಂಪರ್ಕಕ್ಕಾಗಿ ರಸ್ತೆ ಅಗೆಯಲು ನಗರಪಾಲಿಕೆಗೆ ಸಾರ್ವಜನಿಕರು ಮೂರರಿಂದ – ಐದು ಸಾವಿರ ಶುಲ್ಕ ಪಾವತಿಸಬೇಕು. ಆದರೆ, ಈ ರೀತಿ ಅಗೆದ ರಸ್ತೆಗಳನ್ನು ನಗರ ಪಾಲಿಕೆ ಅಧಿಕಾರಿಗಳು ಮುಚ್ಚುವುದೇ ಇಲ್ಲ. ಇದು ಮೈಸೂರಿನ ಎಲ್ಲಾ ಕಡೆಯೂ ಇರುವ ಸಮಸ್ಯೆ. ಈ ರೀತಿ ಅಗೆದ ರಸ್ತೆಗಳನ್ನು ಮುಚ್ಚಬೇಕು ಎಂಬ ಕನಿಷ್ಠ ಜ್ಞಾನವೂ ನಗರ ಪಾಲಿಕೆಯ ಅಧಿಕಾರಿಗಳಿಗೆ ಇಲ್ಲವೆ? ಇನ್ನು ಮುಂದೆ ಇಂತಹ ರಸ್ತೆ ಅಪಘಾತಗಳು ಸಂಭವಿಸಿದಾಗ ನಗರ ಪಾಲಿಕೆಯ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಬೇಕು.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ಪಾಲಿಕೆ ಅಧಿಕಾರಿಗಳಿಗೆ ಈ ಸಮಸ್ಯೆ ಬಗೆಹರಿಸಲು ಮನಸ್ಸಿಲ್ಲವೇ?



ಮಾನ್ಯರೆ,

ಸಾಂಸ್ಕೃತಿಕ ನಗರಿ ಮೈಸೂರಿನ ಕುವೆಂಪುನಗರ ನೃಪತುಂಗ ರಸ್ತೆ (ಶಾಂತಿ ಸಾಗರ್ ಕಾಂಪ್ಲೆಕ್ಸ್‌ನಿಂದ – ಕುವೆಂಪುನಗರ ಬಸ್ ಡಿಪೋ ಸರ್ಕಲ್) ಯಲ್ಲಿರುವ ಫುಟ್‌ಪಾತ್‌ಗಳನ್ನು ಆಕ್ರಮಿಸಿಕೊಂಡು ವ್ಯಾಪಾರ ವಹಿವಾಟುಗಳನ್ನು ನಡೆಸುವುದರ ಜೊತೆಗೆ ಮನೆ ನಿರ್ಮಾಣ ಕಾರ್ಯ ಎಗ್ಗಿಲ್ಲದೆ ನಡೆಯುತ್ತಿದೆ. ಕಟ್ಟಡ ಕೆಲಸಗಳು ಮುಕ್ತಾಯವಾಗಿದ್ದರೂ ರಸ್ತೆಯೂ ಸೇರಿ ಫುಟ್‌ಪಾತ್‌ನ ಮೇಲೆ ಇಟ್ಟಿಗೆ, ಮರಳು, ಕಬ್ಬಿಣ ಎಲ್ಲಾ ಸಾಮಗ್ರಿಗಳನ್ನು ಹಾಕಲಾಗಿದೆ. ನಗರ ಪಾಲಿಕೆಯಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಫುಟ್‌ಪಾತ್ ನಿರ್ಮಾಣ ಮಾಡಿದ್ದು, ಈ ಫುಟ್ ಪಾತ್‌ನಲ್ಲಿ ಸಿಮೆಂಟ್, ಇಟ್ಟಿಗೆ, ಕಟ್ಟಡ ಸಾಮಾಗ್ರಿಗಳನ್ನು ಇಟ್ಟು ಪಾದಚಾರಿ ಮಾರ್ಗ ಹಾಳಾಗಿದೆ. ಫುಟ್‌ಪಾತ್‌ನಲ್ಲಿ ಹಗಲು ಇರುಳೆನ್ನದೆ ವ್ಯಾಪಾರ ವಹಿವಾಟುಗಳು ರಾತ್ರಿ 11ರವರೆಗೆ ನಡೆಯುತ್ತದೆ. ಇಷ್ಟೆಲ್ಲಾ ನಡೆಯುತ್ತಿದ್ದರೂ ಸಹ ಈ ವಾರ್ಡಿಗೆ ಸಂಬಂಧಿಸಿದ ಅಧಿಕಾರಿಗಳು ಯಾವುದೇ ಕ್ರಮ ತೆಗೆದುಕೊಳ್ಳುತ್ತಿಲ್ಲವೇಕೆ? ನಗರ ಪಾಲಿಕೆಯ ಕೆಲ ಅಧಿಕಾರಿಗಳಿಗೆ ಮಾಹಿತಿ ಕೊಟ್ಟರೂ ಸಹ ಯಾವುದೇ ಪ್ರಯೋಜನವಾಗುತ್ತಿಲ್ಲ. ಫುಟ್‌ಪಾತ್ ಆಕ್ರಮಿಸಿಕೊಂಡು ವ್ಯಾಪಾರ ವಹಿವಾಟುಗಳು ನಡೆದರೆ ಹಿರಿಯ ನಾಗರಿಕರು, ಮಕ್ಕಳು, ಗರ್ಭಿಣಿಯರು, ವೃದ್ಧರು ಎಲ್ಲಿ ಓಡಾಡುವುದು. ಅಲ್ಲದೆ ಈ ರಸ್ತೆಯು ಪ್ರಮುಖ ಮುಖ್ಯ ರಸ್ತೆಯಾಗಿರುವುದರಿಂದ ಜನದಟ್ಟಣೆ, ನಗರ ಸಾರಿಗೆ ಬಸ್ಸುಗಳು ಸಂಚರಿಸುವುದರಿಂದ ಪಾದಚಾರಿಗಳು ತುಂಬಾ ಕಷ್ಟಕರವಾಗಿದೆ. ಕೆಲವು ಸಮಯದಲ್ಲಿ ಅಪಘಾತಗಳು ಸಂಭವಿಸುತ್ತದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಈ ಕೂಡಲೇ ಫುಟ್‌ಪಾತ್ ಅನ್ನು ತೆರವುಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಮುಂದಾಗಬೇಕು.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು

ಯತ್ನಾಳ್‌ಗೆ ಮಣೆ ಹಾಕದ ಬಿಜೆಪಿ ವರಿಷ್ಠರು

ಮಾನ್ಯರೆ,

ರಾಜ್ಯದ ಬಿಜೆಪಿ ನಾಯಕತ್ವದ ವಿರುದ್ದ ನಿರಂತರವಾಗಿ ಟೀಕೆ ಮಾಡುತ್ತಾ ಆರೋಪಗಳ ಮೇಲೆ ಆರೋಪಗಳನ್ನು ಮಾಡುತ್ತಾ ಬಂದಿದ್ದ ಭಿನ್ನಮತೀಯ ಬಿಜೆಪಿ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಅವರನ್ನು ಭಾರತೀಯ ಜನತಾ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಆರು ವರ್ಷಗಳ ಕಾಲ ಉಚ್ಚಾಟನೆ ಮಾಡಿರುವುದು ಮಾಧ್ಯಮಗಳಲ್ಲಿ ವರದಿಯಾಗಿದೆ. ಪಕ್ಷದ ಶಿಸ್ತನ್ನು ಪದೇ ಪದೆ ಉಲ್ಲಂಘನೆ ಮಾಡುತ್ತಿದ್ದ ಯತ್ನಾಳ್, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರನ್ನು ಆ ಹುದ್ದೆಯಿಂದ ತೆಗೆದು ಹಾಕಲು ಬಿಜೆಪಿ ವರಿಷ್ಠ ನಾಯಕರನ್ನು ಒತ್ತಾಯಿಸುತ್ತಲೇ ಬಂದಿದ್ದರು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ವಿರುದ್ದ ಸಹ ಹಲವಾರು ಗುರುತರ ಆರೋಪಗಳನ್ನು ಮಾಡಿದ್ದರು. ಯತ್ನಾಳ್ ಆರೋಪಗಳ ಬಗ್ಗೆ ಕೇಂದ್ರ ಬಿಜೆಪಿ ನಾಯಕರು ಮೌನ ವಹಿಸುತ್ತಲೇ ಬಂದಿದ್ದರು. ಹಿಂದೆ ಕೂಡ ಪಕ್ಷದ ಅಧಿಕೃತ ಅಭ್ಯರ್ಥಿ ವಿರುದ್ದ ಸ್ಪರ್ಧೆ ಮಾಡಿದ್ದ ಆರೋಪದ ಮೇಲೆ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿತ್ತಾದರೂ ಸಹ ನಂತರದ ವರ್ಷಗಳಲ್ಲಿ ಅವರನ್ನು ಪಕ್ಷಕ್ಕೆ ಪುನಃ ಸೇರ್ಪಡೆ ಮಾಡಿಕೊಳ್ಳಲಾಗಿತ್ತು.

ಇದೀಗ ಯತ್ನಾಳರನ್ನು ಪಕ್ಷದಿಂದ ಮತ್ತೆ ಉಚ್ಚಾಟನೆ ಮಾಡುವುದರ ಮೂಲಕ ಅವರು ಮಾಡುತ್ತಿದ್ದ ಆರೋಪಗಳಲ್ಲಿ ಹುರುಳಿಲ್ಲ ಎಂಬ ನಿರ್ಧಾರಕ್ಕೆ ಬಿಜೆಪಿ ವರಿಷ್ಠರು ಬಂದಿರಬಹುದು. ಈ ಉಚ್ಚಾಟನೆಯ ಮೂಲಕ ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ ಎಂಬ ಸಂದೇಶವನ್ನು ಬಿಜೆಪಿ ಹೈಕಮಾಂಡ್ ರವಾನಿಸಿದೆ. ಯತ್ನಾಳರನ್ನು ಬೆಂಬಲಿಸುತ್ತಿದ್ದ ಇತರ ಭಿನ್ನಮತೀಯರ ಮುಂದಿನ ನಡೆ ಈಗ ಕುತೂಹಲಕಾರಿಯಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು



ಆರ್.ಪಿ. ಜಗದೀಶ್
ಹಿರಿಯ ಪತ್ರಕರ್ತರು,
ಮೊ: 98450–48051

ಸಕಾಲಿಕ

ಮಾಡಿದ್ದುಣ್ಣೋ ಮಾರಾಯಾ... ಮತದಾರ!







> ಮಹಾತ್ಮ ಗಾಂಧೀಜಿ ತಮ್ಮ ಕಣ್ಣು, ಬಾಯಿ, ಕಿವಿ ಮುಚ್ಚಿಕೊಂಡು ಮೌನವಾಗಿದ್ದಾರೆ. ರಾಜ್ಯದ ಆಡಳಿತದ ಚುಕ್ಕಾಣಿ ಹಿಡಿದಿರುವ ವಿಧಾನಸೌಧ (ಶಕ್ತಿಸೌಧ) ಹಾಗೂ ವಿಕಾಸ ಸೌಧಗಳಲ್ಲಿನ ಲಂಚಾವತಾರ ನೋಡಿ ಸತ್ಯವಂತರಿಗಿದು ಕಾಲವಲ್ಲ ಎಂದು 'ಗಾಂಧೀಜಿ' ಈ ಎರಡು ಸೌಧಗಳ ಮಧ್ಯೆ ಮೌನ ಮುಷ್ಕರ ಮಾಡುತ್ತಿದ್ದಾರೆ ಎನ್ನುವಂತಿದೆ.

ಬೆಲೆ ಏರಿಕೆ ಬಿಸಿಯಿಂದ ತತ್ತರಿಸಿರುವ ರಾಜ್ಯದ ಜನತೆಗೆ ಕಾಂಗ್ರೆಸ್ ಸರ್ಕಾರ ಶಾಕ್ ಮೇಲೆ ಶಾಕ್ ನೀಡುತ್ತಿದೆ. ಈಗಾಗಲೇ ಬೇಸಿಗೆ ಬಿರು ಬಿಸಿಲಲ್ಲಿ ಬೆಂದು ನೊಂದಿರುವ ಕರುನಾಡ ಜನರಿಗೆ ಮತ್ತೊಂದು ಬೆಲೆ ಏರಿಕೆ ಮಾಡಿ ಯುಗಾದಿ ಉಡುಗೊರೆ ನೀಡಿದೆ. ಆದರೆ ಮುಖ್ಯಮಂತ್ರಿ, ಸಚಿವರು, ಶಾಸಕರು ಮಾತ್ರ ಹೇಳದೆ–ಕೇಳದೆ, ಚರ್ಚೆಯೂ ಆಗದೇ, ಆ ಮೂಲಕ ಜನಾಭಿಪ್ರಾಯವನ್ನೂ ಪಡೆಯದೇ ದಿಢೀರ್ ಸಂಬಳ, ಸಾರಿಗೆ ಸೇರಿದಂತೆ ತಮಗೆ ಬೇಕಾದ ಎಲ್ಲಾ ಸೌಲಭ್ಯಗಳನ್ನು ಪಡೆದುಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ದಿನೇ ದಿನೆ ಏರುತ್ತಿರುವ ಬೆಲೆಗಳಿಂದ ಹೈರಾಣಾಗುತ್ತಿರುವ ಜನರು ಕಂಗೆಟ್ಟು, ಕಣ್ಣು–ಬಾಯಿ ಬಿಡುತ್ತಿರುವಾಗ ತಮಗೇನೂ ಆಗಿಯೇ ಇಲ್ಲವೆಂಬಂತೆ ಈ ಜನಪ್ರತಿನಿಧಿಗಳು ತಮ್ಮ ಸೌಲಭ್ಯಗಳು, ಭತ್ಯೆಗಳನ್ನು ಡಬ್ಬಲ್ ಮಾಡಿಕೊಂಡು ತಲೆ ತಗ್ಗಿಸುವ ಬದಲು ಬೀಗುತ್ತಿದ್ದಾರೆ.

ಸಾರ್ವಜನಿಕರು ಏನೆಂದುಕೊಂಡಾರೆಂಬ ಅಂಜಿಕೆಯೂ ಇಲ್ಲದೆ ಈ ನಮ್ಮ ವಿಧಾನ ಮಂಡಲದ 300 ಮಂದಿ ಶಾಸಕರು ತಮ್ಮ ಆತ್ಮಸಾಕ್ಷಿಯನ್ನು ಮಾರಿಕೊಂಡಿದ್ದಾರೆ. ಹವಾನಿಯಂತ್ರಿತ ಕಾರು, ಕೊಠಡಿ, ವಸತಿ, ವೇತನ, ಅತಿಥಿಗಳ ಸತ್ಕಾರ ಭತ್ಯೆ, ಪ್ರವಾಸ ಭತ್ಯೆ ಹೀಗೆ ರಾಜ–ಮಹಾರಾಜರುತೆ ವೈಭೋಗ ಅನುಭವಿಸುತ್ತಿದ್ದಾರೆ. ಹಿಂದೆಲ್ಲಾ ಏಕೈಕ ರಾಜ ಐಷಾರಾಮಿ ಜೀವನ ನಡೆಸಿದರೆ ಈಗ ನೂರಾರು ಆಧುನಿಕ ರಾಜರು ವೈಭೋಗದಿಂದ ಮೆರೆಯುತ್ತಿದ್ದಾರೆ.

ದಿನನಿತ್ಯ ಹೊಟ್ಟೆಪಾಡಿಗಾಗಿ ಬಡಜನರು, ಮಡಿಕೆ–ಕುಡಿಕೆ ಮಾಡುವವರು, ಚಪ್ಪಲಿ ಹೊಲೆಯುವವರು, ಬೀದಿ ಬದಿಯಲ್ಲಿ ಗಾಡಿಯಲ್ಲಿ ತರಕಾರಿ, ಹೂವು, ಹಣ್ಣು ಹಂಪಲು ಮಾರುವವರು, ಮನೆಗಳಲ್ಲಿ ಕೆಲಸ ಮಾಡುವ ಆಳು–ಕಾಳುಗಳಿಗೆ ಬೆಲೆ ಏರಿಕೆ ಬಿಸಿ ತಟ್ಟಿಲ್ಲವೇ? ಅವರಿಗೂ ಉತ್ತಮ ಸಂಬಳ ಹಾಗೂ ನಿಮ್ಮಷ್ಟೇ ಸೌಲಭ್ಯಗಳು ದೊರಕುವಂತೆ ಮಾಡುವುದು ನಿಮ್ಮ ಜವಾಬ್ದಾರಿ ಅಲ್ಲವೆ?

ಜತೆಗೆ ನೀವುಗಳು ನಡೆಸುವ ಶೈಕ್ಷಣಿಕ ಸಂಸ್ಥೆಗಳು, ಆಸ್ಪತ್ರೆಗಳು, ಹೋಟೆಲ್‌ಗಳು, ಶಾಲಾ ಕಾಲೇಜುಗಳು, ವಿವಿಧ ರೀತಿಯ ವಹಿವಾಟುಗಳಲ್ಲಿ ದುಡಿಯುವ ಜನರಿಗೂ ಬೆಲೆ ಏರಿಕೆ ಬಿಸಿ ತಟ್ಟದಂತೆ ಅವರ ಸಂಬಳ–ಸಾರಿಗೆ ಇತರ ಸೌಲಭ್ಯಗಳನ್ನು ಹೆಚ್ಚಿಸಿ. ಆಗ ನಿಮ್ಮ ಸಾಮಾಜಿಕ ನ್ಯಾಯದ ಪರಿಕಲ್ಪನೆ ಸಾಕಾರವಾಗುತ್ತದೆ.

ಬಡ ಮಕ್ಕಳ ಪೋಷಣೆ–ಪಾಲನೆ ಮಾಡುತ್ತಿರುವ ಅಂಗನವಾಡಿ ಕಾರ್ಯಕರ್ತರಂತಹ ಸೇವಕರಿಗೆ ನೀವು ಈ ಸೌಲಭ್ಯಗಳನ್ನು ನೀಡುವ ಮನಸ್ಸು ಮಾಡಿ. ಈ ಉರಿಬಿಸಿಲಿನಲ್ಲಿ ಬೀದಿ – ಬಯಲಲ್ಲಿ ಬಿದ್ದು– ಎದ್ದು ಬದುಕುತ್ತಿರುವ ಬಡಜನರ ಬಗ್ಗೆ ನಿಮಗೆ ಕರುಣೆ ಇಲ್ಲವೆ. ಎಂತಹ ಹೃದಯ ಹೀನ ಬದುಕು ನಿಮ್ಮದು. ಇಷ್ಟನ್ನು ನೋಡಿಯೂ ಅದು ಹೇಗಾದರೂ ನಿಮಗೆ ಐಷಾರಾಮಿ ಜೀವನ, ಪಂಚತಾರಾ ಹೋಟೆಲ್‌ಗಳಲ್ಲಿ ಮೋಜು ಮಸ್ತಿ ಮಾಡಲು ಮನಸ್ಸು ಬರುತ್ತದೆ.

ನಿಮ್ಮ ಬೆಲೆ ಏರಿಕೆ 'ಶಾಕ್' ನಿರ್ಧಾರಗಳಿಂದ ಜನ ಬೇಸತ್ತು ಹೋಗಿದ್ದಾರೆ. ಈ ನಡುವೆ ಸುಳಿಯರ (Honey trap) ಸಹವಾಸದ ವಿಚಾರ ಬೇರೆ ಸದ್ದು ಮಾಡುತ್ತಿದೆ. ಶ್ರೀಮಂತ ರಾಜಕಾರಣಿಗಳು, ಅಧಿಕಾರಿಗಳ ಕುಟುಂಬಗಳ ವೈಭೋಗದ ಜೀವನ ಕಣ್ತೆರೆದು ನೋಡಲಾಗದು.

ಈ ಕಾರಣದಿಂದಲೇ ಮಹಾತ್ಮ ಗಾಂಧೀಜಿ ತಮ್ಮ ಕಣ್ಣು, ಬಾಯಿ, ಕಿವಿ ಮುಚ್ಚಿಕೊಂಡು ಮೌನವಾಗಿದ್ದಾರೆ. ರಾಜ್ಯದ ಆಡಳಿತದ ಚುಕ್ಕಾಣಿ ಹಿಡಿದಿರುವವರ ವಿಧಾನಸೌಧ (ಶಕ್ತಿಸೌಧ) ಹಾಗೂ ವಿಕಾಸ ಸೌಧಗಳಲ್ಲಿನ ಲಂಚಾವತಾರ ನೋಡಿ ಸತ್ಯವಂತರಿಗಿದು ಕಾಲವಲ್ಲ ಎಂದು 'ಗಾಂಧೀಜಿ' ಈ ಎರಡು ಸೌಧಗಳ ಮಧ್ಯೆ ಮೌನ ಮುಷ್ಕರ ಮಾಡುತ್ತಿದ್ದಾರೆ ಎನ್ನುವಂತಿದೆ.

ಜನರ ಆಶೀರ್ವಾದ ಹಾಗೂ ದೇವರ ದಯೆಯಿಂದ ಈ ರಾಜಕಾರಣಿಗಳು ಹಾಗೂ ಅಧಿಕಾರಿಗಳಿಗೆ ಒಮ್ಮೆ 'ಬಂಪರ್ ಲಾಟರಿ' (ಅಧಿಕಾರದ) ಹೊಡೆಯಿತೆಂದರೆ ಅಂದೇ ಇವರ ಭಾಗ್ಯದ ಬಾಗಿಲು ತೆರೆದಂತೆ. ಅಂದಿನಿಂದಲೇ ಇವರ ಮೋಜು ಮಸ್ತಿ–ಜೀವನ ಶೈಲಿ ಎಲ್ಲವೂ ಸ್ವರ್ಗಕ್ಕೆ ಕಿಚ್ಚು ಹಚ್ಚುವಂತಾಗುತ್ತದೆ.


ಹಾಲಿಗಳು, ಮಾಜಿಗಳು ಎನ್ನುವಂತಿಲ್ಲ. ಒಂದು ಸಾರಿ ಅಧಿಕಾರದ ರುಚಿ (ವಿಧಾನ ಸೌಧ–ಸಂಸತ್) ನೋಡಿದರೆಂದರೆ ಎಲ್ಲಾ ರಾಜಕಾರಣಿಗಳು ಹಾಗೂ ಅಧಿಕಾರಿಗಳು ತಾವು ನಡೆದು ಬಂದ ದಾರಿಯನ್ನ ಮತ್ತೆ ಹಿಂತಿರುಗಿ ನೋಡುವಂತೆಯೇ ಇಲ್ಲ. ಆದರೂ ನಮ್ಮ ಜನ ಇದನ್ನೆಲ್ಲಾ ಸಹಿಸಿಕೊಳ್ಳುತ್ತಾರೆ ಎಂಬುದೇ ಆಶ್ಚರ್ಯದ ಸಂಗತಿ.

ದೈವದತ್ತವಾಗಿ ಬಂದ ಗಾಳಿ–ಬೆಳಕು ಇವೆರಡನ್ನು ಬಿಟ್ಟು ಭೂಮಿ ಮೇಲಿರುವ ಎಲ್ಲಾ ವಸ್ತುಗಳಿಗೆ ಬೆಲೆ ನಿಗದಿ ಮಾಡಿ, ತೆರಿಗೆ ಹೊರೆ ಹೊರಿಸಿ ರಾಷ್ಟ್ರದಲ್ಲಿಯೇ ನಂಬರ್ '1' ಎನಿಸಿಕೊಂಡಿದೆ ನಮ್ಮ ಘನ ರಾಜ್ಯ ಸರ್ಕಾರ.

ಅನಗತ್ಯ ವೆಚ್ಚಕ್ಕೆ ಕಡಿವಾಣ ಹಾಕದೆ, ಪಕ್ಷದ ಶಾಸಕರೆಲ್ಲರಿಗೂ ಅಧಿಕಾರ ನೀಡುವ ಉದಾತ್ತ ನೀತಿಯಿಂದ ಸರ್ಕಾರದ ಖಜಾನೆ ಬರಿದಾಗಿದೆ. ಅದನ್ನು ತುಂಬುವ ದಾರಿಯೇ ಈ ತೆರಿಗೆ ಹೊರೆ. ಜೊತೆಗೆ ಸಾಲಕ್ಕಾಗಿ ಅಂಗಲಾಚುವ ಸ್ಥಿತಿ. ಈ ಅವ್ಯವಸ್ಥೆಗಳಿಂದಾಗಿ ಕರ್ನಾಟಕ ದೇಶದ ಇತರ ರಾಜ್ಯಗಳ ಮುಂದೆ ನಗೆಪಾಟಲಿಗೆ ಗುರಿಯಾಗಿದೆ.

ಸರ್ಕಾರದ ಈ ತೊಘಲಕ್ ದರ್ಬಾರ್ (ನಿರ್ಧಾರಗಳನ್ನು) ಎಲ್ಲಿಯವರೆಗೆ ಜನತೆ ಪ್ರತಿಭಟಿಸುವುದಿಲ್ಲವೋ ಇಲ್ಲವೇ ಪ್ರಶ್ನಿಸುವುದಿಲ್ಲವೋ ಅಲ್ಲಿಯವರೆಗೂ ನಾವು ಸಂಕಟ ಪಡಲೇಬೇಕಿದೆ.

ಮೈಸೂರು ಮೃಗಾಲಯದ ಮಿನ್ನಿ ಸ್ಥಿತಿ ಗಂಭೀರ



ಮೈಸೂರು, ಮಾ.28(ಎಂಟಿವೈ)– ನಾಲ್ಕು ವರ್ಷದಿಂದ ಪ್ರವಾಸಿಗರ ಸೆಳೆಯುತ್ತಿದ್ದ ಮೈಸೂರು ಮೃಗಾಲಯದ ಒರಾಂಗೂಟಾನ್ 'ಮಿನ್ನಿ' ನ್ಯುಮೋನಿಯಾಗೆ ತುತ್ತಾಗಿದ್ದು, ಗಂಭೀರ ಸ್ಥಿತಿಯಲ್ಲಿರುವ ಅದಕ್ಕೆ ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ರಂಗಸ್ವಾಮಿ ತಿಳಿಸಿದ್ದಾರೆ.

ಪ್ರಾಣಿ ವಿನಿಮಯ ಯೋಜನೆಯಡಿ 2021 ರಲ್ಲಿ ಮಲೇಷಿಯಾದ ಸಫಾರಿ ವಂಡರ್‌ಲ್ಯಾಂಡ್ ಮೃಗಾಲಯದಿಂದ ತರಲಾಗಿದ್ದ ಒರಾಂಗೂಟಾನ್ ಜೋಡಿಯಲ್ಲಿ 10 ವರ್ಷ 8 ತಿಂಗಳಿನ ಮಿನ್ನಿ ಹೆಸರಿನ ಹೆಣ್ಣು ಒರಾಂಗೂಟಾನ್ ನ್ಯುಮೋನಿಯಾಗೆ ತುತ್ತಾಗಿದ್ದು, ತೀವ್ರ ಉಸಿರಾಟದ ಸಮಸ್ಯೆಯಿಂದಾಗಿ ಗಂಭೀರ ಸ್ಥಿತಿಯಲ್ಲಿದೆ. ಮಲೇಷಿಯಾ ಮೃಗಾಲಯದಿಂದ ಇಲ್ಲಿಗೆ ತಂದ ನಂತರ 3 ಬಾರಿ ನ್ಯುಮೋನಿಯಾಗೆ ತುತ್ತಾದ ಮಿನ್ನಿಗೆ ಚಿಕಿತ್ಸೆ ನೀಡಿ, ಆರೋಗ್ಯ ಕಾಪಾಡಲಾಗಿತ್ತು. ಆದರೆ ಈ ಬಾರಿ ಗಂಭೀರ ಸ್ಥಿತಿಯಲ್ಲಿದ್ದು, ಆರೈಕೆ ಮಾಡಲಾಗುತ್ತಿದೆ. ಯುಕೆ ಮತ್ತು ಮಲೇಷಿಯಾದ ತಜ್ಞ ವೈದ್ಯರ ಸಹಕಾರವನ್ನು ಪಡೆಯಲಾಗುತ್ತಿದ್ದು, ದಿನದ 24 ಗಂಟೆಯೂ ನಿಗಾ ವಹಿಸಲಾಗಿದೆ.

ಕಂದನ ಕಚ್ಚಿಕೊಂಡು ಹೋಗುತ್ತಿರುವ ಹುಲಿ



ಸಫಾರಿಗೆ ಹೋಗಿದ್ದ ಪ್ರವಾಸಿಗರಿಗೆ ನಾಲ್ಕು ಮರಿಯೊಂದಿಗೆ ಎದುರಾಗಿದೆ.

ಮೈಸೂರು,ಮಾ.28(ಎಂಟಿವೈ)– ಕಾಕನಕೋಟೆ ಸಫಾರಿ ಕೇಂದ್ರದಿಂದ ಸಫಾರಿಗೆ ತೆರಳಿದ್ದ ಪ್ರವಾಸಿಗರಿಗೆ ಶುಕ್ರವಾರ ಬೆಳಗ್ಗೆ ಬಾಯಿಯಲ್ಲಿ ಮರಿಯೊಂದನ್ನು ಕಚ್ಚಿಕೊಂಡು, ಇನ್ನಿತರೆ ಮೂರು ಮರಿಗಳೊಂದಿಗೆ ಸ್ಥಳ ಬದಲಿಸುತ್ತಿದ್ದ ಹುಲಿಯೊಂದು ಕಣ್ಣಿಗೆ ಬಿದ್ದಿದೆ.

ಅಂತರಸಂತೆ ವಲಯದ ಸಫಾರಿ ಝೋನ್‌ನಲ್ಲಿ ವನ್ಯಜೀವಿ ಛಾಯಾಗ್ರಾಹಕರು 'ಮಗ್ಗೆ ಫಿಮೇಲ್' ಎಂದೇ ಕರೆಯಲ್ಪಡುವ ಹುಲಿ ಒಂದೂವರೆ ತಿಂಗಳ ಹಿಂದೆ 4 ಮರಿಗೆ ಜನ್ಮ ನೀಡಿದ್ದು, ಇಂದು ಬೆಳಗ್ಗೆ ಸಫಾರಿಗೆ ಹೋಗಿದ್ದ ಪ್ರವಾಸಿಗರಿಗೆ ನಾಲ್ಕು ಮರಿಯೊಂದಿಗೆ ಎದುರಾಗಿದೆ.

ನಾಲ್ಕು ಮರಿಗಳಲ್ಲಿ ಒಂದನ್ನು ಬಾಯಲ್ಲಿ ಕಚ್ಚಿಕೊಂಡು ಸಫಾರಿ ರಸ್ತೆಯನ್ನು ದಾಟಿದೆ. ಉಳಿದ ಮೂರು ಮರಿಗಳು ತಾಯಿಯನ್ನ ಹಿಂಬಾಲಿಸಿವೆ.

ಹೆಣ್ಣು ವಿದ್ಯಾವಂತರಾದರೆ ದೇಶವೂ ಪ್ರಗತಿಯಾಗಲಿದೆ

● ಶಾಸಕ ಜಿ.ಟಿ.ದೇವೇಗೌಡರ ಕಿವಿಮಾತು ● ಸರಳ ವಿವಾಹಕ್ಕೆ ಆದ್ಯತೆ ನೀಡಿ; ಆ ಹಣವನ್ನೇ ಬ್ಯಾಂಕ್‌ನಲ್ಲಿ ಉಳಿತಾಯ ಮಾಡಿ ● ಒಳ್ಳೆ ಕೆಲಸ ಸಿಗದಿದ್ದರೆ ಬಯಸಿದಂತೆ ಕೃಷಿ ಮಾಡಿ



ಮೈಸೂರು ತಾಲೂಕು ದೊಡ್ಡಮಾರಗೌಡನಹಳ್ಳಿ ಗ್ರಾಮದ ಜವಾಹರ ನವೋದಯ ವಿದ್ಯಾಲಯದ ವಾರ್ಷಿಕೋತ್ಸವ ಸಮಾರಂಭದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಮಾತನಾಡಿದರು.

ಮೈಸೂರು, ಮಾ.28– ಹೆಣ್ಣು ಮಕ್ಕಳು ವಿದ್ಯಾವಂತರಾದರೆ ದೇಶದ ಪ್ರಗತಿಗೆ ಸಹಕಾರಿಯಾಗಲಿದೆ ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಹೇಳಿದರು.

ಮೈಸೂರು ತಾಲೂಕಿನ ದೊಡ್ಡಮಾರಗೌಡನಹಳ್ಳಿ ಗ್ರಾಮದ ಜವಾಹರ ನವೋದಯ ವಿದ್ಯಾಲಯದ ವಾರ್ಷಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಕುಟುಂಬ ನಿರ್ವಹಣೆಯಲ್ಲಿ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ. ಕುಟುಂಬವನ್ನು ಹೇಗೆ ಮುನ್ನಡೆಸಬೇಕು. ಆದಾಯ ಎಷ್ಟು, ಅದರಲ್ಲಿ ಉಳಿತಾಯ ಮಾಡುವುದು ಹೇಗೆ ಎಂದು ಲೆಕ್ಕಾಚಾರ ಹಾಕುತ್ತಾರೆ. ಹೆಣ್ಣು ಮಕ್ಕಳು ವಿದ್ಯಾವಂತರಾದರೆ ದೇಶವೂ ಪ್ರಗತಿಯಾಗಲಿದೆ ಎಂದರು.

ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿಯಬೇಕು. ಶಾಲೆಗೆ ಹೋಗುವಾಗ ಅಪ್ಪ–ಅಮ್ಮನಿಗೆ ನಮಸ್ಕರಿಸಿ ಆಶೀರ್ವಾದ ಪಡೆಯಬೇಕು. ತಮಗಾಗಿ ಹಗಲಿರುಳು ಶ್ರಮಿಸುವ ಅವರ ಆಸೆಯಂತೆ ಗುರಿ ಇಟ್ಟುಕೊಂಡು ಹೆಜ್ಜೆ ಇಡಬೇಕು. ಸರ್ಕಾರಿ ಶಾಲೆಯಲ್ಲಿ ಕಲಿತವರು ಉನ್ನತ ಹುದ್ದೆಗಳಲ್ಲಿದ್ದಾರೆ. ಸೇವೆಗೆ ಸೇರಿದ ಮೇಲೆ ಸಮಾಜಕ್ಕೆ ಕೈಲಾದಷ್ಟು ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.


ಹೆಣ್ಣು ಮಕ್ಕಳು ಉನ್ನತ ಶಿಕ್ಷಣ ಪಡೆದು, ಉತ್ತಮ ಉದ್ಯೋಗ ಗಿಟ್ಟಿಸಿಕೊಳ್ಳಬೇಕು. ಪೋಷಕರು ಸಾಲ ಮಾಡಿ ಅದ್ಧೂರಿ ವಿವಾಹಕ್ಕೆ ಮುಂದಾದರೇ ತಾವೇ ನಿರಾಕರಿಸಬೇಕು. ಸರಳವಾಗಿ ವಿವಾಹ ಮಾಡಿಕೊಡುವಂತೆ ಒತ್ತಾಯಿಸಬೇಕು. ಇಚ್ಛಿಸಿದರೆ ವಿವಾಹಕ್ಕೆ ಖರ್ಚು ಮಾಡಬೇಕೆಂದುಕೊಂಡಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಠೇವಣಿ ಇಡುವಂತೆ ತಿಳಿಸಬೇಕು. ತವರು ಮನೆಯಂತೆ ಗಂಡನ ಮನೆಯಲ್ಲೂ ಪ್ರೀತಿ, ವಿಶ್ವಾಸದಿಂದ ಇರಬೇಕು ಎಂದು ಕಿವಿಮಾತು ಹೇಳಿದರು.

ಮೈಕ್ರೋಫೈನಾನ್ಸ್‌ಗಳ ಕಿರುಕುಳ ಸಹಿಸಲಾಗದೆ ಅದೆಷ್ಟೋ ಕುಟುಂಬಗಳು ಊರು ತೊರೆದಿವೆ. ಈ ದುಸ್ಥಿತಿಗೆ ಆಸ್ಪದ ಮಾಡಿಕೊಡಬಾರದು. ದುಂದುವೆಚ್ಚ ಮಾಡದೆ ಸರಳ ಬದುಕು ಸಾಗಿಸಬೇಕು. ಸಾಲದಿಂದ ಸಾಧ್ಯವಾದಷ್ಟು ದೂರವಿರಬೇಕು. ಯಾರನ್ನೋ ನೋಡಿ ನಾವೂ ಮೈತುಂಬಾ ಚಿನ್ನಾಭರಣ ಧರಿಸಬೇಕೆಂಬ ಆಸೆ ಇರಬಾರದು ಎಂದು ಸಲಹೆ ನೀಡಿದರು.

ಕೃಷಿ ಮಾಡಿ: ಪ್ರಸ್ತುತ ಇಂಜಿನಿಯರಿಂಗ್ ಪದವಿ ಪಡೆದವರೂ ಕಾರ್ಖಾನೆಯಲ್ಲಿ ಕೆಲಸ ಕೊಡಿಸುವಂತೆ ಅರ್ಜಿ ನೀಡುತ್ತಾರೆ. ಕೆಲಸ ಸಿಕ್ಕಿಲ್ಲವೆಂದು ಹತಾಷರಾಗದೆ ಕೃಷಿ ಮಾಡಿ. ಜಮೀನು ಮಾರಾಟ ಮಾಡದೆ ತರಕಾರಿ, ಹಣ್ಣು, ಹೂವು ಬೆಳೆದರೆ ಜೀವನ ನಡೆಸಬಹುದು. ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ನೆರವು ಪಡೆದು ಸ್ವಯಂ ಉದ್ಯೋಗ ಆರಂಭಿಸುವ ಮೂಲಕ ನೀವೇ ಉದ್ಯೋಗದಾತರಾಗಬಹುದು ಎಂದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ನಾನು ದುಡ್ಡಿನಿಂದ ಗೆದ್ದವನಲ್ಲ. ನಾನು ಮಾಡಿದ ಕೆಲಸ ಕಾರ್ಯಗಳನ್ನು ನೋಡಿ ಜನ ಬೆಂಬಲಿಸಿ, ಗೆಲ್ಲಿಸಿದ್ದಾರೆ. ಹುಣಸೂರು ಶಾಸಕನಾಗಿದ್ದಾಗಲೂ ಕಡಿಮೆ ಅವಧಿಯಲ್ಲೇ ಆಸ್ಪತ್ರೆಗಳು, ಶಾಲಾ–ಕಾಲೇಜು ಕಟ್ಟಡಗಳು, ನೀರಿನ ಟ್ಯಾಂಕ್‌ಗಳು ಸೇರಿದಂತೆ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದೇನೆ. ಇಂದಿಗೂ ಆ ಕ್ಷೇತ್ರದ ಜನ ನಮ್ಮ ಕುಟುಂಬದ ಮೇಲೆ ಅಪಾರ ನಂಬಿಕೆ ಇಟ್ಟುಕೊಂಡಿದ್ದಾರೆ. ಚಾಮುಂಡೇಶ್ವರಿ ಕ್ಷೇತ್ರ ದೊಡ್ಡ ಕ್ಷೇತ್ರವಾಗಿದ್ದು, ಮೈಸೂರಿನ ನಾಲ್ಕು ದಿಕ್ಕುಗಳಿಗೂ ಚಾಚಿಕೊಂಡಿದೆ ಮುಂದಿನಡಿಸೆಂಬರ್ ವೇಳೆಗೆ ಹಳೆ ಉಂಡು ವಾಡಿ ಯೋಜನೆ ಮುಕ್ತಾಯಗೊಳ್ಳಲಿದ್ದು ಎಲ್ಲಾ ಗ್ರಾಮಗಳಿಗೂ ಕುಡಿಯುವ ನೀರು ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 29 ಶನಿವಾರ 2025

ಸಂಪುಟ: 45 | ಸಂಚಿಕೆ: 339 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4




ಥೈಲ್ಯಾಂಡ್, ಮ್ಯಾನ್ಮಾರ್‌ನಲ್ಲಿ ಪ್ರಬಲ ಭೂಕಂಪ; 152 ಸಾವು, 732 ಮಂದಿಗೆ ಗಾಯ



ಬ್ಯಾಂಕಾಕ್/ನೇಪಿಟಾವ್: ಥೈಲ್ಯಾಂಡ್ ಹಾಗೂ ಮ್ಯಾನ್ಮಾರ್‌ನಲ್ಲಿ ಸಂಭವಿಸಿದ ಪ್ರಬಲ ಭೂಕಂಪದಿಂದ 152 ಮಂದಿ ಸಾವನ್ನಪ್ಪಿದ್ದು, 782 ಮಂದಿ ಗಾಯ ಗೊಂಡಿದ್ದು, ನೂರಾರು ಮಂದಿ ನಾಪತ್ತೆಯಾಗಿದ್ದಾರೆ.

ಮ್ಯಾನ್ಮಾರ್‌ನಲ್ಲಿ ಸತತ ಎರಡು ಭೂಕಂಪಗಳು ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ ಕ್ರಮವಾಗಿ 7.7 ಮತ್ತು 6.4 ತೀವ್ರತೆ ದಾಖಲಾಗಿದೆ ಎಂದು ಯುನೈಟೆಡ್ ಸ್ಟೇಟ್ಸ್ ಭೂ ವೈಜ್ಞಾನಿಕ ಸಮೀಕ್ಷೆ (ಯುಎಸ್‌ಜಿಎಸ್) ಶುಕ್ರವಾರ ತಿಳಿಸಿದೆ. ಭೂಕಂಪದ ಕೇಂದ್ರ ಬಿಂದುವು ಮಧ್ಯ ಮ್ಯಾನ್ಮಾರ್‌ನಲ್ಲಿದ್ದು, ಮೋನಿವಾ ನಗರದಿಂದ ಸುಮಾರು 50 ಕಿಲೋಮೀಟರ್ ಪೂರ್ವಕ್ಕೆ ಇದೆ ಎಂದು ವರದಿಯಾಗಿದೆ. ಮ್ಯಾನ್ಮಾರ್‌ನಲ್ಲಿ ಪ್ರಬಲ ಭೂಕಂಪದಿಂದ 144 ಮಂದಿ ಸಾವಿಗೀಡಾಗಿದ್ದು, 732 ಮಂದಿ ಗಾಯಗೊಂಡಿದ್ದಾರೆ. ಅಲ್ಲದೆ, ನೆರೆಯ ಥೈಲ್ಯಾಂಡ್‌ನಲ್ಲಿ 8 ಸಾವುಗಳು ವರದಿಯಾಗಿವೆ. 100ಕ್ಕೂ ಹೆಚ್ಚು ಮಂದಿ ಕಾಣೆಯಾಗಿದ್ದಾರೆ. 80 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

ಮ್ಯಾನ್ಮಾರ್‌ನ ಮಂಡಲೇಯಲ್ಲಿರುವ ಐಕಾನಿಕ್ ಅವಾ ಸೇತುವೆ ಭೂಕಂಪದಲ್ಲಿ ಕುಸಿದು ಬಿದ್ದು, ಒಂದು ಮಸೀದಿ ಭಾಗಶಃ ಕುಸಿದು ಕನಿಷ್ಠ ■ 6ನೇ ಪುಟಕ್ಕೆ



ಬ್ಯಾಂಕಾಕ್ ಪ್ರವಾಸದಲ್ಲಿದ್ದ ಹಾವೇರಿಯ ಐವರು ಸುರಕ್ಷಿತ

ಹಾವೇರಿ: ಬ್ಯಾಂಕಾಕ್‌ನಲ್ಲಿ ಭೂಕಂಪ ಸಂಭವಿಸಿದ್ದು, ಪ್ರವಾಸಕ್ಕೆ ತೆರಳಿದ್ದ ಹಾವೇರಿ ಜಿಲ್ಲೆಯ ಐವರು ಸುರಕ್ಷಿತ ವಾಗಿರುವುದಾಗಿ ಕುಟುಂಬದವರು ತಿಳಿಸಿದ್ದಾರೆ. ಹಾವೇರಿ ಜಿಲ್ಲೆಯ ಐವರು ಸ್ನೇಹಿತರು, ಬೆಂಗಳೂರಿನ ಮೂಲಕ ಮಾ. 23ರಂದು ಬ್ಯಾಂಕಾಕ್ ಪ್ರವಾಸಕ್ಕೆ ತೆರಳಿದ್ದಾರೆ. ಗುರುವಾರ ರಾತ್ರಿ ಅವರೆಲ್ಲರೂ ಬ್ಯಾಂಕಾಕ್‌ನಲ್ಲಿ ಉಳಿದುಕೊಂಡಿದ್ದರು. ಶುಕ್ರವಾರ ಬೆಳಿಗ್ಗೆ 11 ಗಂಟೆ ಸುಮಾರಿಗೆ ಸಫಾರಿ ವಾರ್ಡ್ ಪ್ರದೇಶಕ್ಕೆ ಹೊರಟಿದ್ದ ಸಂದರ್ಭದಲ್ಲಿ ಭೂ ಕಂಪನದ ಅನುಭವವಾಗಿರುವುದಾಗಿ ಗೊತ್ತಾಗಿದೆ.

ಬ್ಯಾಂಕಾಕ್ ಪ್ರವಾಸದ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿರುವ ಹಾವೇರಿ ಯುವಕ, 'ಬ್ಯಾಂಕಾಕ್ ಪ್ರವಾಸದಲ್ಲಿರುವ ನಾವು, ಸದ್ಯ ಸಫಾರಿ ವಾರ್ಡ್ ಬಳಿ ಇದ್ದೇವೆ. ಎಲ್ಲರೂ ಸುರಕ್ಷಿತ ವಾಗಿದ್ದಾರೆ. ಅಲ್ಲಲ್ಲಿ ಭೂಕಂಪ ಆಗಿರುವುದಾಗಿ ಅಧಿಕಾರಿಗಳು ಹೇಳುತ್ತಿದ್ದಾರೆ' ಎಂದಿದ್ದಾರೆ. 'ಎಲ್ಲರೂ ಈಗ ಬೆಂಗಳೂರಿಗೆ ವಾಪಸು ಬರಲು ಪ್ರಯತ್ನಿಸುತ್ತಿದ್ದೇವೆ. ವಿಮಾನಗಳ ವೇಳಾಪಟ್ಟಿ ಬದಲಾಗಿದೆ. ತಡವಾಗಿ ವಿಮಾನ ಬರಲಿರುವುದಾಗಿ ಅಧಿಕಾರಿಗಳು ಹೇಳುತ್ತಿದ್ದಾರೆ' ಎಂದು ತಿಳಿಸಿದ್ದಾರೆ.

ರಾಜ್ಯ ರಾಜಕೀಯ ವಿದ್ಯಮಾನಗಳ ಕುರಿತಂತೆ

ವರಿಷ್ಠರಿಗೆ ವರದಿ

• ಸಚಿವರ ಭಿನ್ನ ನಡೆಗೆ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಆಕ್ಷೇಪ • ಪಕ್ಷ ಸಂಘಟನೆ, ಸರ್ಕಾರದ ಕಾರ್ಯವೈಖರಿ, ಸ್ಥಳೀಯ ಸಂಸ್ಥೆಗಳ ಚುನಾವಣೆ ಸಂಬಂಧವೂ ಮಾಹಿತಿ



ಬೆಂಗಳೂರು, ಮಾ.28(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವರ ಮೇಲೆ ಹಿಡಿತ ಸಾಧಿಸಿದ್ದರೆ ನಾಯಕತ್ವ ವಿಚಾರದಲ್ಲಿ ಇಂತಹ ಸಂದಿಗ್ಧ ಸ್ಥಿತಿ ಎದುರಾಗುತ್ತಿರಲಿಲ್ಲ ಎಂದು ಉಪಮುಖ್ಯಮಂತ್ರಿಯೂ ಆಗಿರುವ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ವರಿಷ್ಠರಿಗೆ ವರದಿ ನೀಡಿದ್ದಾರೆ.

ಪಕ್ಷ ಸಂಘಟನೆ, ಸರ್ಕಾರದ ಕಾರ್ಯವೈಖರಿ, ಜಿಲ್ಲಾ, ತಾಲೂಕು ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ಸಂಬಂಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಲ್ಲಿಸಿರುವ ವರದಿಯಲ್ಲಿ ಸವಿಸ್ತಾರ ತಿಳಿಸಿದ್ದಾರೆ. ಕೆಪಿಸಿಸಿ ಅಧ್ಯಕ್ಷಗಾದಿ ಹಾಗೂ ಮುಖ್ಯಮಂತ್ರಿ ಬದಲಾವಣೆ ಕುರಿತಂತೆ ವ್ಯಕ್ತವಾದ ವಿಭಿನ್ನ ಅಭಿಪ್ರಾಯಗಳ ಸಂದರ್ಭದಲ್ಲೇ ಸಿದ್ದರಾಮಯ್ಯ ಮಧ್ಯ ಪ್ರವೇಶ ಮಾಡಿದ್ದರೆ, ಇಷ್ಟೊಂದು ಗೊಂದಲಗಳಿಗೆ ಅವಕಾಶ ಆಗುತ್ತಿರಲಿಲ್ಲ.

ಕೆಲವು ಸಚಿವರಂತೂ ಯಾರನ್ನೋ ಬೆದರಿಸುವ ಉದ್ದೇಶದಿಂದ ಕೇಂದ್ರ ಸಚಿವರು ಮತ್ತು ಬಿಜೆಪಿ ನಾಯಕರ ಜೊತೆ ಸಂಪರ್ಕವನ್ನೂ ಬೆಳೆಸಿದ್ದು, ನೀವು ಈ ವಿಷಯದಲ್ಲಿ ಮಧ್ಯಪ್ರವೇಶ ಮಾಡಿ, ಸರಿಪಡಿಸಬೇಕೆಂದು ಕೋರಿದ್ದಾರೆ. ಜೊತೆ ಜೊತೆಯಲ್ಲೇ ವಿಧಾನ ಪರಿಷತ್ತಿನ ನಾಲ್ಕು ಸ್ಥಾನಗಳಿಗೆ ನಾಮನಿರ್ದೇಶನ ಮಾಡಬೇಕಿದ್ದು, ಇವುಗಳನ್ನು ಪಕ್ಷಕ್ಕಾಗಿ ದುಡಿದವರಿಗೆ ಮೀಸಲಿಡಬೇಕು. ಚುನಾವಣೆಯಲ್ಲಿ ಸ್ಪರ್ಧಿಸಲಾಗದ ಸಣ್ಣ–ಪುಟ್ಟ ಸಮುದಾಯಗಳ ಕಾರ್ಯಕರ್ತರನ್ನು ಗುರುತಿಸಿ ಅವಕಾಶ ಕೊಡಿ. ಆಯ್ಕೆ ವಿಚಾರದಲ್ಲಿ ನೀವು ಮುಖ್ಯಮಂತ್ರಿ ಅವರೊಂದಿಗೆ ಸಮಾಲೋಚನೆ ಮಾಡಿ ನಾಮನಿರ್ದೇಶನಕ್ಕೆ ಅವಕಾಶ ಮಾಡಿಕೊಡಿ ಎಂದಿದ್ದಾರೆ.

ಆಡಳಿತ ವಿಷಯಕ್ಕೆ ಸಂಬಂಧಿಸಿದಂತೆ ಕೈಗೊಂಡಿರುವ ಕೆಲವು ನಿರ್ಧಾರಗಳು ಗೊಂದಲವಾಗಿರುವುದಲ್ಲದೆ, ವಿರೋಧ ಪಕ್ಷಗಳಿಂದ ಭಾರೀ ಪ್ರತಿಭಟನೆ ಎದುರಾಗುತ್ತಿವೆ. ಉದಾಹರಣೆಗೆ ವಿದ್ಯುತ್ ಸ್ಮಾರ್ಟ್ ಮೀಟರ್ ಖರೀದಿ ವಿಚಾರದಲ್ಲಿ ಸರ್ಕಾರ ಮತ್ತು ಪಕ್ಷ ಗೊಂದಲದಲ್ಲಿ ಸಿಲುಕುವ ಸಾಧ್ಯತೆ ಇದೆ. ಈ ಬಗ್ಗೆ ಇಂಧನ ಖಾತೆ ಮತ್ತು ಮುಖ್ಯಮಂತ್ರಿ ■ 6ನೇ ಪುಟಕ್ಕೆ

ಹನಿಟ್ರ್ಯಾಪ್ ಪ್ರಕರಣ; ರಾಜೇಂದ್ರ ಹತ್ಯೆ ಯತ್ನ ರಹಸ್ಯ ಬಯಲಿಗೆಳೆಯಲು 'ಸಿಎಂ' ಆಪ್ತ ಸಚಿವರ ಶಪಥ

ದೆಹಲಿಯಿಂದ ವಾಪಸ್ಸಾದ ಸಚಿವ ಸತೀಶ್ ಜಾರಕಿಹೊಳಿ ಮನೆಯಲ್ಲಿ ಸಭೆ; ದೇವೇಗೌಡರು, ಕುಮಾರಸ್ವಾಮಿಯೊಂದಿಗಿನ ಮಾತುಕತೆ ಮಾಹಿತಿ ವಿವರ ವಿನಿಮಯ

ಬೆಂಗಳೂರು, ಮಾ. 28(ಕೆಎಂಶಿ)– ಹನಿಟ್ರ್ಯಾಪ್ ಪ್ರಕರಣ ಹಾಗೂ ಸಚಿವ ರಾಜಣ್ಣ ಅವರ ಪುತ್ರ ರಾಜೇಂದ್ರ ಅವರ ಕೊಲೆ ಯತ್ನ ಪ್ರಕರಣದ ರಹಸ್ಯ ಹೊರ ಹಾಕುವಲ್ಲಿ ಹಿಂದೆ ಸರಿಯಬಾರದು ಎಂಬ ಒತ್ತಾಯ ಹೇರಲು ಮುಖ್ಯಮಂತ್ರಿ ಆಪ್ತ ಬಳಗದಲ್ಲಿ ಗುರುತಿಸಿಕೊಂಡಿರುವ ಪರಿಶಿಷ್ಟ ಜಾತಿ ಮತ್ತು ವರ್ಗದ ಸಚಿವರು ತೀರ್ಮಾನಿಸಿದ್ದಾರೆ.


ಸತೀಶ್ ಜಾರಕಿಹೊಳಿ

ದೆಹಲಿಯಿಂದ ಹಿಂತಿರುಗುತ್ತಿದ್ದಂತೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮನೆಯಲ್ಲಿ ಗುರುವಾರ ರಾತ್ರಿ ಹಾಗೂ ಇಂದು ಬೆಳಗ್ಗೆ ಪ್ರತ್ಯೇಕವಾಗಿ ಎರಡು ಸಭೆಗಳನ್ನು ನಡೆಸಿ, ಮುಖ್ಯಮಂತ್ರಿ ಕೈಬಲಪಡಿಸುವುದು ಹಾಗೂ ಹನಿಟ್ರ್ಯಾಪ್ ಪ್ರಕರಣದ ರಹಸ್ಯ ಹೊರ ಹಾಕುವ ನಿರ್ಧಾರವನ್ನು ತೆಗೆದುಕೊಳ್ಳಲಾಯಿತು. ದೆಹಲಿಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮತ್ತು ಜೆಡಿಎಸ್ ■ 6ನೇ ಪುಟಕ್ಕೆ

ಹನಿಟ್ರ್ಯಾಪ್‌ಗೆ ಯತ್ನಿಸಿದ ಯುವತಿಗೆ ಸಚಿವ ರಾಜಣ್ಣ ಕಪಾಳ ಮೋಕ್ಷ

ಸಿಐಡಿ ಅಧಿಕಾರಿಗೆ ಸಚಿವರ ಮನೆ ಸಿಬ್ಬಂದಿ ಮಾಹಿತಿ



ಬೆಂಗಳೂರು, ಮಾ.28(ಕೆಎಂಶಿ)– ಹನಿಟ್ರ್ಯಾಪ್‌ಗೆ ಯತ್ನಿಸಿದ ಯುವತಿಗೆ ಸಹಕಾರಿ ಸಚಿವ ಕೆ.ಎನ್.ರಾಜಣ್ಣ ಕಪಾಳ ಮೋಕ್ಷ ಮಾಡಿದ್ದರಂತೆ. ರಾಜಣ್ಣ ದೂರು ಆಧರಿಸಿ ಮಾಹಿತಿ ಸಂಗ್ರಹ ವೇಳೆ ಸಿಐಡಿ ಡಿಐಜಿ ವಂಶಿಕೃಷ್ಣ, ಎಸ್‌ಪಿ ರಾಘವೇಂದ್ರ ಹೆಗಡೆ ನೇತೃತ್ವದ ಅಧಿಕಾರಿಗಳ ಮುಂದೆ ಸಚಿವರ ಮನೆಯ ಸಿಬ್ಬಂದಿಯಿಂದ ಈ ವಿಷಯ ಬಹಿರಂಗವಾಗಿದೆ. ಸಚಿವರ ಜೊತೆ ಖಾಸಗಿಯಾಗಿ ಮಾತನಾಡಬೇಕು ಎಂದು ಜೀನ್ಸ್ ತೊಟ್ಟ ಯುವತಿ ಮನವಿ ಮಾಡಿದ್ದಳು, ಇದು ಒಂದು ಬಾರಿಯಲ್ಲ, ಎರಡು, ಮೂರು ಬಾರಿಯಾಗಿತ್ತು. ಎಲ್ಲಾ ಸಂದರ್ಭದಲ್ಲೂ ಸಚಿವರು ನಿರಾಕರಣೆ ಮಾಡಿದ್ದರು. ■ 6ನೇ ಪುಟಕ್ಕೆ

ರಾಜ್ಯ ಬಿಜೆಪಿಯಲ್ಲಿ ಬದಲಾವಣೆಗಾಗಿ ನಮ್ಮ ಹೋರಾಟ ಮುಂದುವರೆಸುತ್ತೇವೆ...

ಯತ್ನಾಳ್ ಉಚ್ಛಾಟನೆ ಹಿಂಪಡೆಯಿರಿ

ಬೆಂಗಳೂರು: ಬಂಡಾಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಪಕ್ಷದಿಂದ ಹೊರಹಾಕಿದ್ದನ್ನು ಮರು ಪರಿಶೀಲಿಸುವಂತೆ ಬಿಜೆಪಿ ಭಿನ್ನಮತೀಯ ನಾಯಕರು ಸಭೆ ಸೇರಿ ಪಕ್ಷದ ಹೈಕಮಾಂಡ್‌ಗೆ ಮನವಿ ಮಾಡಿದ್ದಾರೆ.


ಯತ್ನಾಳ್

ಪಕ್ಷದಿಂದ ದೂರವಾಗುವ ಯಾವುದೇ ಯೋಜನೆ ಇಲ್ಲ. ತಮ್ಮ ಕಡೆಯಿಂದ ಯಾವುದೇ ತಪ್ಪುಗಳನ್ನು ಸರಿಪಡಿಸಲು ಸಿದ್ಧರಿದ್ದೇವೆ. ಆದರೆ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ಬದಲಾಯಿಸುವುದು ಸೇರಿದಂತೆ ಕರ್ನಾಟಕ ಬಿಜೆಪಿಯಲ್ಲಿ ಬದಲಾವಣೆಗಳಿಗಾಗಿ ಹೋರಾಡುವುದನ್ನು ಮುಂದುವರಿಸುತ್ತೇವೆ ಎಂದು ಹೇಳಿದರು.

ಮಾಜಿ ಕೇಂದ್ರ ಸಚಿವ ಜಿ.ಎಂ.ಸಿದ್ದೇಶ್ವರ ಅವರ ಬೆಂಗಳೂರಿನ ನಿವಾಸದಲ್ಲಿ ಯತ್ನಾಳ್ ಜೊತೆಗೆ, ಶಾಸಕರಾದ ರಮೇಶ್ ಜಾರಕಿಹೊಳಿ ಮತ್ತು ಬಿ.ಪಿ. ಹರೀಶ್, ಮಾಜಿ ಶಾಸಕ ಕುಮಾರ್ ಬಂಗಾರಪ್ಪ ಸೇರಿದಂತೆ ಇತರರು ಸಭೆಯಲ್ಲಿ ಭಾಗವಹಿಸಿದ್ದರು. ಪಕ್ಷದ ಶಿಸ್ತನ್ನು ಪದೇ ಪದೆ ಉಲ್ಲಂಘನೆ ಮಾಡಿದ್ದಕ್ಕಾಗಿ

ಹೈಕಮಾಂಡ್‌ಗೆ ಬಿಜೆಪಿ ಭಿನ್ನಮತೀಯರ ಎಚ್ಚರಿಕೆ!

ಬಿಜೆಪಿ ಬುಧವಾರ ಮಾಜಿ ಕೇಂದ್ರ ಸಚಿವ ಯತ್ನಾಳ್ ಅವರನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಆರು ವರ್ಷಗಳ ಕಾಲ ಹೊರಹಾಕಿತ್ತು. ಯತ್ನಾಳ್ ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಛಾಟಿಸಿರುವುದು ಹಿಂದೂ ಸಂಘಟನೆಗಳು, ಅವರ ರಾಜಕೀಯ ಅಭಿಮಾನಿಗಳು ಮತ್ತು ವಿಶೇಷವಾಗಿ ಪಕ್ಷದ ಕಾರ್ಯಕರ್ತರಿಗೆ ನೋವುಂಟು ಮಾಡಿದೆ. ಹೈಕಮಾಂಡ್ ನಿರ್ಧಾರವನ್ನು ನಾವು ಪ್ರಶ್ನಿಸುತ್ತಿಲ್ಲ ಅಥವಾ ವಿರೋಧಿಸುತ್ತಿಲ್ಲ ಎಂದು ಸ್ಪಷ್ಟಪಡಿಸುತ್ತಿದ್ದೇವೆ ಎಂದು ಕುಮಾರ್‌ಬಂಗಾರಪ್ಪ ಹೇಳಿದರು.

ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರ್ ಬಂಗಾರಪ್ಪ, ಯತ್ನಾಳ್ ಅವರನ್ನು ಉಚ್ಛಾಟಿಸಿದ ಬಗ್ಗೆ, ಅದನ್ನು ಮರುಪರಿಶೀಲಿಸುವಂತೆ ನಾವು ಹೈಕಮಾಂಡ್ ಅನ್ನು ವಿನಮ್ರವಾಗಿ ವಿನಂತಿಸುತ್ತೇವೆ. ಈ ನಿಟ್ಟಿನಲ್ಲಿ ಪಂಚಮಸಾಲಿ ಲಿಂಗಾಯತರು ಮಾತ್ರವಲ್ಲದೆ, ■ 6ನೇ ಪುಟಕ್ಕೆ

ಮೈಸೂರು–ಕುಶಾಲನಗರ ಚತುಷ್ಪಥ ಹೆದ್ದಾರಿಯ 3ನೇ ಪ್ಯಾಕೇಜ್‌ಗೆ ಕೇಂದ್ರ ಅನುಮೋದನೆ

ಮೈಸೂರು, ಮಾ.28– ಮೈಸೂರು–ಕುಶಾಲನಗರ ಚತುಷ್ಪಥ ಹೆದ್ದಾರಿ ಯೋಜನೆಯ ದೀರ್ಘಕಾಲದಿಂದ ಬಾಕಿ ಉಳಿದಿದ್ದ ಪ್ಯಾಕೇಜ್–3 ನಿರ್ಮಾಣಕ್ಕೆ ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆತಿದೆ.


ಯದುವೀರ್

2023ರ ಮಾರ್ಚ್ 12ರಂದು ಪ್ರಧಾನಿ ನರೇಂದ್ರ ಮೋದಿ ಅವರು ಈ ಹೆದ್ದಾರಿ ನಿರ್ಮಾಣಕ್ಕೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ನೆರವೇರಿಸಿದ್ದರು. ಈಗಾಗಲೇ ಡಿಪಿಆರ್ ಅನ್ವಯ ಭೂಸ್ವಾಧೀನ ಪ್ರಕ್ರಿಯೆ ಮತ್ತು ನಿರ್ಮಾಣ ಕಾರ್ಯ ಭರದಿಂದ ಸಾಗಿದೆ. ಇದೀಗ 3ನೇ ಹಂತದ ಪ್ಯಾಕೇಜ್‌ಗೆ ಕೇಂದ್ರ ಸರ್ಕಾರ ಅನುಮೋದನೆ ಕೊಟ್ಟಿದೆ. ಈ ಮಾಹಿತಿಯನ್ನು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಇದು ನಮ್ಮ ■ 6ನೇ ಪುಟಕ್ಕೆ

ನನ್ನ ಕೊಲೆಗೆ 70 ಲಕ್ಷ ಸುಪಾರಿ ಕೊಡಲಾಗಿದೆ

ಆಡಿಯೋ ಸಾಕ್ಷ್ಯ ಸಮೇತ ತುಮಕೂರು ಎಸ್ಪಿಗೆ ಸಚಿವ ರಾಜಣ್ಣ ಪುತ್ರ ದೂರು




ತುಮಕೂರು, ಮಾ.28– ತನ್ನ ಕೊಲೆಗೆ 70 ಲಕ್ಷ ರೂ.ಗೆ ಸುಪಾರಿ ಕೊಡಲಾಗಿದೆ ಎಂದು ಆರೋಪಿಸಿ ಸಚಿವ ಕೆ.ಎನ್.ರಾಜಣ್ಣ ಪುತ್ರನೂ ಆಗಿರುವ ಎಂಎಲ್‌ಸಿ ರಾಜೇಂದ್ರ ರಾಜಣ್ಣ ಅವರು ತುಮಕೂರು ಎಸ್ಪಿಗೆ ದೂರು ಸಲ್ಲಿಸಿದ್ದಾರೆ.

ಇಂದು ಮಧ್ಯಾಹ್ನ ತುಮಕೂರು ಎಸ್ಪಿ ಕಚೇರಿಗೆ ತೆರಳಿದ ರಾಜೇಂದ್ರ, ಎಸ್ಪಿ ಅಶೋಕ್ ಕುಮಾರ್ ಅವರಿಗೆ ಆಡಿಯೋ ಸಾಕ್ಷ್ಯದ ಸಮೇತ ಎರಡು ಪುಟಗಳ ದೂರು ನೀಡಿದ್ದಾರೆ. ತುಮಕೂರಿನ ಕ್ಯಾತ್ಸಂದ್ರ ರಜತಾದ್ರಿ ನಿವಾಸದಲ್ಲಿ ಕಳೆದ ನವೆಂಬರ್‌ನಲ್ಲಿ ನನ್ನ ಹತ್ಯೆಗೆ ಯತ್ನಿಸಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಡಿಜಿ ಅವರ ಸಲಹೆ ಮೇರೆಗೆ ಇಂದು ಎಸ್ಪಿಗೆ ದೂರು ನೀಡಿದ್ದೇನೆ. ಹನಿಟ್ರ್ಯಾಪ್ ವಿಚಾರ ಎಲ್ಲೂ ಪ್ರಸ್ತಾಪ ಮಾಡಿಲ್ಲ. ■ 6ನೇ ಪುಟಕ್ಕೆ

ಪೊನ್ನಂಪೇಟೆ ಬಳಿ ನಾಲ್ವರ ಕಗ್ಗೊಲೆ


- ಮನೆ ಅಳಿಯನಿಂದಲೇ ದುಷ್ಕೃತ್ಯ
- ಕೇರಳದಲ್ಲಿ ಆರೋಪಿ ಬಂಧನ
- ಸಂಬಂಧಗಳ ಸಂಘರ್ಷವೇ ಕಾರಣ



ಕೇರಳ ಪೊಲೀಸರ ವಶದಲ್ಲಿರುವ ಆರೋಪಿ ಗಿರೀಶ್ (ವೃತ್ತದಲ್ಲಿರುವವನು).

ಪೊನ್ನಂಪೇಟೆ, ಮಾ.28–ಐದು ವರ್ಷದ ಬಾಲಕಿ ಸೇರಿದಂತೆ ಒಂದೇ ಕುಟುಂಬದ ನಾಲ್ವರನ್ನು ಮನೆ ಅಳಿಯನೇ ಭೀಕರವಾಗಿ ಕೊಚ್ಚಿ ಕೊಲೆ ಮಾಡಿರುವ ಘಟನೆ ಪೊನ್ನಂಪೇಟೆ ತಾಲೂಕು ಬೇಗೂರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಜೇನುಕುರುಬರ ಕರಿಯ(75), ಅವರ ಪತ್ನಿ ಗೌರಿ(70), ಮೊಮ್ಮಗಳು ನಾಗಿ (30), ನಾಗಿ ಪುತ್ರಿ ಕಾವೇರಿ(5) ಹತ್ಯೆಗೀಡಾದವರಾಗಿದ್ದು, ಇವರನ್ನು ನಾಗಿ ಪತಿ ಗಿರೀಶ್(35) ಹತ್ಯೆ ಮಾಡಿ, ಪರಾರಿಯಾಗಿದ್ದ. ಆದರೆ ಕೇರಳ ಪೊಲೀಸರ ಸಹಕಾರದೊಂದಿಗೆ ಇಂದು ರಾತ್ರಿ ಪೊನ್ನಂಪೇಟೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.


ಗಿರೀಶ್‌ನೊಂದಿಗೆ ನಾಗಿ


ಕರಿಯ


ಕಾವೇರಿ

ಜೇನುಕುರುಬರ ಕರಿಯ ಮತ್ತು ಗೌರಿ ದಂಪತಿ ಕೇರಳ ಮೂಲದವರಾಗಿದ್ದು, ನಾಲ್ಕು ದಶಕದ ಹಿಂದೆ ಬೇಗೂರಿಗೆ ಬಂದು ಅಲ್ಲೇ ಭೂಮಿ ಖರೀದಿಸಿ, ತೋಟ ಮಾಡಿಕೊಂಡಿದ್ದರು ಎಂದು ಹೇಳಲಾಗಿದೆ. ಇವರ ಮೂರು ಮಕ್ಕಳ ಪೈಕಿ ಜಯಾ ಎಂಬಾಕೆಯ ಪುತ್ರಿ ನಾಗಿ ಈ ಹಿಂದೆ ಇಬ್ಬರನ್ನು ವಿವಾಹವಾಗಿದ್ದು, ಆಕೆಗೆ ಕಾವೇರಿ ಎಂಬ ಮಗಳಿದ್ದಳು.

ಕಳೆದ ಒಂದು ವರ್ಷದ ಹಿಂದೆ ಕೇರಳ ಮೂಲದ ಗಿರೀಶ್‌ಗೆ ನಾಗಿಯನ್ನು ಮದುವೆ ಮಾಡಿಕೊಡಲಾಗಿತ್ತು. ಆದರೆ ಕಳೆದ ಎರಡು ತಿಂಗಳಿಂದ ನಾಗಿ ಬೇಗೂರಿನ ತನ್ನ ಅಜ್ಜನ ಮನೆಯಲ್ಲೇ ಮಗಳೊಂದಿಗೆ ವಾಸ ಮಾಡುತ್ತಿದ್ದು, ಪತಿ ಗಿರೀಶ್ ಆಗಾಗ ಬೇಗೂರಿಗೆ ಬಂದು ಹೋಗುತ್ತಿದ್ದ.

ನಿನ್ನೆ (ಗುರುವಾರ) ಗಿರೀಶ್ ಬೇಗೂರಿನ ಇವರ ಮನೆಗೆ ಬಂದಿದ್ದು, ಅವರ ಮನೆಯಲ್ಲಿ ಜಗಳ ನಡೆದಿತ್ತು ಎಂದು ಹೇಳಲಾಗಿದೆ. ಇಂದು ಬೆಳಗ್ಗೆ ಪಕ್ಕದ ತೋಟದ ಕಾರ್ಮಿಕರು ಇವರ ಮನೆ ಬಳಿ ತೆರಳಿದಾಗ ನಾಲ್ವರನ್ನು ಭೀಕರವಾಗಿ ಕೊಚ್ಚಿ ಕೊಲೆ ಮಾಡಿರುವುದು ಬೆಳಕಿಗೆ ಬಂದಿದೆ.

ಕಾಫಿ ಬೀಜ ಮಾರಾಟ ಮಾಡುವ ವಿಚಾರದಲ್ಲಿ ಇಲ್ಲವೆ ಸಾಂಸಾರಿಕ ಗಲಾಟೆ ನಡೆದು ಗಿರೀಶ್ ಈ ನಾಲ್ವರನ್ನೂ ಕೊಲೆಗೈದಿರಬಹುದು ಎಂದು ಹೇಳಲಾಗಿತ್ತು. ಆದರೆ ರಾತ್ರಿ ವೇಳೆಗೆ ಆರೋಪಿ ಗಿರೀಶ್ ಬಂಧನದ ನಂತರ ನಾಲ್ವರ ಕೊಲೆಗೆ ಕಾರಣವೇನು ಎಂಬುದು ತಿಳಿದು ಬಂದಿದೆ. ನಾಗಿಯ ಎರಡನೇ ಪತಿ ಸುಬ್ರಮಣಿ ■ 6ನೇ ಪುಟಕ್ಕೆ

ಐಪಿಎಲ್ ಹಂಗಾಮ

ಚೆನ್ನೈನಲ್ಲಿ 17 ವರ್ಷದ ಬಳಿಕ ಗೆದ್ದು ಬೀಗಿದ ಆರ್‌ಸಿಬಿ

ಸಿಎಸ್‌ಕೆ ವಿರುದ್ಧ ಆರ್‌ಸಿಬಿಗೆ 50 ರನ್ ಭರ್ಜರಿ ಜಯ



ಚೆನ್ನೈ, ಮಾ.28– ಇಲ್ಲಿನ ಎಂ.ಎ.ಚಿದಂಬರಂ ಮೈದಾನದಲ್ಲಿ ನಡೆದ ಹೈವೋಲ್ಟೇಜ್ ಪಂದ್ಯದಲ್ಲಿ ಬ್ಯಾಟಿಂಗ್ ಹಾಗೂ ಬೌಲಿಂಗ್‌ನಲ್ಲಿ ಸಂಘಟಿತ ಪ್ರದರ್ಶನ ನೀಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ 50 ರನ್‌ಗಳ ಜಯಗಳಿಸಿದೆ. ಆ ಮೂಲಕ ಟೂರ್ನಿಯಲ್ಲಿ ಸತತ 2ನೇ ಗೆಲುವು ದಾಖಲಿಸಿ ಅಂಕಪಟ್ಟಿಯಲ್ಲಿ 4 ಅಂಕಗಳೊಂದಿಗೆ ಅಗ್ರಸ್ಥಾನ ಅಲಂಕರಿಸಿದೆ.

2008ರಲ್ಲಿ ಚೆನ್ನೈನಲ್ಲಿ ಸಿಎಸ್‌ಕೆ ವಿರುದ್ಧ ಆರ್‌ಸಿಬಿ ಜಯಿಸಿದ್ದೇ ಕೊನೆ. ಆ ಬಳಿಕ ಇಷ್ಟೂ ವರ್ಷಗಳಲ್ಲಿ ಒಂದೇ ಒಂದು ಪಂದ್ಯವನ್ನೂ ಆರ್‌ಸಿಬಿಯು ಚೆನ್ನೈನಲ್ಲಿ ಗೆದ್ದಿರಲಿಲ್ಲ. ಇದೀಗ 17 ವರ್ಷಗಳ ಬಳಿಕ ಚೆನ್ನೈ ನೆಲದಲ್ಲಿ ಆರ್‌ಸಿಬಿ ಗೆದ್ದು ಬೀಗಿದೆ.

ಶುಕ್ರವಾರ ನಡೆದ ಜಿದ್ದಾಜಿದ್ದಿನ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 195 ರನ್ ಗಳಿಸಿತ್ತು. ಈ ಗುರಿ ಬೆನ್ನತ್ತಿದ ಚೆನ್ನೈ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 146 ರನ್ ಗಳನ್ನಷ್ಟೇ ಗಳಿಸಲು ಶಕ್ತವಾಯಿತು.

ಚೆನ್ನೈ ಪರ ರಚಿನ್ ರವೀಂದ್ರ 41, ಶಿವಂ ದುಬೆ 19, ರವಿಂದ್ರ ಜಡೇಜಾ 25, ರವಿಚಂದ್ರನ್ ಅಶ್ವಿನ್ 11, ಮಹೇಂದ್ರಸಿಂಗ್ ಧೋನಿ 30 ರನ್ ಗಳಿಸಿದ್ದು ಬಿಟ್ಟರೇ ಉಳಿದವರು ಎರಡಂಕಿ ಮೊತ್ತ ದಾಖಲಿಸಲು ಸಾಧ್ಯವಾಗದೇ ಪೆವಿಲಿಯನ್ ಪರೇಡ್ ನಡೆಸಿದರು. ಬೆಂಗಳೂರು ಪರ ಬೌಲಿಂಗ್‌ನಲ್ಲಿ ಜೋಸ್ ಹ್ಯಾಸೆಲ್‌ವುಡ್ 3, ಯಶ್ ದಯಾಳ್, ಲಿಯಾಮ್ ಲಿವಿಂಗ್‌ಸ್ಟೋನ್ ತಲಾ 2, ಭುವನೇಶ್ವರ್ ಕುಮಾರ್ 1 ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿಗೆ ವಿರಾಟ್ ಕೊಹ್ಲಿ ಹಾಗೂ ಫಿಲ್ ಸಾಲ್ಟ್ ಮೊದಲ ವಿಕೆಟ್‌ಗೆ 45 ರನ್‌ಗಳ ಜೊತೆಯಾಟವಾಡುವ ಮೂಲಕ ಉತ್ತಮ ಆರಂಭ ಒದಗಿಸಿದರು. ಆರಂಭದಲ್ಲಿ ಸಾಲ್ಟ್ ಬಿರುಸಿನ ಆಟವಾಡಿದರೇ, ಕೊಹ್ಲಿ ನಿಧಾನಗತಿಯ ಆಟವಾಡಿದರು. ಅಂತಿಮವಾಗಿ ಸಾಲ್ಟ್ 32ರನ್ ಗಳಿಸಿ ಔಟಾದರು. ನಂತರ ಇಂಪ್ಯಾಕ್ಟ್ ಪ್ಲೇಯರ್ ಆಗಿ ಕಣಕ್ಕಿಳಿದ ದೇವದತ್ ಪಡಿಕ್ಕಲ್ 14 ಎಸೆತಗಳಲ್ಲಿ ತಲಾ 2 ಬೌಂಡರಿ ಮತ್ತು ಸಿಕ್ಸರ್‌ಗಳನ್ನು ಒಳಗೊಂಡ 27 ರನ್ ಬಾರಿಸಿ ವಿಕೆಟ್ ಒಪ್ಪಿಸಿದರು. ಬಳಿಕ ಕ್ರೀಸ್‌ಗೆ ಆಗಮಿಸಿದ ನಾಯಕ ರಜತ್ ಪಾಟೀದಾರ್ ಕೊಹ್ಲಿ ಜೊತೆಗೂಡಿ 3ನೇ ವಿಕೆಟ್‌ಗೆ 41 ರನ್ ಗಳ ಜೊತೆಯಾಟವಾಡಿ ತಂಡದ ಮೊತ್ತವನ್ನು ನೂರರ ಗಡಿ ದಾಟಿಸಿದರು. ಈ ವೇಳೆ 31 ರನ್ ಗಳಿಸಿದ್ದ ಕೊಹ್ಲಿ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ನಾಯಕನಿಗೆ ತಕ್ಕ ಆಟವಾಡಿದ ಪಾಟೀದಾರ್ ಅರ್ಧ ಶತಕ ಪೂರೈಸಿದರು. 32 ಎಸೆತಗಳನ್ನು ಎದುರಿಸಿದ ಅವರು 4 ಬೌಂಡರಿ ಮತ್ತು 3 ಸಿಕ್ಸರ್ ಗಳಿದ್ದ 51 ರನ್ ಗಳಿಸಿ ಔಟಾದರು. ಆದರೆ ಇನ್ನಿಂಗ್ಸ್‌ನ ಕೊನೆಯಲ್ಲಿ ಆರ್‌ಸಿಬಿ ವಿಕೆಟ್ ಕಳೆದುಕೊಂಡಿದ್ದರಿಂದ 200 ರನ್ ಗಳಿಸಲು ಸಾಧ್ಯವಾಗಲಿಲ್ಲ. ಉಳಿದಂತೆ ಲಿವಿಂಗ್ ಸ್ಟೋನ್ 10, ಜಿತೇಶ್ ಶರ್ಮಾ 12, ಟೀಮ್ ಡೇವಿಡ್ 8 ಎಸೆತಗಳಲ್ಲಿ 1 ಬೌಂಡರಿ, 3 ಸಿಕ್ಸರ್ ಒಳಗೊಂಡ 22 ರನ್ ಗಳಿಸಿ ಅಜೇಯರಾಗಿ ಉಳಿದರು. ಚೆನ್ನೈ ಪರ ನೂರ್ ಅಹ್ಮದ್ 3, ಮಥೀಷ ಪಥಿರಣ 2, ಅಶ್ವಿನ್ ಹಾಗೂ ಖಲೀಲ್ ಅಹಮ್ಮದ್ ತಲಾ ಒಂದೊಂದು ವಿಕೆಟ್ ಕಬಳಿಸಿದರು. ರಜತ್ ಪಾಟೀದರ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ತಂಡದ ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಬೆಂಗಳೂರು	2	2	0	0	4
ಲಕ್ನೋ	2	1	1	0	2
ಪಂಜಾಬ್	1	1	0	0	2
ಡೆಲ್ಲಿ	1	1	0	0	2
ಹೈದರಾಬಾದ್	2	1	1	0	2
ಕೋಲ್ಕತ್ತಾ	2	1	1	0	2
ಚೆನ್ನೈ	2	1	1	0	2
ಮುಂಬೈ	1	0	1	0	0
ಗುಜರಾತ್	1	0	1	0	0
ರಾಜಸ್ಥಾನ್	2	0	2	0	0

ಇಂದಿನ ಪಂದ್ಯ

ಗುಜರಾತ್ ಟೈಟಾನ್
V/S
ಮುಂಬೈ ಇಂಡಿಯನ್ಸ್

ಸಮಯ: ಸಂಜೆ 7.30

ಸ್ಥಳ : ನರೇಂದ್ರ ಮೋದಿ ಕ್ರೀಡಾಂಗಣ, ಅಹಮದಾಬಾದ್


ನಾನೆಂದೂ ಭ್ರಷ್ಟಾಚಾರ ನಡೆಸಿಲ್ಲ; ಭ್ರಷ್ಟರಿಗೆ ರಕ್ಷಣೆಯನ್ನೂ ನೀಡಿಲ್ಲ

● ಶಾಸಕ ಜಿ.ಡಿ.ಹರೀಶ್‌ಗೌಡ ಖಡಕ್ ನುಡಿ ● ಆರೋಪಿಸುವ ಕಾಂಗ್ರೆಸ್ ನಾಯಕರಿಗೆ ಆತ್ಮಸಾಕ್ಷಿ ಇರಲಿ ● ಕಸಬಾ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನಿರ್ದೇಶಕರಿಂದ ಅದ್ದೂರಿ ಸನ್ಮಾನ ಸ್ವೀಕಾರ

ಹುಣಸೂರು, ಮಾ.28– ಸಹಕಾರಿ ಕ್ಷೇತ್ರದಲ್ಲಿ ನಾನು ಭ್ರಷ್ಟಾಚಾರ ಮಾಡಿದ್ದರೆ ಯಾವುದೇ ತನಿಖೆ ಎದುರಿಸಲು ಸಿದ್ಧನಿದ್ದೇನೆ. ಆದರೆ ನನ್ನ ವಿರುದ್ಧ ಆರೋಪಿಸುವವರು ಆತ್ಮಸಾಕ್ಷಿಯೊಂದಿಗೆ ಮಾತನಾಡುವುದು ಒಳಿತು ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ಟಾಂಗ್ ನೀಡಿದ್ದಾರೆ.

ನಗರದ ಕಸಬಾ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನೂತನ ನಿರ್ದೇಶಕರಿಗೆ ಶುಕ್ರವಾರ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಕೆಲವರು ತಮ್ಮ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡಿದ್ದಾರೆ. ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸದಸ್ಯನಾಗಿ 12 ವರ್ಷಗಳಾಯಿತು. ಇಲ್ಲಿಂದ ಅಪೆಕ್ಸ್ ಬ್ಯಾಂಕ್ ಉಪಾಧ್ಯಕ್ಷ ಸ್ಥಾನವನ್ನೂ ಅಲಂಕರಿಸಿದ್ದೇನೆ. ಆದರೆ ನಾನೆಂದೂ ಭ್ರಷ್ಟಾಚಾರ ನಡೆಸಿಲ್ಲ. ಭ್ರಷ್ಟರಿಗೆ ರಕ್ಷಣೆಯನ್ನೂ ನೀಡಿಲ್ಲ. ಅದರ ಅವಶ್ಯಕತೆಯೂ ನನಗಿಲ್ಲ ಎಂದರು.

ನಮ್ಮ ತಾಲೂಕಿನ ಸಹಕಾರಿ ಸಂಘಗಳಿಗೆ ಈ ಸಾಲಿನ ಸಾಲಸೌಲಭ್ಯ ನೀಡುತ್ತಿಲ್ಲ ಎಂದು ಡಿಸಿಸಿ ಬ್ಯಾಂಕ್ ಮುಂದೆ ರೈತರೊಂದಿಗೆ ಪ್ರತಿಭಟನೆ ಮಾಡಿದ್ದೇನೆಯೇ ಹೊರತು ಯಾರನ್ನೂ ರಕ್ಷಿಸಲು ಅಲ್ಲ. ನಾನು ಭ್ರಷ್ಟಾಚಾರ ನಡೆಸಿದ್ದೇನೆ ಎನ್ನುವುದಾದರೆ ಸಿಐಡಿ, ಎಸ್‌ಐಟಿ, ಸಿಬಿಐ ಯಾವುದೇ ತನಿಖೆ ನಡೆಸಿದರೂ ಎದುರಿಸಲು ನಾನು ಸಿದ್ಧ. ಆದರೆ ಆರೋಪ ಮಾಡುವವರು ತಮ್ಮ ಆತ್ಮಸಾಕ್ಷಿಯೊಂದಿಗೆ ಮಾತನಾಡಬೇಕೆಂದು ಹೆಸರೇಳದೆ ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್ ಅವರಿಗೆ ತಿರುಗೇಟು ನೀಡಿದರು.



ಹುಣಸೂರು ನಗರದ ಕಸಬಾ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಶಾಸಕ ಜಿ.ಡಿ.ಹರೀಶ್‌ಗೌಡರನ್ನು ಬೆಳ್ಳಿ ಗದೆ ನೀಡಿ, ಸನ್ಮಾನಿಸಲಾಯಿತು.

ಭ್ರಷ್ಟರನ್ನು ಜೈಲಿಗೆ ಕಳುಹಿಸಿದ್ದೆ: ನಾನು ಡಿಸಿಸಿ ಬ್ಯಾಂಕ್ ಅಧ್ಯಕ್ಷನಾಗಿದ್ದಾಗ ಅಧಿಕಾರಿ ರಾಮಪ್ಪ ಪೂಜಾರಿ 27 ಕೋಟಿ ಹಗರಣ ನಡೆಸಿದ್ದನ್ನು ನಾನೇ ಬಯಲಿಗೆಳೆದು ಆತನ ಜೈಲಿಗಟ್ಟಿ ಸಂಘ ಉಳಿಸಿದ್ದೆ. ಅಂತಹ ವ್ಯಕ್ತಿಯ ಖಾತೆಯಿಂದ ಯಾರ್‍ಯಾರ ಖಾತೆಗೆ ಹಣ ಹರಿದಾಡಿದೆ ಎನ್ನುವುದನ್ನು ಸ್ಪಷ್ಟಪಡಿಸಬೇಕು. ಜೈಲಿಗಟ್ಟಿದ್ದ ವ್ಯಕ್ತಿಯನ್ನು ಮತ್ತೆ ಆಯಕಟ್ಟಿನ ಸ್ಥಳದಲ್ಲಿ ಕೂರಿಸಿದ್ಯಾರು?. ಧರ್ಮಾಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಅವ್ಯವಹಾರ ನಡೆಸಿದ ಕಾರ್ಯದರ್ಶಿ ವಿರುದ್ಧ ಪ್ರಕರಣ ದಾಖಲಿಸಲು ವಿಳಂಬವೇಕಾಯಿತು?. ನಾನು ಡಿಸಿಸಿ ಬ್ಯಾಂಕ್ ಮುಂದೆ ಪ್ರತಿಭಟನೆ ನಡೆಸಿದ ನಂತರ 91 ಮಂದಿಗೆ ಸಾಲ ದೊರಕಿದೆ. ಆಡಿಟ್ ಆಗದೇ ಡಿಸಿಸಿ ಬ್ಯಾಂಕ್ ಹೇಗೆ ಸಾಲ ನೀಡಿತು ಎನ್ನುವುದನ್ನು ಕಾಂಗ್ರೆಸ್ ಮುಖಂಡರು ಸ್ಪಷ್ಟಪಡಿಸಲಿ ಎಂದು ಆಗ್ರಹಿಸಿದರು.

ಜಾತಿ ಹೆಸರಲ್ಲಿ ಅಪಪ್ರಚಾರ: ತಾನು ಅಲ್ಪಸಂಖ್ಯಾತರು ಮತ್ತು ಹಿಂದುಳಿದ ಸಮಾಜದ ರಕ್ಷಕ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಮುಖಂಡ, ವಿಧಾನಸಭೆ ಚುನಾವಣೆ ವೇಳೆ ಹರೀಶ್‌ಗೌಡ ಗೆದ್ದರೆ ಒಕ್ಕಲಿಗರ ಹಾವಳಿಯಾಗಲಿದೆ ಎಂದು ಅಪಪ್ರಚಾರ ನಡೆಸಿದ್ದರು. ತಾಲೂಕಿನ ಸಿಬಿಟಿ ಕಾಲನಿ ಸೊಸೈಟಿ ಚುನಾವಣೆ ಕುರಿತಂತೆ ಅಲ್ಲಿನ ಗ್ರಾಮಸ್ಥರು, ಚುನಾವಣೆ ಬೇಡ, ಎಲ್ಲರೂ ಒಂದಾಗಿ ಹೋಗುತ್ತೇವೆ ಎಂದು ಕೇಳಿದ್ದರಿಂದ ನಾನು ಒಪ್ಪಿದೆ ಹೊರತು ಮತ್ಯಾರ ಮಾತಿಗೂ ಅಲ್ಲ ಎಂದು ಸ್ಪಷ್ಟಪಡಿಸಿದರು.

ಈ ವೇಳೆ ಸಂಘದ ವತಿಯಿಂದ ಶಾಸಕ ಹರೀಶ್ ಗೌಡರಿಗೆ ಬೆಳ್ಳಿ ಗದೆ ನೀಡಿ ಗೌರವಿಸಲಾಯಿತು. ನಿರ್ದೇಶಕರಾದ ವಾಸೇಗೌಡ, ಹೆಚ್.ಸಿ.ರವಿಕುಮಾರ್, ಮಹದೇವು, ರುದ್ರ ಬೋವಿ, ಪುಟ್ಟರಾಜು, ರಮೇಶ್, ಸುನಂದ, ಶಶಿಕಲಾ ಬಾಯಿ, ಗೀತಾ ನಿಂಗರಾಜು, ದಿವಾಕರ್, ಕೆ.ಎಸ್.ಬೀರೇಶ್ ಹಾಗೂ ಸದಸ್ಯರಿದ್ದರು.

ಐದನೇ ಪುಟದಿಂದ

152 ಸಾವು, 732 ಮಂದಿಗೆ ಗಾಯ

ಮೂರು ಜನರು ಸಾವನ್ನಪ್ಪಿದ್ದಾರೆ. ಹಲವಾರು ಕಟ್ಟಡಗಳು ಕುಸಿದು ರಸ್ತೆಗಳು ಬಿರುಕು ಬಿಟ್ಟಿದೆ. ಥೈಲ್ಯಾಂಡ್‌ನ ಹಲವಾರು ಭಾಗಗಳಲ್ಲಿಯೂ ಭೂಕಂಪದ ಅನುಭವವಾಯಿತು. ಭೂಕಂಪದ ನಂತರ ಬ್ಯಾಂಕಾಕ್‌ನಲ್ಲಿ ನಿರ್ಮಾಣ ಹಂತದಲ್ಲಿದ್ದ ಗಗನಚುಂಬಿ ಕಟ್ಟಡ ಕುಸಿದು ಕನಿಷ್ಠ ನಾಲ್ವರು ಸಾವನ್ನಪ್ಪಿದ್ದಾರೆ. ಹತ್ತಾರು ಮಂದಿ ಕಾರ್ಮಿಕರು ಅವಶೇಷಗಳಡಿ ಸಿಲುಕಿಕೊಂಡಿದ್ದಾರೆ ಎನ್ನಲಾಗಿದೆ.

ನೆರವಿಗೆ ಭಾರತ ಸಿದ್ಧ: ಮ್ಯಾನ್ಮಾರ್ ಮತ್ತು ಥಾಯ್ಲೆಂಡ್‌ನಲ್ಲಿ ಸಂಭವಿಸಿದ ಭೀಕರ ಭೂಕಂಪಕ್ಕೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದು, ಭಾರತ ಎಲ್ಲಾ ರೀತಿಯ ನೆರವು ನೀಡಲು ಸಿದ್ಧವಿದೆ ಎಂದು ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ಮ್ಯಾನ್ಮಾರ್ ಮತ್ತು ಥಾಯ್ಲೆಂಡ್‌ನಲ್ಲಿ ಸಂಭವಿಸಿರುವ ಭೂಕಂಪದಲ್ಲಿ ಎಲ್ಲರೂ ಸುರಕ್ಷಿತವಾಗಿರಲಿ ಎಂದು ಬೇಡಿಕೊಳ್ಳುತ್ತೇನೆ. ಎಲ್ಲಾ ರೀತಿಯ ನೆರವಿಗೆ ಭಾರತ ಸಿದ್ಧವಿದೆ. ವಿದೇಶಾಂಗ ಸಚಿವಾಲಯವು ಎರಡೂ ದೇಶಗಳ ಸರ್ಕಾರಗಳೊಂದಿಗೆ ಸಂಪರ್ಕದಲ್ಲಿ ಇರಲಿದೆ ಎಂದು ಬರೆದುಕೊಂಡಿದ್ದಾರೆ.

7.7ರಷ್ಟು ತೀವ್ರತೆಯ ಭೂಕಂಪ ಮ್ಯಾನ್ಮಾರ್‌ನ ಮಧ್ಯ ಭಾಗದಲ್ಲಿ ಶುಕ್ರವಾರ ಸಂಭವಿಸಿದ್ದು, ಥಾಯ್ಲೆಂಡ್ ರಾಜಧಾನಿ ಬ್ಯಾಂಕಾಕ್ ಮೇಲೂ ಪರಿಣಾಮ ಬೀರಿದೆ. ಬ್ಯಾಂಕಾಕ್‌ನಲ್ಲಿ ಮುಗಿಲೆತ್ತರದ ಕಟ್ಟಡಗಳು ನಡುಗುವ, ನಿರ್ಮಾಣ ಹಂತದ ಕಟ್ಟಡ ನೆಲಕ್ಕುರುಳುವ ಭಯಾನಕ ದೃಶ್ಯಗಳ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ಮೊದಲು ನನಗೆ ತಲೆ ಸುತ್ತುತ್ತಿದೆ ಎಂದು ಭಾವಿಸಿದ್ದೆ!

ಥೈಲ್ಯಾಂಡ್ ಭೂಕಂಪದ ಭಯಾನಕ ಚಿತ್ರಣ ಬಿಚ್ಚಿಟ್ಟ ಕನ್ನಡಿಗ

ಬ್ಯಾಂಕಾಕ್: ಭೂಕಂಪದ ಬಳಿಕ ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿ ಸಿಲುಕಿರುವ ಕನ್ನಡಿಗ ಯೋಗೇಶ್, ಭೂಕಂಪದ ತೀವ್ರತೆಯನ್ನು ಎಳೆ ಎಳೆಯಾಗಿ ಬಿಚ್ಚಿಟ್ಟಿದ್ದಾರೆ.

1:15ರ ಸಮಯದಲ್ಲಿ ಭೂಕಂಪದ ಅನುಭವ ಆಯ್ತು. ನನಗೆ ತಲೆ ಸುತ್ತುತ್ತಿದೆ ಎಂದು ಭಾವಿಸಿದೆ. ಬಳಿಕ ಅಲ್ಲಿಂದ ಹೊರಗೆ ಓಡಿ ಬಂದು ಪಾರಾಗಿದ್ದೇವೆ ಎಂದಿದ್ದಾರೆ. ನಾವೆಲ್ಲ 10ನೇ ಮಹಡಿಯಲ್ಲಿ ಇದ್ವಿ, ಭಾರತದ ಸುಮಾರು 500 ಜನ ಇದ್ದಾರೆ ಇಲ್ಲಿ. ಎಲ್ಲರೂ ಕ್ಷೇಮವಾಗಿದ್ದಾರೆ. ಹೋಟೆಲ್‌ನವರು ಮೊದಲು ಅಲ್ಲಿಂದ ಓಡಿಹೋದರು. ಆಮೇಲೆ ನಾವೆಲ್ಲ ಅಲ್ಲಿಂದ ಸುರಕ್ಷಿತ ಸ್ಥಳಕ್ಕೆ ಬಂದಿದ್ದೇವೆ ಎಂದಿದ್ದಾರೆ. ನಾವಿದ್ದ ಹೋಟೆಲ್‌ನ ಮಹಡಿ ಮೇಲಿನ ಸ್ವಿಮ್ಮಿಂಗ್ ಪೂಲ್‌ನಿಂದ ನೀರು ಕೆಳಗೆ ಚೆಲ್ಲಿದೆ. ಕಟ್ಟಡಗಳು ಬಿರುಕು ಬಿಟ್ಟಿವೆ. ಮಾ.31ರ ತನಕ ಇಲ್ಲಿರುವ ಪ್ಲ್ಯಾನ್ ಮಾಡಿದ್ವಿ, ಮುಂದೆ ಏನು ಮಾಡಬೇಕು ಎಂದು ಯೋಚಿಸುತ್ತಿದ್ದೇವೆ ಎಂದಿದ್ದಾರೆ.

70 ಲಕ್ಷ ಸುಪಾರಿ ಕೊಡಲಾಗಿದೆ

ನನಗೆ ಅಪರಿಚಿತರಿಂದ ಫೋನ್ ಕಾಲ್, ಮೆಸೇಜ್, ವೀಡಿಯೋ ಕಾಲ್ ಬರುತಿತ್ತು ಎಂದಷ್ಟೇ ಹೇಳಿದ್ದೆ. ಈಗ ನನ್ನ ಹತ್ಯೆಗೆ ಸುಪಾರಿ ಕೊಟ್ಟಿದ್ದರ ಬಗ್ಗೆ ದೂರು ನೀಡಿ, ಎಫ್‌ಐಆರ್ ಮಾಡುವಂತೆ ಕೇಳಿ ಕೊಂಡಿದ್ದೇನೆ. ಕ್ಯಾತ್ಸಂದ್ರ ಠಾಣೆಯಲ್ಲಿ ಎಫ್‌ಐಆರ್ ಮಾಡುತ್ತೇನೆ ಎಂದಿದ್ದಾರೆ ಎಂದು ತಿಳಿಸಿದ್ದಾರೆ. ಮಗಳ ಹುಟ್ಟುಹಬ್ಬದ ಸಂದರ್ಭದಲ್ಲಿ ಅಂದರೆ ಕಳೆದ ನವೆಂಬರ್ ತಿಂಗಳಲ್ಲಿ ನನ್ನ ಕೊಲೆ ಸಂಚು ರೂಪಿಸಲಾಗಿತ್ತು. ನನ್ನ ಕಾರಿಗೆ ಜಿಪಿಎಸ್ ಅಳವಡಿಸಲು ಪ್ಲಾನ್ ಮಾಡಿದ್ದರು. ಇಡೀ ರಾಜ್ಯದಲ್ಲಿ ನನ್ನ ಮೇಲೆ ಯಾರಿಗೂ ದ್ವೇಷ ಇಲ್ಲ. ನಾನೇನು ರಿಯಲ್ ಎಸ್ಟೇಟ್ ಮಾಡುತ್ತಿಲ್ಲ. ಯಾಕೆ ಸುಪಾರಿ ಕೊಟ್ಟರು ಎಂಬುದು ಗೊತ್ತಿಲ್ಲ. ಅದನ್ನು ತನಿಖೆ ಮಾಡುವಂತೆ ಹೇಳಿದ್ದೇನೆ. ಸೋಮ ಮತ್ತು ಭರತ್ ಅನ್ನುವವರ ಹೆಸರು ಆಡಿಯೋದಲ್ಲಿ ಇದೆ. ಅವರು ಯಾರು ಎಂಬುದು ಗೊತ್ತಿಲ್ಲ. ಒಬ್ಬ ಲೇಡಿ ಮತ್ತು ಹುಡುಗ 18 ನಿಮಿಷ ಆಡಿಯೋದಲ್ಲಿ ಮಾತನಾಡಿದ್ದಾರೆ ಸುಪಾರಿ ತಂಡದಲ್ಲಿ 20 ಮಂದಿ ಇದ್ದಾರೆ ಎಂದು ರಾಜೇಂದ್ರ ತಿಳಿಸಿದರು.

ಹನಿಟ್ರ್ಯಾಪ್ ಮತ್ತು ಸುಪಾರಿ ವಿಚಾರ ಬೇರೆ ಬೇರೆ. ಹನಿಟ್ರ್ಯಾಪ್ ವಿಚಾರ ಸಿಐಡಿ ಅಧಿಕಾರಿ ವಂಶಿಕೃಷ್ಣ ನೇತೃತ್ವದಲ್ಲಿ ನಡೀತಿದೆ. ಬೆಂಗಳೂರು ಭೂಗತ ಲೋಕದ ಕೈವಾಡದ ಬಗ್ಗೆ ಗೊತ್ತಿಲ್ಲ. ನನಗೆ ಹೆಚ್ಚಿನ ಭದ್ರತೆ ಬೇಕು ಎಂದು ಕೇಳಿಕೊಂಡಿದ್ದೇನೆ ಎಂದು ಹೇಳಿದ್ದಾರೆ.

ವರಿಷ್ಠರಿಗೆ ವರದಿ

ಅವರೊಂದಿಗೆ ಸಮಾಲೋಚನೆ ಮಾಡಿ ಹಾಲಿ ಟೆಂಡರ್ ರದ್ದುಗೊಳಿಸಿ, ಹೊಸ ಟೆಂಡರ್ ಕರೆಯಲು ಸೂಚಿಸುವಂತೆ ಕೋರಿದ್ದಾರೆ. ಜಿಲ್ಲಾ, ತಾಲೂಕು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಪಕ್ಷ ಸಿದ್ಧವಿದೆ, ಮೇ, ಜೂನ್‌ನಲ್ಲಿ ಈ ಚುನಾವಣೆಗಳನ್ನು ನಡೆಸಲು ಸಂಬಂಧಪಟ್ಟ ಸಂಸ್ಥೆಗಳು ಮುಂದಾದರೆ ನಾವೂ ಸಿದ್ಧ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷ ತುಂಬುತ್ತಿರುವ ಸಂದರ್ಭದಲ್ಲಿ, ಕೆಲಮಟ್ಟದ ಕಾರ್ಯಕರ್ತರಿಗೆ ಅಧಿಕಾರ ನೀಡಲು ಸಾಧ್ಯವಾಗಿಲ್ಲ. ಎಲ್ಲಾ ನಿಗಮಗ ಮಂಡಳಿ, ಸಹಕಾರಿ ಮತ್ತು ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಮತ್ತು ಸದಸ್ಯರ ನೇಮಕಾತಿ ಮಾಡುವಂತೆ ಮುಖ್ಯಮಂತ್ರಿ ಅವರಿಗೆ ನಿರ್ದೇಶನ ನೀಡುವಂತೆಯೂ ಶಿವಕುಮಾರ್ ಕೋರಿದ್ದಾರೆ. ಬರುವ ಮೇನಲ್ಲಿ ಸರ್ಕಾರಕ್ಕೆ ಎರಡು ವರ್ಷಗಳು ತುಂಬಲಿದ್ದು, ವಿಭಾಗೀಯ ಮಟ್ಟದಲ್ಲಿ ಬೃಹತ್ ಸಮಾವೇಶಗಳನ್ನು ನಡೆಸಿ ನಮ್ಮ ಸಾಧನೆಗಳನ್ನು ಬಿಂಬಿಸೋಣ, ಈ ಎಲ್ಲಾ ಕಾರ್ಯಕ್ರಮಗಳಿಗೆ ನೀವೂ ಸೇರಿದಂತೆ ಪಕ್ಷದ ಹಿರಿಯ ಮುಖಂಡರು ಪಾಲ್ಗೊಳ್ಳಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಯತ್ನಾಳ್ ಉಚ್ಚಾಟನೆ ಹಿಂಪಡೆಯಿರಿ

ವೀರಶೈವ ಲಿಂಗಾಯತರು, ಹಿಂದೂ ಸಂಘಟನೆಗಳು ಮತ್ತು ಬಿಜೆಪಿ ಕಾರ್ಯಕರ್ತರಿಂದಲೂ ಬೇಡಿಕೆ ಇದೆ ಎಂದು ಹೇಳಿದರು. ಯತ್ನಾಳ್ ಅವರಂತಹ ದಿಟ್ಟ ಹಿಂದೂ ಮತ್ತು ಸಂಘಟನಾ ಹಿನ್ನೆಲೆಯನ್ನು ಹೊಂದಿರುವ ಕಾರ್ಯಕರ್ತರನ್ನು ಪಕ್ಷ ಎಂದಿಗೂ ಕೈಬಿಡುವುದಿಲ್ಲ ಎಂಬ ಭರವಸೆಯನ್ನು ವ್ಯಕ್ತಪಡಿಸಿದ ಬಂಗಾರಪ್ಪ, ಅವರನ್ನು ಉಚ್ಚಾಟನೆ ಮಾಡಿದ್ದು 'ಕೆಟ್ಟ ಘಟನೆ' ಎಂದು ಬಿಂಬಿಸಲು ಪ್ರಯತ್ನಿಸಿದರು. ನಮ್ಮಂತಹ ಸಣ್ಣ ಕಾರ್ಯಕರ್ತರಿಂದ ಏನಾದರೂ ತಪ್ಪು ಸಂಭವಿಸಿದ್ದರೆ, ಯತ್ನಾಳ್ ಸೇರಿದಂತೆ ನಾವೆಲ್ಲರೂ ಸರಿಪಡಿಸಿಕೊಂಡು ಮುಂದುವರಿಯಲು ಸಿದ್ಧರಿದ್ದೇವೆ. ಪಕ್ಷವು ನಮಗೆ ನೀಡುವ ಅಥವಾ ಸೂಚಿಸುವ ಯಾವುದೇ ಸೂಚನೆಗಳಿಗೆ ನಾವು ಬದ್ಧರಾಗಿರುತ್ತೇವೆ ಮತ್ತು ಆ ಹಾದಿಯಲ್ಲಿ ಮುನ್ನಡೆಯುತ್ತೇವೆ. ಆದರೆ ರಾಜ್ಯ ಬಿಜೆಪಿಯಲ್ಲಿ ಬದಲಾವಣೆಗಳಿಗಾಗಿ ನಾವು ನಮ್ಮ ಹೋರಾಟವನ್ನು ಮುಂದುವರಿಸುತ್ತೇವೆ ಎಂದು ಅವರು ಹೇಳಿದರು.

ಪೊನ್ನಂಪೇಟೆ ಬಳಿ ನಾಲ್ವರ ಕಗ್ಗೊಲೆ

ಈಕೆಯನ್ನು ಬಿಟ್ಟು ಆಕೆಯ ತಂಗಿಯನ್ನೇ ಮದುವೆಯಾಗಿ ಬೇಗೂರಿನಲ್ಲೇ ವಾಸವಾಗಿದ್ದಾನೆ. ಗಿರೀಶ್‌ನನ್ನು ನಾಗಿ ಮದುವೆಯಾದ ಬಳಿಕವೂ ತನ್ನ ಎರಡನೇ ಗಂಡ ಸುಬ್ರಮಣಿ ಜೊತೆ ಆಕೆ ಸಂಬಂಧ ಇಟ್ಟುಕೊಂಡಿದ್ದಳು ಎಂಬುದು ಇತ್ತೀಚೆಗೆ ಗಿರೀಶನಿಗೆ ತಿಳಿದು ಬಂದಿದೆ. ಈ ಸಂಬಂಧ ಆತ ಆಕ್ಷೇಪ ವ್ಯಕ್ತಪಡಿಸಿದಾಗ ಆತನನ್ನು ಕೇರಳಾಗೆ ಹೋಗಿ ಬಿಡುವಂತೆ ನಾಗಿ ಪಟ್ಟು ಹಿಡಿದಿದ್ದಾಳೆ. ಆದರೆ ತಾನು ನಿನಗಾಗಿ (ನಾಗಿ) ಹೆಂಡತಿಯನ್ನು ಬಿಟ್ಟು ಬಂದಿದ್ದು, ಈಗ ಹೋಗು ಎಂದರೆ ಹೇಗೆ? ಎಂದು ಗಿರೀಶ್ ತಗಾದೆ ತೆಗೆದಾಗ ಮಾತಿಗೆ ಮಾತು ಬೆಳೆದು ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಪತ್ನಿ ನಾಗಿಯನ್ನು ಗಿರೀಶ ಕೊಚ್ಚಿ ಕೊಲೆ ಮಾಡಲು ಮುಂದಾದ ವೇಳೆ ಆಕೆಯ ಕಂಕುಳಲ್ಲಿದ್ದ ಬಾಲಕಿ ಕಾವೇರಿಗೆ ಮಚ್ಚಿನೇಟು ತಗುಲಿ ಮೃತಪಟ್ಟಿದ್ದಾಳೆ. ತಡೆಯಲು ಬಂದ ಕರಿಯ ಮತ್ತು ಗೌರಿಯನ್ನು ಕೂಡ ಕೊಚ್ಚಿ ಕೊಲೆ ಮಾಡಿ ಗಿರೀಶ ಕೇರಳಾಗೆ ಪರಾರಿಯಾಗಿದ್ದ. ಕೊಡಗು ಪೊಲೀಸರು ರವಾನಿಸಿದ್ದ ಸಂದೇಶವನ್ನಾಧರಿಸಿ ಮೊದಲನೇ ಪತ್ನಿ ಮನೆಯಲ್ಲಿದ್ದ ಗಿರೀಶನನ್ನು ವೈನಾಡು ಜಿಲ್ಲೆ ತಾಲಪೋಯ ಠಾಣೆಯ ಎಎಸ್‌ಐ ಟಿ.ಅನೀಶ್, ವಿಶೇಷ ವಿಭಾಗದ ಠಾಣಾಧಿಕಾರಿ ಜೆ.ಅನಿಲ್ ಮತ್ತು ಸಿಬ್ಬಂದಿ ಶಫೀರ್ ಅವರುಗಳು ವಶಕ್ಕೆ ಪಡೆದು, ಕೊಡಗು ಪೊಲೀಸರಿಗೆ ಮಾಹಿತಿ ನೀಡಿದ್ದರು. ತಕ್ಷಣವೇ ಕೇರಳಾಗೆ ತೆರಳಿದ ಕೊಡಗು ಪೊಲೀಸರ ವಿಶೇಷ ತಂಡ ಆರೋಪಿ ಗಿರೀಶನನ್ನು ಬಂಧಿಸಿ, ರಾತ್ರಿ ವೇಳೆಗೆ ಪೊನ್ನಂಪೇಟೆಗೆ ಕರೆತಂದು ವಿಚಾರಣೆಗೊಳಪಡಿಸಿದೆ.

ದಕ್ಷಿಣ ವಲಯದ ಡಿಐಜಿ ಡಾ. ಬೋರಲಿಂಗಯ್ಯ, ಕೊಡಗು ಜಿಲ್ಲಾ ಎಸ್ಪಿ ಕೆ.ರಾಮರಾಜು, ಅಡಿಷನಲ್ ಎಸ್ಪಿ ಸುಂದರ ರಾಜ್, ವಿರಾಜಪೇಟೆ ಡಿವೈಎಸ್‌ಪಿ ಮೋಹನ್ ಕುಮಾರ್, ಗೋಣಿಕೊಪ್ಪ ಸರ್ಕಲ್ ಇನ್ಸ್‌ಪೆಕ್ಟರ್ ಪ್ರಕಾಶ್ ಮತ್ತಿತರ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದರು. ವಿಧಿ–ವಿಜ್ಞಾನ ಪ್ರಯೋಗಾಲಯದ ಸಿಬ್ಬಂದಿ ಪರಿಶೀಲನೆ ನಡೆಸಿದ್ದರು.

ಕಪಾಳ ಮೋಕ್ಷ

ಎರಡನೇ ಬಾರಿಗೆ ಬಂದಿದ್ದ ಯುವತಿ ಸಚಿವ ರಾಜಣ್ಣ ಅವರ ತೀರಾ ಸನಿಹಕ್ಕೆ ಬಂದು ಕೈಹಿಡಿದು ಬಲವಂತವಾಗಿ ಮಾತನಾಡಿಸಲು ಮುಂದಾದಳು. ಅಪರಿಚಿತ ಯುವತಿ ಒಮ್ಮೆಲೇ ಕೈಹಿಡಿಯುತ್ತಿದ್ದಂತೆ ಸಿಟ್ಟಿಗೆದ್ದ ರಾಜಣ್ಣ, ಆಕೆಗೆ ಕಪಾಳ ಮೋಕ್ಷ ಮಾಡಿದರು. ಆಗ ಗಡ್ಡಧಾರಿ ಯುವಕನೊಂದಿಗೆ ಬಂದಿದ್ದ ಆ ಯುವತಿ ಅಲ್ಲಿಂದ ಕಾಲ್ಕಿತ್ತಳು. ಯುವತಿಯರು ಎರಡು ಬಾರಿ ಬಂದಾಗಲೂ ಗಡ್ಡಧಾರಿ ಯುವಕನೊಬ್ಬ ಜೊತೆಗಿದ್ದ. ಆದರೆ, ಆ ಯುವಕ ಯಾರೆಂಬುದು ತಿಳಿದಿಲ್ಲ ಎಂದಿದ್ದಾರೆ.

ಇದನ್ನೇ ರಾಜಣ್ಣ ಅವರು ತಮ್ಮ ದೂರಿನಲ್ಲೂ ತಿಳಿಸಿ, ಆ ತಂಡವನ್ನು ಗುರುತಿಸಬಲ್ಲೆ ಎಂದು ಹೇಳಿದ್ದರು.

ಸಚಿವರು ಉಲ್ಲೇಖಿಸಿರುವ ಸ್ಥಳಗಳಿಗೆ ಇಂದು ಅಧಿಕಾರಿಗಳ ತಂಡ ಭೇಟಿ ನೀಡಿ ಮಾಹಿತಿ ಸಂಗ್ರಹಕ್ಕೆ ಕಸರತ್ತು ನಡೆಸಿತು.

ಘಟನೆ ನಡೆದ ದಿನ, ಸ್ಥಳದಲ್ಲಿ ಇದ್ದವರು ಯಾರು ಎಂಬ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಸಚಿವರ ಓಎಸ್‌ಡಿ, ಪಿಎ, ಪಿಎಸ್, ಗನ್‌ಮ್ಯಾನ್, ಸೆಕ್ಯೂರಿಟಿ ಹಾಗೂ ಮನೆ ಸಿಬ್ಬಂದಿಗಳಿಂದ ಮಾಹಿತಿ ಸಂಗ್ರಹಿಸಲಾಯಿತು. ಸಚಿವರ ಮನೆಯಲ್ಲೇ ಸಿಸಿಟಿವಿ ಇಲ್ಲದ್ದನ್ನು ಕೇಳಿ ಅಧಿಕಾರಿಗಳಿಗೆ ಶಾಕ್ ಆಗಿದ್ದು, ಅವರ ಸರ್ಕಾರಿ ನಿವಾಸಕ್ಕೆ ಬಂದು–ಹೋಗುವವರ ಮೇಲೆ ಯಾವುದೇ ಕಣ್ಗಾವಲು ಇಲ್ಲ. ಹೀಗಾಗಿ ಸಚಿವ ರಾಜಣ್ಣ ಮನೆಯ ಸುತ್ತಮುತ್ತಲ ಪ್ರದೇಶದ ಸಿಸಿಟಿವಿಗಳಿಂದ ದೃಶ್ಯಗಳನ್ನು ಸಂಗ್ರಹಿಸುವ ಯತ್ನ ನಡೆದಿದೆ.

ಮಾರ್ಚ್‌ನ ಮೊದಲ ವಾರದಲ್ಲಿ ಹಾಗೂ ತದನಂತರದ 15 ದಿನಗಳಲ್ಲಿ ಈ ಪ್ರಯತ್ನಗಳು ನಡೆದಿದ್ದು, ಈ ದಿನಗಳ ದೃಶ್ಯ ಸಂಗ್ರಹಕ್ಕೆ ತಂಡ ಪ್ರಯತ್ನಿಸುತ್ತಿದೆ.

ದೂರಿನಲ್ಲಿ ಘಟನೆಗಳ ಸ್ಪಷ್ಟತೆ ಇಲ್ಲದಿರುವುದರಿಂದ ಸಚಿವರಿಗೇ ನೋಟಿಸ್ ನೀಡಿ ಮಾಹಿತಿ ಪಡೆಯಲು ಅಧಿಕಾರಿಗಳು ನಿರ್ಧರಿಸಿದ್ದಾರೆ ಎನ್ನಲಾಗಿದೆ.

ಉಚಿತ ತಪಾಸಣಾ ಶಿಬಿರ

ಮೈಸೂರು, ಮಾ. 28– ಮೈಸೂರಿನ ಶಾರಾವಿ ಫೌಂಡೇಶನ್ ವತಿಯಿಂದ ಗೋಕುಲಂನಲ್ಲಿರುವ ಭ್‌ವೇದ್ ಆಯುರ್ವೇದ ಸಹಯೋಗದೊಂದಿಗೆ ಮಾ. 29 ರಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 1 ರವರೆಗೆ ಮೂಳೆ ಮತ್ತು ಸಂಧಿಗಳ ಸಮಸ್ಯೆಗೆ ಉಚಿತ ಆಯುರ್ವೇದ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9916200341 ಸಂಪರ್ಕಿಸಬಹುದು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ವೀರ ಧೀರ ಶೂರನ್–2 (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮನದ ಕಡಲು (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಬಡಾಸ್ ರವಿಕುಮಾರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಬ್ಯಾಡ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಅಪ್ಪು (ಕ)	4 ಪ್ರದರ್ಶನಗಳು
ರಾಜಕಮಲ್	
L2 ಎಂಪುರಾನ್ (ತ)	4 ಪ್ರದರ್ಶನಗಳು
ಸಂಗಂ	
ಬರ್ಗೆಟ್ ಬಸ್ಯಾ (ಕ)	4 ಪ್ರದರ್ಶನಗಳು
ಲಿಡೋ	
ಫಾರೆಸ್ಟ್(ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಭಗೀರಥ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಡಿಸ್ನಿ ಸ್ನೋ ವೈಟ್ (ಇಂ): ಬೆ.9.55ಕ್ಕೆ, ಮ.12.20ಕ್ಕೆ, ಮ.2.40ಕ್ಕೆ, ಸಂ.5ಕ್ಕೆ, ದಿ ಡಿಪ್ಲೊಮೆಟ್ (ಹಿಂ): ರಾ.7.20ಕ್ಕೆ, ಯಾರಿಯನ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 2	ಬರ್ಗೆಟ್ ಬಸ್ಯಾ (ಕ): ಬೆ.10.20ಕ್ಕೆ, ಅಸ್ತ್ರಂ (ತ): ಮ.1.10ಕ್ಕೆ, ಕೋರ್ಟ್ ಸ್ಟೇಟ್ V/s ಎ ನೋಬಡಿ (ತೆ): ಮ.3.55ಕ್ಕೆ, ತುಮ್ಕೊ ಮೇರಿ ಕಸಮ್ (ಹಿಂ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಬಳ್ಳಾರಿ ಜಿಲ್ಲೆ ಬಳ್ಳಾರಿ ತಾಲೂಕು ಗ್ರಾಮ ಯಾಳ್ಪಿ (ಕ): ಬೆ.10.35ಕ್ಕೆ, ಡ್ರ್ಯಾಗನ್ (ತ): ಮ.1.05ಕ್ಕೆ, ಪಿಂಟು ಕಿ ಪಪ್ಪಿ (ಹಿಂ): ಸಂ.4.15ಕ್ಕೆ, ಛಾವಾ (ಹಿಂ): ರಾ.7ಕ್ಕೆ, ಘಾತಕ್ (ಹಿಂ): ಬೆ.10.15ಕ್ಕೆ.
ಸ್ಕ್ರೀನ್ 4	ಡ್ರ್ಯಾಗನ್ (ತ): ಬೆ.10.20ಕ್ಕೆ, ಅಪ್ಪು (ಕ): ಮ.1.30ಕ್ಕೆ, ಷಣ್ಮುಖ (ತೆ): ಸಂ.4.15ಕ್ಕೆ, ರಾ.9.45ಕ್ಕೆ, ಡಿಸ್ನಿ ಸ್ನೋ ವೈಟ್ (ಇಂ): ರಾ.7.05ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಫಾರೆಸ್ಟ್ (ಕ): ಮ.1.45ಕ್ಕೆ, ಬಳ್ಳಾರಿ ಜಿಲ್ಲೆ ಬಳ್ಳಾರಿ ತಾಲೂಕು ಗ್ರಾಮ ಯಾಳ್ಪಿ (ಕ): ಸಂ.6.35ಕ್ಕೆ ಅಸ್ತ್ರಂ (ತ): ರಾ.7ಕ್ಕೆ, ಷಣ್ಮುಖ (ತೆ): ರಾ.9.15ಕ್ಕೆ.
ಸ್ಕ್ರೀನ್ 2	ಪಿಂಟು ಕಿ ಪಪ್ಪಿ (ಹಿಂ): ಮ.1.15ಕ್ಕೆ, ಮ.3.55ಕ್ಕೆ, ಛಾವಾ (ಹಿಂ): ಸಂ.6.30ಕ್ಕೆ, ತುಮ್ಕೊ ಮೇರಿ ಕಸಮ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಡಿಸ್ನಿ ಸ್ನೋ ವೈಟ್ (ಇಂ): ಮ.1.30ಕ್ಕೆ, ಸಂ.4.05ಕ್ಕೆ, ರಾ.9.20ಕ್ಕೆ, ತುಮ್ಕೊ ಮೇರಿ ಕಸಮ್ (ಹಿಂ): ಸಂ.6.15ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪ್ಯಾಕೇಜ್‌ಗೆ ಕೇಂದ್ರ ಅನುಮೋದನೆ

ಪ್ರದೇಶಕ್ಕೆ ಒಂದು ಪ್ರಮುಖ ಮೈಲಿಗಲ್ಲು. ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರೊಂದಿಗಿನ ನನ್ನ ಇತ್ತೀಚಿನ ಸಭೆಯಲ್ಲಿ ಈ ಯೋಜನೆಯ ಸವಾಲುಗಳು ಮತ್ತು ಸಮಸ್ಯೆಗಳನ್ನು ವೈಯಕ್ತಿಕವಾಗಿ ವಿವರಿಸಲು ನನಗೆ ಅವಕಾಶ ಸಿಕ್ಕಿತು. ಅವರು ತ್ವರಿತ ಕ್ರಮ ಕೈಗೊಳ್ಳುವುದಾಗಿ ನನಗೆ ಭರವಸೆ ನೀಡಿದ್ದರು. ಇದೀಗ ಭರವಸೆ ನೀಡಿದಂತೆ 3ನೇ ಪ್ಯಾಕೇಜ್‌ಗೆ ಅನುಮೋದನೆ ನೀಡಿದ್ದಾರೆ. ಈ ಹೆದ್ದಾರಿ ಯೋಜನೆಯು ಸಂಪರ್ಕವನ್ನು ಹೆಚ್ಚಿಸುವಲ್ಲಿ, ಪ್ರಯಾಣವನ್ನು ಸುಗಮಗೊಳಿಸುವಲ್ಲಿ ಹಾಗೂ ಮೈಸೂರು – ಕೊಡಗಿನ ಆರ್ಥಿಕ ಮತ್ತು ಒಟ್ಟಾರೆ ಅಭಿವೃದ್ಧಿಗೆ ಕೊಡುಗೆ ನೀಡುವಲ್ಲಿ ಬಹಳ ಮಹತ್ವದ್ದಾಗಿದೆ ಎಂದು ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಭೂಸ್ವಾಧೀನ ಪ್ರಕ್ರಿಯೆ ಶೀಘ್ರ ಪೂರ್ಣ: ಮೈಸೂರು–ಕುಶಾಲನಗರ ಚತುಷ್ಪಥ ಹೆದ್ದಾರಿ ಕಾಮಗಾರಿ ಪ್ರಾರಂಭಿಸಲು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳ್ಳುವ ಹಂತದಲ್ಲಿದೆ. 2ನೇ ಹಂತದ ಕಾಮಗಾರಿಗೆ ಶೇ.84 ರಷ್ಟು, 3ನೇ ಹಂತದ ಕಾಮಗಾರಿಗೆ ಶೇ.80 ರಷ್ಟು, 4ನೇ ಹಂತದ ಕಾಮಗಾರಿಗೆ ಶೇ.70 ರಷ್ಟು ಮತ್ತು 5ನೇ ಹಂತದ ಕಾಮಗಾರಿಗೆ ಶೇ.84 ರಷ್ಟು ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಪಿರಿಯಾಪಟ್ಟಣ ಮತ್ತು ಕುಶಾಲನಗರ ನಡುವಿನ ರಸ್ತೆ ಅಗಲೀಕರಣ ಚಟುವಟಿಕೆಗಳಿಗೆ ಅರಣ್ಯ ಇಲಾಖೆಯಿಂದ ಅನುಮತಿ ಪಡೆಯಬೇಕಿದೆ ಎಂದು ಮೂಲಗಳು ತಿಳಿಸಿವೆ. ಮಹತ್ವಾಕಾಂಕ್ಷಿ ಯೋಜನೆಯಾದ ಮೈಸೂರು–ಕುಶಾಲನಗರ ಚತುಷ್ಪಥ ಹೆದ್ದಾರಿಯು 2027ರ ಜೂನ್ ತಿಂಗಳ ಒಳಗೆ ಪೂರ್ಣಗೊಳ್ಳಲಿದೆ ಎಂದು ಸಂಸದ ಯದುವೀರ್ ಒಡೆಯರ್ ತಿಳಿಸಿದ್ದಾರೆ.

'ಸಿಎಂ' ಆಪ್ತ ಸಚಿವರ ಶಪಥ

ರಾಷ್ಟ್ರೀಯ ಅಧ್ಯಕ್ಷ ಹಾಗೂ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರೊಂದಿಗೆ ನಡೆಸಿದ ಮಾತುಕತೆಯ ವಿವರಗಳನ್ನು ತಮ್ಮ ಸಹೋದ್ಯೋಗಿಗಳಿಗೆ ನೀಡಿದ್ದಾರೆ.

ಕರ್ನಾಟಕದಲ್ಲಿ ಪಕ್ಷದ ನಾಯಕರುಗಳನ್ನೇ ಹತ್ತಿಕ್ಕುವ ಕಾರ್ಯ ಹೇಗೆ ನಡೆಯುತ್ತಿದೆ ಎಂಬುದನ್ನು ವೇಣುಗೋಪಾಲ್ ಅವರಿಗೆ ವಿವರಿಸಿದ್ದೇನೆ. ಅಷ್ಟೇ ಅಲ್ಲ, ನಾವು ಹಿಂದಿನ ಸಭೆಗಳಲ್ಲಿ ಕೈಗೊಂಡ ನಿರ್ಣಯಗಳನ್ನೂ ಅವರ ಗಮನಕ್ಕೆ ತಂದಿದ್ದೇನೆ.

ದೇವೇಗೌಡ ಮತ್ತು ಕುಮಾರಸ್ವಾಮಿ ಅವರ ಜೊತೆ ನಡೆಸಿದ ರಾಜಕೀಯ ವಿಚಾರಗಳನ್ನೂ ಸತೀಶ್, ತಮ್ಮ ಆಪ್ತರೊಂದಿಗೆ ಹಂಚಿಕೊಂಡಿದ್ದಾರೆ. ಹನಿಟ್ರ್ಯಾಪ್ ಹಾಗೂ ಕೊಲೆ ಯತ್ನ ಪ್ರಕರಣದ ತನಿಖೆ ನಡೆಸಿ, ಅದರ ಹಿಂದಿರುವ ಕೈಗಳನ್ನು ಬಹಿರಂಗಪಡಿಸಿ ಎಂದು ಅಲ್ಲಿಯೇ ಇದ್ದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಸಭೆ ಒತ್ತಾಯಿಸಿದೆ.

ಜೆಡಿಎಸ್ ಬೆಂಬಲದ ಅಗತ್ಯವಿಲ್ಲ: ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ಸತೀಶ್ ಜಾರಕಿಹೊಳಿ, ಜೆಡಿಎಸ್‌ನ 18 ಶಾಸಕರ ಬೆಂಬಲ ಪಡೆಯುವ ಅಗತ್ಯ ನಮಗಿಲ್ಲ. ಅವರನ್ನು ತೆಗೆದುಕೊಂಡು ನಾವೇನು ಮಾಡೋಣ ಎಂದಿದ್ದಾರೆ.

ನಮ್ಮಲ್ಲೇ ಓವರ್‌ಲೋಡ್ ಆಗಿದೆ, ಇನ್ನು ಅವರನ್ನೂ ತೆಗೆದುಕೊಂಡು ಏನು ಮಾಡೋಣ, ನಾನು ಈ ಪಕ್ಷದಲ್ಲಿಯೇ ಮುಖ್ಯಮಂತ್ರಿ ಆಗಬೇಕು, ಸದ್ಯಕ್ಕೆ ಸರದಿಯಲ್ಲಿದ್ದೇನೆ. ಅದೃಷ್ಟ ಖುಲಾಯಿಸಿದರೆ, ನನ್ನ ಅನಿಸಿಕೆಗಿಂತ ಮೊದಲೇ ಮುಖ್ಯಮಂತ್ರಿ ಆಗಬಹುದು ಇಲ್ಲವೇ ಕೆಪಿಸಿಸಿ ಅಧ್ಯಕ್ಷನಾಗಬಹುದು, ನೋಡೋಣ ಎಂದಿದ್ದಾರೆ.

ಹನಿಟ್ರ್ಯಾಪ್ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನರಿಗೆ ತಿಳಿಸಬೇಕು

ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಆಗ್ರಹ

ಮೈಸೂರು, ಮಾ.28(ಬಿಎಲ್‌ಯು)– ಹನಿಟ್ರ್ಯಾಪ್ ಅಂದರೆ ಏನು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದ ಜನರಿಗೆ ತಿಳಿಸಬೇಕು ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಆಗ್ರಹಿಸಿದ್ದಾರೆ.

ಮೈಸೂರಿನಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಹನಿಟ್ರ್ಯಾಪ್ ಎಂದರೆ ಏನು ಎಂದು ಜನರು ತಲೆ ಕೆಡಿಸಿಕೊಂಡಿದ್ದಾರೆ. ಹನಿಟ್ರ್ಯಾಪ್ ವಿಚಾರವನ್ನು ಕಾಂಗ್ರೆಸ್ ಪಕ್ಷದ ನಾಯಕರು ಪ್ರಸ್ತಾಪಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಇದರ ಬಗ್ಗೆ ಕಾಂಗ್ರೆಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

ನನ್ನನ್ನು ಹನಿಟ್ರ್ಯಾಪ್ ಖೆಡ್ಡಾಗೆ ಬೀಳಿಸಲು ಯತ್ನಿಸಿದರು ಎಂದು ಸಹಕಾರ ಸಚಿವ ರಾಜಣ್ಣ ಹೇಳಿದರೆ, ನನ್ನ ಕೊಲೆಗೆ ಯತ್ನ ನಡೆದಿತ್ತು ಎಂದು ರಾಜಣ್ಣ ಮಗ, ವಿಧಾನ ಪರಿಷತ್ ಸದಸ್ಯ ರಾಜೇಂದ್ರ ಆಪಾದಿಸಿದ್ದಾರೆ. ಇವರ ಮಾತುಗಳನ್ನು ಕೇಳುತ್ತಿದ್ದರೆ ಜನರನ್ನು ದಾರಿ ತಪ್ಪಿಸುತ್ತಿದ್ದಾರೆಯೇ ಎಂಬ ಅನುಮಾನಗಳು ಎದುರಾಗುತ್ತಿವೆ. ಈ ಹಿನ್ನೆಲೆಯಲ್ಲಿ ಹನಿಟ್ರ್ಯಾಪ್ ಬಗ್ಗೆ ಸಮಗ್ರ ತನಿಖೆಯಾಗಬೇಕು ಎಂದು ನಾರಾಯಣ ಸ್ವಾಮಿ ಮನವಿ ಮಾಡಿದರು.

ಇಂತಹ ಹಲವು ಬೆಳವಣಿಗೆಗಳಿಂದ ಕಾಂಗ್ರೆಸ್ ಪಕ್ಷ ಬೆತ್ತಲಾಗಿದೆ. ಒಬ್ಬೊಬ್ಬ ನಾಯಕರು ಒಂದೊಂದು ರೀತಿಯ ಹೇಳಿಕೆ ನೀಡುತ್ತಿರುವುದು ಇದಕ್ಕೆ ಸಾಕ್ಷಿ ಎಂದರು.

ಹಲವು ಆರೋಪಗಳ ಹಿನ್ನೆಲೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರದಲ್ಲಿ ಮುಂದುವರೆಯಬಾರದು. ತಕ್ಷಣವೇ ತಮ್ಮ ಸ್ಥಾನಕ್ಕೆ ರಾಜಿನಾಮೆ ನೀಡಬೇಕು. ಅವರನ್ನು ವಜಾಗೊಳಿಸಲು ಸಿದ್ದರಾಮಯ್ಯ ಅವರಿಗೆ ಸಾಧ್ಯವಾಗಲಿಲ್ಲವೆಂದರೆ ಮುಖ್ಯಮಂತ್ರಿ ಸ್ಥಾನವನ್ನು ಡಿ.ಕೆ.ಶಿವಕುಮಾರ್‌ಗೆ ಬಿಟ್ಟುಕೊಡಲಿ ಎಂದು ಸಲಹೆ ನೀಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಆಗಾಗೆ ವಸ್ತುಗಳ ಬೆಲೆ ಏರಿಕೆ ಮಾಡುತ್ತಲೆ ಇದೆ. ನಾಲ್ಕು ಬಾರಿ ವಿದ್ಯುತ್ ದರ ಏರಿಕೆಯಾದರೆ, ಹಾಲಿನ ದರ ಮೂರು ಬಾರಿ ಹೆಚ್ಚಳವಾಗಿದೆ. ಗ್ಯಾರಂಟಿ ಹಣವನ್ನು ಮೂರು ತಿಂಗಳಿಗೊಮ್ಮೆ ನೀಡುತ್ತಿದ್ದಾರೆ. ಪರಿಶಿಷ್ಟ ಜಾತಿ ಮತ್ತು ವರ್ಗದವರಿಗೆ ಮೀಸಲಾದ ಹಣವನ್ನು, ಗ್ಯಾರಂಟಿಗೆ ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಇದೇ ರೀತಿ ಗ್ಯಾರಂಟಿ ಹೆಸರು ಹೇಳಿಕೊಂಡು ಐದು ವರ್ಷ ಅಧಿಕಾರ ಪೂರೈಸಿ ಬಿಡುತ್ತಾರೆ. ಮುಂದಿನ ಬಾರಿ ಅಧಿಕಾರಕ್ಕೆ ಬರುವುದಿಲ್ಲ ಎಂದು ಮನವರಿಕೆ ಆಗಿರುವ ಹಿನ್ನೆಲೆ ಜನ ವಿರೋಧಿ ಆಡಳಿತ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಯತ್ನಾಳ್ ಉಚ್ಚಾಟನೆ ಉಳಿದ ಬಂಡಾಯ ನಾಯಕರಿಗೆ ಎಚ್ಚರಿಕೆ ಗಂಟೆ

ವಿಧಾನ ಪರಿಷತ್ ಸದಸ್ಯ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿಯಿಂದ ಉಚ್ಚಾಟನೆ ಮಾಡಿರುವುದು ಉಳಿದ ಬಂಡಾಯ ನಾಯಕರಿಗೆ ಎಚ್ಚರಿಕೆ ಗಂಟೆಯಾಗಿದೆ ಎಂದು ಛಲವಾದಿ ನಾರಾಯಣಸ್ವಾಮಿ ಅಭಿಪ್ರಾಯಪಟ್ಟರು.

ತಪ್ಪು ತಿದ್ದಿಕೊಂಡು ಮುನ್ನಡೆಯಲು ಪಕ್ಷ ಹಲವು ಬಾರಿ ಅವಕಾಶ ಮಾಡಿಕೊಟ್ಟಿತ್ತು. ಆದರೆ ಯತ್ನಾಳ್ ಅವರು ಮೈಕ್ ಮುಂದೆ ನಿಂತರೆ ಸಾಕು ಅಂತರಂಗದಲ್ಲಿರುವುದನ್ನೆಲ್ಲಾ ಮಾತಾಡಿ ಬಿಡುತ್ತಾರೆ. ಈ ಹಿನ್ನೆಲೆಯಲ್ಲಿ ಯತ್ನಾಳ್ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ ಎಂದರು.

ನಮ್ಮ ಪಕ್ಷ ಕಾರ್ಯಕರ್ತರಿಂದ ಉಳಿದಿದೆಯೇ ಹೊರತು ನಾಯಕರಿಂದ ಅಲ್ಲ. ನಾನು ಹುಲಿ ಎಂದು ಘರ್ಜಿಸಿದರೆ ಕಾಡಿಗೆ ಕಳುಹಿಸಿ ಬಿಡುತ್ತಾರೆ. ಈ ಹಿನ್ನೆಲೆಯಲ್ಲಿ ಹೈಕಮಾಂಡ್ ನಿರ್ಧಾರವನ್ನು ಯಾರೂ ವಿರೋಧ ಮಾಡಬಾರದು ಎಂದು ಹೇಳಿದರು.

ಪಕ್ಷದಿಂದ ಉಚ್ಚಾಟನೆಗೊಂಡಿರುವ ಯತ್ನಾಳ್ ಜೊತೆ ನಾವಿದ್ದೇವೆ ಎಂದು ಯಾರೂ ಹೇಳಬಾರದು ಎಂದು ಸಲಹೆ ನೀಡಿದ ನಾರಾಯಣ ಸ್ವಾಮಿ, ಪಕ್ಷದಲ್ಲಿರುವ ಅಡ್ಜಸ್ಟ್‌ಮೆಂಟ್ ರಾಜಕಾರಣಕ್ಕೆ ಹೈಕಮಾಂಡ್ ಬ್ರೇಕ್ ಹಾಕಲಿದೆ ಎಂದು ಅಭಿಪ್ರಾಯಪಟ್ಟರು.

ಕಾಂಗ್ರೆಸ್ ಜೊತೆ ಗುರುತಿಸಿಕೊಂಡಿರುವ ಶಾಸಕರಾದ ಎಸ್.ಟಿ.ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ ಎಂಬ ಪ್ರಶ್ನೆಗೆ, ಬಿಜೆಪಿ ಹೈಕಮಾಂಡ್ ಈಗ ಟೆಸ್ಟ್ ಆಟ ಬಿಟ್ಟು ಒನ್ ಡೇ ಆಟ ಆರಂಭಿಸಿದೆ. ಮುಂದೆ ಏನಿದ್ದರೂ ಟಿ20 ಮ್ಯಾಚ್ ಆಡಲಿದೆ ಇದರಿಂದ ಮುಂದೆ ಯಾರ ವಿಕೆಟ್ ಬೀಳುತ್ತದೆ ಎಂದು ಕಾದು ನೋಡಬೇಕಿದೆ ಎಂದು ಛಲವಾದಿ ನಾರಾಯಣ ಸ್ವಾಮಿ ಮಾರ್ಮಿಕವಾಗಿ ನುಡಿದರು.

ಬೇಸಿಗೆ ಶಿಬಿರದ ಉಚಿತ ಪರಿಚಯ ಕಾರ್ಯಕ್ರಮ

ಮೈಸೂರು, ಮಾ. 28– ಮೈಸೂರಿನ ಕುವೆಂಪುನಗರದ ಋಷಿ ಸಂಸ್ಕೃತಿ ವಿದ್ಯಾಕೇಂದ್ರದಲ್ಲಿ ಏ. 1 ರಂದು ಬೆಳಗ್ಗೆ 10 ಗಂಟೆಗೆ ಮಕ್ಕಳ ಸಿದ್ಧ ಸಮಾಧಿ ಬೇಸಿಗೆ ಶಿಬಿರದ ಉಚಿತ ಪರಿಚಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಆಸಕ್ತರು ನೋಂದಣಿ ಮತ್ತು ವಿವರಗಳಿಗೆ ಮೊ. 94484 58050, 86187 62110 ಸಂಪರ್ಕಿಸಬಹುದು.

50 ದಿನ ಪೂರೈಸಿದ ಭಗೀರಥ ಸಿನಿಮಾ

ಶ್ರೀ ಪುರುಷೋತ್ತಮಾನಂದ ಸ್ವಾಮೀಜಿ ಶುಭ ಹಾರೈಕೆ

ಮೈಸೂರು, ಮಾ.28(ಬಿಎಲ್‌ಯು)– ಡೇರಿಂಗ್ ಸ್ಟಾರ್ ಎಸ್.ಜಯಪ್ರಕಾಶ್ (ಜೆಪಿ) ಹಾಗೂ ಚಂದನ್ ರಾಘವೇಂದ್ರ ನಟಿಸಿರುವ ಭಗೀರಥ ಸಿನಿಮಾ ರಾಜ್ಯಾದ್ಯಂತ 50 ದಿನ ಪೂರೈಸಿದೆ. ಈ ಹಿನ್ನೆಲೆಯಲ್ಲಿ ಜಯಪ್ರಕಾಶ್ ಹಾಗೂ ಚಿತ್ರ ತಂಡ ಉಪ್ಪಾರ ಸಮುದಾಯದ ಮಠಾಧೀಶರಾದ ಶ್ರೀ ಪುರುಷೋತ್ತಮಾನಂದ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು.

ಈ ವೇಳೆ ಶ್ರೀಗಳು ನಿಮ್ಮ ಸಿನಿಮಾ ಪಯಣ ಮತ್ತಷ್ಟು ಯಶಸ್ವಿಯಾಗಲಿ ಎಂದು ಜಯಪ್ರಕಾಶ್ ಅವರಿಗೆ ಶುಭ ಹಾರೈಸಿದರು.



ಡೇರಿಂಗ್ ಸ್ಟಾರ್ ಎಸ್.ಜಯಪ್ರಕಾಶ್ ನಟಿಸಿರುವ ಭಗೀರಥ ಸಿನಿಮಾ 50 ದಿನ ಪೂರೈಸಿರುವ ಹಿನ್ನೆಲೆಯಲ್ಲಿ ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಉಪ್ಪಾರ ಸಮುದಾಯದ ಮಠಾಧೀಶರಾದ ಶ್ರೀ ಪುರುಷೋತ್ತಮನಂದ ಸ್ವಾಮೀಜಿ ಚಿತ್ರತಂಡಕ್ಕೆ ಶುಭ ಹಾರೈಸಿದರು.

ಮುದ್ದಂಡ ಕಪ್ ಕೊಡವ ಹಾಕಿ : ಜಿಲ್ಲಾಡಳಿತ ಪರಾಭವ

ಹಾಕಿ ಉತ್ಸವ–2025 ವಿದ್ಯುಕ್ತ ಚಾಲನೆ

ಮಡಿಕೇರಿ,ಮಾ.28: ಮುದ್ದಂಡ ಕಪ್ ಕೊಡವ ಹಾಕಿ ನಮ್ಮೆಯ ಅಂಗವಾಗಿ ಜಿಲ್ಲಾಡಳಿತ ಮತ್ತು ಮುದ್ದಂಡ ಕುಟುಂಬ ತಂಡ ಹಾಗೂ ಕೊಡವ ಹಾಕಿ ಅಕಾಡೆಮಿ ಇಲೆವೆನ್ ಮತ್ತು ಕರ್ನಾಟಕ ಇಲೆವೆನ್ ತಂಡಗಳ ನಡುವೆ ಪ್ರದರ್ಶನ ಪಂದ್ಯಾಟ ನಡೆಯಿತು. ಈ ಪಂದ್ಯಾಟದಲ್ಲಿ ಮುದ್ದಂಡ ಮತ್ತು ಕೊಡವ ಹಾಕಿ ಅಕಾಡೆಮಿ ಇಲೆವೆನ್ ತಂಡಗಳು ಗೋಲು ಗಳಿಸಿದವು.

ಜಿಲ್ಲಾಡಳಿತ ತಂಡದಲ್ಲಿ ಜಿಲ್ಲಾ ಪೊಲೀಸ್ ಗುಪ್ತಚರ ಇಲಾಖೆ ವೃತ್ತ ನಿರೀಕ್ಷಕ ಐ.ಪಿ ಮೇದಪ್ಪ, ವಿರಾಜಪೇಟೆ ಪೊಲೀಸ್ ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ ನೇತೃತ್ವ ವಹಿಸಿದ್ದರು. ಮುದ್ದಂಡ ತಂಡದ ಆದ್ಯ ಪೂವಣ್ಣ, ಅತಿಥಿ ಆಟಗಾರರಾದ ನೆಲ್ಲಮಕ್ಕಡ ಚಂಗಪ್ಪ, ಅಮ್ಮುಣಿಚಂಡ ವಿಘ್ನೇಶ್ ಬೋಪಣ್ಣ ಅವರು ತಲಾ ಒಂದೊಂದು ಫೀಲ್ಡ್ ಗೋಲು ಬಾರಿಸುವ ಮೂಲಕ ಜಿಲ್ಲಾಡಳಿತವನ್ನು 3–0 ಗೋಲುಗಳಿಂದ ಪರಾಭವಗೊಳಿಸಿದರು.

ಕೊಡವ ಹಾಕಿ ಅಕಾಡೆಮಿ ಇಲೆವೆನ್ ಮತ್ತು ಕರ್ನಾಟಕ ಇಲೆವೆನ್ ತಂಡಗಳ ನಡುವೆ ನಡೆದ ದ್ವಿತೀಯ ಪಂದ್ಯದಲ್ಲಿ ಕೊಡವ ಹಾಕಿ ಅಕಾಡೆಮಿ ಇಲೆವೆನ್ 3–0 ಗೋಲುಗಳ ಅಂತರದಲ್ಲಿ ಕರ್ನಾಟಕ ಇಲೆವೆನ್ ತಂಡವನ್ನು ಪರಾಭವಗೊಳಿಸಿತು. ನೂರಾರು ಮಂದಿ ಕ್ರೀಡಾಭಿಮಾನಿಗಳು ಮೈದಾನದಲ್ಲಿ ಹಾಜರಿದ್ದು, ಪಂದ್ಯಾಟ ವೀಕ್ಷಿಸಿ ಸಂಭ್ರಮಿಸಿದರು.

ಪಂದ್ಯಾಟದ ವೀಕ್ಷಕ ವಿವರಣೆಗಾರರಾಗಿ ಮಾಳೇಟಿರ ಶ್ರೀನಿವಾಸ್, ಚೆಪ್ಪುಡಿರ ಕಾರ್ಯಪ್ಪ, ಕುಲ್ಲೇಟಿರ ಅರುಣ್ ಬೇಬ ಅವರುಗಳು ಕರ್ತವ್ಯ ನಿರ್ವಹಿಸಿದರು.

ಉತ್ಸವ ಉದ್ಘಾಟನೆ : ಹಾಕಿ ಪಂದ್ಯಾವಳಿಯ ಬೆಳ್ಳಿ ಮಹೋತ್ಸವದ 'ಮುದ್ದಂಡ ಕಪ್ ಹಾಕಿ ಉತ್ಸವ–2025'ಕ್ಕೆ ಇಂದು ನಗರದ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜು ಮೈದಾನದಲ್ಲಿ ವಿದ್ಯುಕ್ತ ಚಾಲನೆ ದೊರಕಿತು. ಶಾಸಕ ಅಜ್ಜಿಕುಟ್ಟೀರ ಎಸ್.ಪೊನ್ನಣ್ಣ ಹಾಗೂ ಕೊಡವ ಹಾಕಿ ಅಕಾಡೆಮಿ ಅಧ್ಯಕ್ಷ ಪಾಂಡಂಡ ಬೋಪಣ್ಣ ಅವರು 'ಬೆಳ್ಳಿಯ ಸ್ಟಿಕ್'ನಿಂದ 'ಬೆಳ್ಳಿಯ ಚೆಂಡು' ತಳ್ಳುವ ಮೂಲಕ ತಿಂಗಳ ಕಾಲ ದಾಖಲೆಯ 396 ತಂಡಗಳ ನಡುವೆ ನಡೆಯುವ ಹಾಕಿ ಉತ್ಸವವನ್ನು ಉದ್ಘಾಟಿಸಿದರು.



ಶಾಸಕ ಅಜ್ಜಿಕುಟ್ಟೀರ ಎಸ್.ಪೊನ್ನಣ್ಣ ಹಾಗೂ ಕೊಡವ ಹಾಕಿ ಅಕಾಡೆಮಿ ಅಧ್ಯಕ್ಷ ಪಾಂಡಂಡ ಬೋಪಣ್ಣ ಅವರು ಬಾಳೆಕಂಬವನ್ನು ಕತ್ತರಿಸುವ ಮೂಲಕ ಉದ್ಘಾಟಿಸಿದರು.

ಕುಟುಂಬಗಳ ಐನ್ ಮನೆಗಳಿಗೆ ತೆರಳಿದ 'ಜ್ಯೋತಿ' ಯನ್ನು ಶುಕ್ರವಾರ ಮೈದಾನಕ್ಕೆ ತರಲಾಯಿತು. ಜ್ಯೋತಿಯನ್ನು ಸ್ವೀಕರಿಸಿದ ಅರ್ಜುನ ಮತ್ತು ಏಕಲವ್ಯ ಪ್ರಶಸ್ತಿ ಪುರಸ್ಕೃತ, ಮಾಜಿ ಒಲಂಪಿಯನ್ ಡಾ.ಅಂಜಪರವಂಡ ಸುಬ್ಬಯ್ಯ 'ಕೀಡಾ ಜ್ಯೋತಿಯನ್ನು' ಬೆಳಗಿದರು. ಕ್ರೀಡಾಂಗಣದಲ್ಲಿ ಮ್ಯಾರಥನ್ ಓಟದ ಸಂದರ್ಭ ಕಂಬೆಯಂಡ ದಿವ್ಯ ಓಡಿ ಗಮನ ಸೆಳೆದರು.

ವೇದಿಕೆಯಲ್ಲಿ ಮಾಜಿ ವಿಧಾನ ಸಭಾಧ್ಯಕ್ಷ ಕೆ.ಜಿ.ಬೋಪಯ್ಯ, ಎಂಎಲ್‌ಸಿ ವೀಣಾ ಅಚ್ಚಯ್ಯ, ಕೊಡಗು ವಿಶ್ವ ವಿದ್ಯಾನಿಲಯದ ಉಪ ಕುಲಪತಿ ಪ್ರೊ. ಸಂಗಪ್ಪ ಆಲೂರ, ರಿಜಿಸ್ಟ್ರರ್ ಕೆ.ಸುರೇಶ್, ಮಡಿಕೇರಿ ಕೊಡವ ಸಮಾಜದ ಅಧ್ಯಕ್ಷ ಮಂಡುವಂಡ ಪಿ.ಮುತ್ತಪ್ಪ, ಪದ್ಮಶ್ರೀ ರಾಣಿ ಮಾಚಯ್ಯ, ಫೀ.ಮಾ.ಕೆ.ಎಂ.ಕಾರ್ಯಪ್ಪ ಕಾಲೇಜು ಪ್ರಾಂಶುಪಾಲ ಮೇಜರ್ ಡಾ. ರಾಘವ, ಮುದ್ದಂಡ ಹಾಕಿ ಉತ್ಸವ ಸಮಿತಿ ಅಧ್ಯಕ್ಷ ಮುದ್ದಂಡ ರಶಿನ್ ಸುಬ್ಬಯ್ಯ ಮೊದಲಾದವರಿದ್ದರು.

ಪ್ರೋತ್ಸಾಹ ಧನ ಹೆಚ್ಚಳಕ್ಕೆ ಆಗ್ರಹಿಸಿ ಪ್ರತಿಭಟನೆ

ಚಾಮರಾಜನಗರ, ಮಾ.28–ಆಶಾ ಕಾರ್ಯಕರ್ತೆಯರಿಗೆ ಪ್ರೋತ್ಸಾಹಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಜಿಲ್ಲಾ ಸಂಘ ಪ್ರತಿಭಟನೆ ನಡೆಸಿತು.

ಜಿಲ್ಲಾಡಳಿತ ಭವನದ ಮುಂಭಾಗ ಸಮಾವೇಶಗೊಂಡ ಪ್ರತಿಭಟನಾಕಾರರು ಮುಖ್ಯಮಂತ್ರಿಗಳು ನುಡಿದಂತೆ ನಡೆಯಬೇಕು, ತಕ್ಷಣ ಅಧಿಕೃತ ಆದೇಶ ಪತ್ರ ಹೊರಡಿಸಬೇಕು ಎಂದು ಘೋಷಣೆಗಳನ್ನು ಕೂಗಿದರು. ಬಳಿಕ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾಹುಡೇದ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.



ಪ್ರೋತ್ಸಾಹ ಧನ ಹೆಚ್ಚಳಕ್ಕೆ ಆಗ್ರಹಿಸಿ ಆಶಾ ಕಾರ್ಯಕರ್ತೆಯರು ಜಿಲ್ಲಾಡಳಿತ ಭವನದ ಮುಂಭಾಗ ಪ್ರತಿಭಟನೆ ನಡೆಸಿದರು.

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಆಶಾ ಕಾರ್ಯಕರ್ತೆಯರು ಜ. 7ರಿಂದ 10ರವರೆಗೆ ನಡೆಸಿದ ಅಹೋರಾತ್ರಿ ಧರಣಿಯ ಸಂದರ್ಭದಲ್ಲಿ ಅವರು ಏಪ್ರಿಲ್‌ನಲ್ಲಿ ಎಲ್ಲಾ ಆಶಾ ಕಾರ್ಯಕರ್ತೆಯರಿಗೆ ಪ್ರೋತ್ಸಾಹ ಧನವನ್ನು ಸೇರಿಸಿ ಪ್ರತಿ ತಿಂಗಳು 10 ಸಾವಿರಗಳನ್ನು ನೀಡುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಅದರಂತೆ ಬಜೆಟ್‌ನಲ್ಲಿ 22 ಸಾವಿರ ಆಶಾ ಕಾರ್ಯಕರ್ತೆಯರುಗಳಿಗೆ ಮಾತ್ರ ಎಂದು ಹೇಳಿದ್ದಾರೆ. ಇನ್ನುಳಿದ 20 ಸಾವಿರ ಆಶಾಗಳಿಗೂ ಅದನ್ನು ವಿಸ್ತರಿಸಬೇಕು ಎಂದು ಸಂಘದ ಉಪಾಧ್ಯಕ್ಷ ಎಂ. ಉಮಾದೇವಿ ಆಗ್ರಹಿಸಿದರು.

ಹೆಚ್ಚುವರಿ ಕೆಲಸದ ಆಧಾರದ ಮೇಲೆ ಹೆಚ್ಚುವರಿ ಇನ್ಸೆಂಟಿವ್ ಕೂಡ ನೀಡಲಾಗುವುದು. ಒಂದು ವೇಳೆ ಯಾರಿಗಾದರೂ ಕಾಂಪೋನೆಂಟ್ಸ್‌ಗಳಿಂದ ಕಡಿಮೆ ಮೊತ್ತದ ಪ್ರೋತ್ಸಾಹ ಧನ ಬಂದಿದ್ದಲ್ಲಿ, ಅಂತಹ ಆಶಾ ಕಾರ್ಯಕರ್ತೆಯರಿಗೆ, ಸರ್ಕಾರವೇ ವ್ಯತ್ಯಾಸದ ಹಣವನ್ನು ಪಾವತಿಸಿ, 10 ಸಾವಿರ ರೂ. ಗ್ಯಾರಂಟಿ ದೊರೆಯುವಂತೆ ಕ್ರಮಕೈಗೊಳ್ಳಲಾಗುವುದು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷರಾದ ಕವಿತಾ, ಕಾರ್ಯದರ್ಶಿ ಚೆನ್ನಾಜಮ್ಮ, ಭಾಗ್ಯ, ಮಂಜುಳಾ, ನಂಜಮಣಿ, ಶಶಿಕಲಾ, ರಾಜಮ್ಮ, ಶಿವಮ್ಮ, ಅರಸಮ್ಮ, ಶಶಿಕಲಾ ಸೇರಿದಂತೆ ನೂರಾರು ಮಂದಿ ಆಶಾ ಕಾರ್ಯಕರ್ತೆಯರು ಹಾಗೂ ಇತರರು ಭಾಗವಹಿಸಿದ್ದರು.

ಸರ್ಕಾರಿ ಶುಶ್ರೂಷಕರ ತರಬೇತಿ ಶಾಲೆಗೆ ಆರೋಗ್ಯ ಸೌಧ ನಿರ್ದೇಶಕರ ಭೇಟಿ

ಚಾಮರಾಜನಗರ,ಮಾ.28– ಜಿಲ್ಲಾಸ್ಪತ್ರೆಯ ಹಿಂಭಾಗದಲ್ಲಿ ಇರುವ ಸರ್ಕಾರಿ ಶುಶ್ರೂಷಕರ ತರಬೇತಿ ಶಾಲೆಗೆ ರಾಜ್ಯ ಆರೋಗ್ಯ ಕುಟುಂಬ ಕಲ್ಯಾಣ ಸಂಸ್ಥೆ ಆರೋಗ್ಯ ಸೌಧ ನಿರ್ದೇಶಕಿ ಉಮಾಬುಗ್ಗಿ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಆರೋಗ್ಯ ಕುಟುಂಬ ಕಲ್ಯಾಣ ಸಂಸ್ಥೆ ಆರೋಗ್ಯ ಸೌಧ ನಿರ್ದೇಶಕಿ ಉಮಾಬುಗ್ಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತರಬೇತಿ ಶಾಲೆಯ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿ, ಮಾತನಾಡಿದ ಅವರು ಇಲ್ಲಿನ ಶುಶ್ರೂಷಕರ ಶಾಲೆಯು ಸ್ವಚ್ಛತೆಯಿಂದ ಕೂಡಿದೆ. ಜೊತೆಗೆ ಪ್ರತಿವರ್ಷವು ಉತ್ತಮ ದರ್ಜೆಯ ಫಲಿತಾಂಶವನ್ನು ನೀಡುತ್ತಿದೆಯೆಂದು ಶ್ಲಾಘಿಸಿದರು. ವಿದ್ಯಾರ್ಥಿನಿಯರೇ ಇರುವ ಈ ಕೇಂದ್ರಕ್ಕೆ ಆಡಳಿತ ಅಧಿಕಾರಿಗಳು ಮತ್ತು ಪ್ರಾಂಶುಪಾಲರು ಸೌಲಭ್ಯಗಳನ್ನು ಒದಗಿಸಿ ಕೊಡುವುದರ ಮೂಲಕ ಜಿಲ್ಲೆಯಲ್ಲೆ ಉತ್ತಮ ತರಬೇತಿ ಕೇಂದ್ರವಾಗಿ ರೂಪಿಸಿದ್ದಾರೆಂದು ಪ್ರಶಂಸಿಸಿದರು.

ಆಡಳಿತ ಅಧಿಕಾರಿ ಡಾ.ಆಶಾ, ತರಬೇತಿ ಕೇಂದ್ರದ ಪ್ರಾಂಶುಪಾಲ ಮಹಮ್ಮದ್ ಕುದ್ರತ್‌ಉಲ್ಲಾ ಬೋಧಕರಾದ ಪ್ರೇಮ, ಹಾಗೂ ಸಿಬ್ಬಂದಿವರ್ಗದವರು ಇದ್ದರು.

ಇಂದಿನಿಂದ ಅಮ್ಮತ್ತಿಯಲ್ಲಿ ಕೊಡವ ಬಲ್ಯ ನಮ್ಮೆ

ಮಡಿಕೇರಿ,ಮಾ.28–ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ, ಅಮ್ಮತ್ತಿ ಕೊಡವ ಸಮಾಜ ಇವರ ಸಹಯೋಗದಲ್ಲಿ ಕೊಡವ ಬಲ್ಯನಮ್ಮೆ (ಕೊಡವ ಅಕಾಡೆಮಿ ಗೌರವ ಪ್ರಶಸ್ತಿ, ಪುಸ್ತಕ ಪ್ರಶಸ್ತಿ ಮತ್ತು ದುಡಿ–ತಾಳ ಕೊಡ್‌ಪ ಆಯಿಮೆ) ಕಾರ್ಯಕ್ರಮವು ಮಾ. 29 ಮತ್ತು 30 ರಂದು ಅಮ್ಮತ್ತಿ ಕೊಡವ ಸಮಾಜದಲ್ಲಿ ನಡೆಯಲಿದೆ.

ನಾಳೆ ಬೆಳಗ್ಗೆ 9 ಗಂಟೆಗೆ ಹೊಸೂರು ಜಂಕ್ಷನ್‌ನಿಂದ ಕೊಡವ ಸಮಾಜದ ವರೆಗೆ ಕೊಡವ ಸಾಂಸ್ಕೃತಿಕ ಜಾನಪದ ಮೆರವಣಿಗೆಯನ್ನು, ಅಮ್ಮತ್ತಿ ನಾಡಿನ ಹಿರಿಯರು ಹಾಗೂ ಸಮಾಜ ಸೇವಕರಾದ ನೆಲ್ಲಮಕ್ಕಡ ಶಂಭು ಸೋಮಯ್ಯ, ಕಾವಾಡಿಚಂಡ ಯು. ಗಣಪತಿ ಉದ್ಘಾಟಿಸಲಿದ್ದಾರೆ.

ನಂತರ ಬೆಳಗ್ಗೆ 10 ಗಂಟೆಗೆ ಅಮ್ಮತ್ತಿ ಕೊಡವ ಸಮಾಜದ ಅಧ್ಯಕ್ಷ ಐನಂಡ ಪ್ರಕಾಶ್ ಗಣಪತಿ ಉದ್ಘಾಟಿಸಲಿದ್ದಾರೆ. ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಅಜ್ಜಿನಿಕಂಡ ಸಿ.ಮಹೇಶ್ ನಾಚಯ್ಯ, ವಿಧಾನಪರಿಷತ್ ಸದಸ್ಯ ಮಂಡೇಪಂಡ ಸುಜಾ ಕುಶಾಲಪ್ಪ, ಅಖಿಲ ಕೊಡವ ಸಮಾಜದ ಅಧ್ಯಕ್ಷ ಪರದಂಡ ಕೆ.ಸುಬ್ರಮಣಿ, ಕೊಡವ ಸಮಾಜ ಒಕ್ಕೂಟ ಅಧ್ಯಕ್ಷ ಕಳ್ಳಿಚಂಡ ವಿಷ್ಣು ಕಾರ್ಯಪ್ಪ, ಮಾಜಿ ವಿಧಾನ ಪರಿಷತ್ ಸದಸ್ಯ ಚೆಪ್ಪುಡಿರ ಅರುಣ್ ಮಾಚಯ್ಯ, ಸೋಮವಾರಪೇಟೆ ಕೊಡವ ಸಮಾಜದ ಅಧ್ಯಕ್ಷ ಮಾಳೇಟಿರ ಅಭಿಮನ್ಯುಕುಮಾರ್, ಕೊಡವ ಭಾಷಾ ಸಮುದಾಯಗಳ ಕೂಟ(ರಿ) ಅಧ್ಯಕ್ಷ ಡಾ.ಮೇಚಿರ ಸುಭಾಷ್ ನಾಣಯ್ಯ, ಸವಿತ ಸಮಾಜದ ಅಧ್ಯಕ್ಷ ತಾಪನೆರ ಎಂ.ಸಾಬು, ಬಣ್ಣ ಸಮಾಜದ ಅಧ್ಯಕ್ಷ ಬೀಕಚಂಡ ಬೆಳ್ಯಪ್ಪ, ಅರಮನೆಪಾಲೆ ಸಮಾಜದ ಮುಖ್ಯಸ್ಥ ಅರಮನೆಪಾಲೆರ ದೇವಯ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಬೆಳಗ್ಗೆ 11 ಗಂಟೆಗೆ ಅಕಾಡೆಮಿ ಗೌರವ ಪ್ರಶಸ್ತಿ, ಪುಸ್ತಕ ಪ್ರಶಸ್ತಿ ಮತ್ತು ದುಡಿ–ತಾಳ ವಿತರಣಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಅಜ್ಜಿನಿಕಂಡ ಸಿ.ಮಹೇಶ್ ನಾಚಯ್ಯ ವಹಿಸಲಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ಎಸ್. ತಂಗಡಗಿ ಚಾಲನೆ ನೀಡಲಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಎಸ್.ಬೋಸರಾಜು, ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಡಾ॥ಮಂತರ್ ಗೌಡ, ರಾಜ್ಯ ವನ್ಯಜೀವಿ ಮಂಡಳಿಯ ಸದಸ್ಯ ಮೇರಿಯಂಡ ಸಂಕೇತ್ ಪೂವಯ್ಯ, ಚೀಫ್ ಎಲೆಕ್ಟ್ರಿಕಲ್ ಇನ್ಸ್‌ಪೆಕ್ಟರ್ ತೀತಿರ ರೋಷನ್ ಅಪ್ಪಚ್ಚು, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ತೀತಿರ ಧರ್ಮಜ ಉತ್ತಪ್ಪ, ಬೆಂಗಳೂರು ಕೊಡವ ಸಮಾಜದ ಅಧ್ಯಕ್ಷ ಕರವಟ್ಟಿರ ಟಿ.ಪೆಮ್ಮಯ್ಯ, ಮೈಸೂರು ಕೊಡವ ಸಮಾಜದ ಅಧ್ಯಕ್ಷ ಮೊಂಜಂಡ ಗಪ್ಪು ಗಣಪತಿ ಮುಖ್ಯ ಅತಿಥಿಗಳಾಗಿ ಭಾಗವಹಿ ಸಲಿದ್ದಾರೆ.

ವಸ್ತುಗಳನ್ನು ಖರೀದಿ ಮಾಡುವಾಗ ತಪ್ಪದೇ ರಶೀದಿ ಪಡೆದುಕೊಳ್ಳಿ: ಈಶ್ವರ

ಚಾಮರಾಜನಗರ,ಮಾ.28– ಗ್ರಾಹಕರು ಯಾವುದೇ ವಸ್ತುಗಳನ್ನು ಖರೀದಿ ಮಾಡುವಾಗ ತಪ್ಪದೇ ರಶೀದಿಯನ್ನು ಪಡೆದುಕೊಳ್ಳಿ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಈಶ್ವರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರ, ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ವಿಶ್ವ ಗ್ರಾಹಕರ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಸ್ವಂತ ಬಳಕೆಗೆ ಯಾವುದೇ ವಸ್ತುವನ್ನು ಖರೀದಿ ಮಾಡಿದವರೆಲ್ಲಾ ಗ್ರಾಹಕರಾಗುತ್ತಾರೆ. ಅವರಿಗೆ ಖರೀದಿಯಲ್ಲಿ ಮೋಸವಾಗುವ ಸಾಧ್ಯತೆ ಹೆಚ್ಚಾಗಿದ್ದು ಅದನ್ನು ತಡೆಗಟ್ಟುವ ನಿಟ್ಟಿನಲ್ಲಿ ಗ್ರಾಹಕ ಹಕ್ಕುಗಳ ರಕ್ಷಣೆಯನ್ನು ಜಾರಿಗೆ ತರಲಾಗಿದೆ. ಯಾವುದೇ ಪದಾರ್ಥಗಳನ್ನು ಕೊಳ್ಳುವಾಗ ತಪ್ಪದೇ ರಶೀದಿಯನ್ನು ಪಡದುಕೊಂಡಾಗ ಮಾತ್ರ ಆಗಿರುವ ನ್ಯೂನತೆಗಳ ಬಗ್ಗೆ ಗ್ರಾಹಕರ ವೇದಿಕೆಯಲ್ಲಿ ದಾವೆ ಹೂಡಿ ನಷ್ಟವನ್ನು ಭರಿಸಿಕೊಳ್ಳಬಹುದು ಎಂದರು.

ಕಾರ್ಯಕ್ರಮದಲ್ಲಿ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎಚ್. ಎನ್. ಶ್ರೀನಿಧಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕ ಯೋಗಾನಂದ, ಹಿರಿಯ ಆಹಾರ ಸುರಕ್ಷಿತ ಅಧಿಕಾರಿಗಳೂ ಆದ ತಾಲೂಕು ಆರೋಗ್ಯಾಧಿಕಾರಿ ಡಾ. ಶ್ರೀನಿವಾಸ್, ಕಾಲೇಜಿನ ಪ್ರಾಂಶುಪಾಲ ನೀಲಕಂಠಸ್ವಾಮಿ ಸೇರಿದಂತೆ ಇನ್ನಿತರರಿದ್ದರು.

ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವುದು ಪೋಷಕರ ಕರ್ತವ್ಯ

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ



ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಸಾಧಕಿಯರನ್ನು ಸನ್ಮಾನಿಸಲಾಯಿತು.

ಮದ್ದೂರು, ಮಾ.28– ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡಿ ಅವರನ್ನು ಸಬಲೀಕರಣ ಮಾಡುವುದು ಪೋಷಕರ ಆದ್ಯ ಕರ್ತವ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು.

ಪಟ್ಟಣದ ತಾಲೂಕು ಮೈದಾನದಲ್ಲಿ ಜಿಪಂ, ಮಂಡ್ಯ ತಾಪಂ, ವಿವಿಧ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಹೆಣ್ಣು ಮಕ್ಕಳು ರಾಷ್ಟ್ರ, ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡು ಸಾಧನೆ ಮಾಡುತ್ತಿರುವುದು ಸಂತಸದ ಸಂಗತಿ ಎಂದು ಹರ್ಷ ವ್ಯಕ್ತಪಡಿಸಿದರು.

ಹೆಣ್ಣುಮಕ್ಕಳನ್ನು ಸಾಮಾಜಿಕ, ಆರ್ಥಿಕ, ಶೈಕ್ಷಣಿಕವಾಗಿ ಸಬಲರನ್ನಾಗಿ ಮಾಡುವುದು ನಮ್ಮ ಸರ್ಕಾರದ ಪ್ರಮುಖ ಉದ್ದೇಶ. ಆದ್ದರಿಂದಲೇ ಗ್ರಾಪಂ, ತಾಪಂ ಸೇರಿದಂತೆ ಇನ್ನೂ ಅನೇಕ ಕ್ಷೇತ್ರಗಳಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಲಾಗಿದೆ. ಸ್ಥಳೀಯ ಮಟ್ಟದ ರಾಜಕೀಯದಲ್ಲಿ ಹೆಣ್ಣುಮಕ್ಕಳು ಹೆಚ್ಚು ಪಾಲ್ಗೊಂಡು ಯಶಸ್ವಿಯಾಗಿ ಉನ್ನತ ಮಟ್ಟದ ರಾಜಕೀಯಕ್ಕೆ ಪ್ರವೇಶ ಪಡೆಯಬೇಕು. ಮಹಿಳೆಯರು ಪರಾವಲಂಬಿಗಳಾಗದೆ ಸ್ವಾವಲಂಬಿಗಳಾಗಿ ಬದುಕಬೇಕು. ಇಂದು ಹೆಣ್ಣು ಮಕ್ಕಳು ಗಂಡಸರಿಗೆ ಸರಿಸಮನಾಗಿ ಜೀವನ ನಡೆಸುತ್ತಿದ್ದಾರೆ. ಇಂದಿರಾಗಾಂಧಿ ಪ್ರಧಾನಿಯಾಗಿದ್ದರು. ಇಂದು ಮಹಿಳೆಯರ ಪ್ರಾತಿನಿಧ್ಯ ಇಲ್ಲದಿರುವ ಹುದ್ದೆಯೇ ಇಲ್ಲದಂತಾಗಿದೆ ಎಂದರು.

ಶಾಸಕ ಕೆ.ಎಂ.ಉದಯ್ ಮಾತನಾಡಿ, ಯಾವುದೇ ಕಾಲೇಜಿನ ಫಲಿತಾಂಶ ನೋಡಿದರೂ ಹೆಣ್ಣು ಮಕ್ಕಳೇ ಮೇಲುಗೈ ಸಾಧಿಸಿರುತ್ತಾರೆ. ಅಂತೆಯೇ ಉನ್ನತ ಹುದ್ದೆಗಳಾದ ಐಎಎಸ್, ಐಪಿಎಸ್‌ನಂತಹ ಉದ್ಯೋಗ ಅಲಂಕರಿಸಿದ್ದಾರೆ. ಮುಂದಿನ ದಿನಗಳಲ್ಲಿ ವಿಧಾನ ಸಭೆಯಲ್ಲೂ ಸಿಂಹಪಾಲು ಮಹಿಳೆಯರದ್ದೇ ಆಗಿರುತ್ತದೆ ಎಂದರು.

ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮಾತನಾಡಿ, ಮಹಿಳೆಯರ ಮೇಲಿನ ದೌರ್ಜನ್ಯ ತಡೆಯಲು, ಮಹಿಳೆಯರ ಹಕ್ಕು ಮತ್ತು ಜಾಗೃತಿ ಮೂಡಿಸುವ ಸಲುವಾಗಿ 1975ರಲ್ಲಿ ವಿಶ್ವ ಸಂಸ್ಥೆ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಣೆ ನಡೆಸಲು ನಿರ್ಧರಿಸಿತು. ಅದೇ ರೀತಿ ನಮ್ಮ ಸರ್ಕಾರ ಮಹಿಳೆಯರಿಗೆ ಪ್ರಾತಿನಿಧ್ಯ ನೀಡಬೇಕೆಂದು ಸಂವಿಧಾನದ 73ನೇ ವಿಧಿಯನ್ನು ತಿದ್ದುಪಡಿ ಮಾಡಿ ಸ್ಥಳೀಯ ಸಂಸ್ಥೆಗಳಲ್ಲಿ 50% ಮೀಸಲಾತಿಯನ್ನು ಮಹಿಳೆಯರಿಗೆ ನೀಡಿತು ಎಂದರು.

ಪ್ರಸ್ತುತ ಜಿಲ್ಲೆಯ ಗ್ರಾಪಂಗಳಲ್ಲಿ 4 ಸಾವಿರ ಗ್ರಾಪಂ ಸದಸ್ಯರು ಇದ್ದರೇ ಅದರಲ್ಲಿ 2016 ಮಹಿಳಾ ಸದಸ್ಯರಿದ್ದಾರೆ. ಅದರಲ್ಲಿ 136 ಮಹಿಳಾ ಅಧ್ಯಕ್ಷರು ಹಾಗೂ 139 ಮಹಿಳಾ ಉಪಾಧ್ಯಕ್ಷರು ಇದ್ದಾರೆ ಎಂದರು.

ಸಾಧನೆಗೈದ ಸಾಧಕಿಯರನ್ನು ಸನ್ಮಾನಿಸಲಾಯಿತು. ಜಿಪಂ ಸಿಇಓ ಕೆ.ಆರ್.ನಂದಿನಿ, ಪುರಸಭೆ ಅಧ್ಯಕ್ಷೆ ಕೋಕಿಲಾ, ಮುಖಂಡರಾದ ಅನಿತಾ ಲಕ್ಷ್ಮಿ, ಸುಧೀರ್‌ಕುಮಾರ್, ರಾಮಲಿಂಗಯ್ಯ, ಡಾ.ಮನೋಹರ್ ಇದ್ದರು.

ಪಾಂಡವಪುರ ಪಿಎಲ್‌ಡಿ ಬ್ಯಾಂಕ್ ಜೆಡಿಎಸ್ ತೆಕ್ಕೆಗೆ

- ಸತತ 3ನೇ ಬಾರಿಗೆ ಅಧಿಕಾರ
- ಜೆಡಿಎಸ್ 8, ರೈತಸಂಘ-ಕಾಂಗ್ರೆಸ್ 6 ಸ್ಥಾನಗಳಲ್ಲಿ ಜಯ

ಪಾಂಡವಪುರ, ಮಾ.28– ಪಾಂಡವಪುರ ತಾಲೂಕು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ (ಪಿಎಲ್‌ಡಿ) ಬ್ಯಾಂಕ್ ಅಧಿಕಾರವನ್ನು ಜೆಡಿಎಸ್ ತನ್ನ ತೆಕ್ಕೆಗೆ ತೆಗೆದುಕೊಳ್ಳುವಲ್ಲಿ ಯಶಸ್ವಿಯಾಗಿದೆ.

ಪಿಎಲ್‌ಡಿ ಬ್ಯಾಂಕ್‌ನ 13 ಸಾಲಗಾರರ ಕ್ಷೇತ್ರ ಹಾಗೂ 1 ಸಾಲಗಾರರಲ್ಲದ ಕ್ಷೇತ್ರ ಸೇರಿದಂತೆ ಒಟ್ಟು 14 ಸದಸ್ಯ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ 8 ಸ್ಥಾನಗಳಲ್ಲಿ ಜೆಡಿಎಸ್, ರೈತಸಂಘ–ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು 6 ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದಾರೆ. ಆ ಮೂಲಕ ಸತತ 3ನೇ ಬಾರಿಗೆ ಜೆಡಿಎಸ್ ಅಧಿಕಾರಕ್ಕೇರುವುದು ಖಚಿತವಾಗಿದೆ.



ಜೆಡಿಎಸ್ ಬೆಂಬಲಿತ ನೂತನ ನಿರ್ದೇಶಕರನ್ನು ಮುಖಂಡರು, ಕಾರ್ಯಕರ್ತರು ಅಭಿನಂದಿಸಿದರು.

> ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ 8 ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳು ಗೆಲುವು ಸಾಧಿಸುವ ಮೂಲಕ ನಮ್ಮ ನಾಯಕ ಸಿ.ಎಸ್.ಪುಟ್ಟರಾಜು ಅವರ ಕೈ ಬಲಪಡಿಸುವ ಕೆಲಸ ಮಾಡಿದ್ದಾರೆ. ಚುನಾವಣೆಯಲ್ಲಿ ಜೆಡಿಎಸ್ ಸತತ 3ನೇ ಬಾರಿಗೆ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದೆ. ನಮ್ಮ ಅಭ್ಯರ್ಥಿಗಳಿಗೆ ಮತ ನೀಡಿದ ಷೇರುದಾರರಿಗೆ ಅಭಿನಂದನೆ. –ರಾಮಕೃಷ್ಣೇಗೌಡ, ಟಿಎಪಿಸಿಎಂಎಸ್ ನಿರ್ದೇಶಕ.

ಜೆಡಿಎಸ್: ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರದಲ್ಲಿ ಸ್ಪರ್ಧಿಸಿದ್ದ ಎಂ.ಸಿ. ಯಶವಂತ್ ಕುಮಾರ್ 463 ಮತ ಪಡೆದು ಭರ್ಜರಿ ಗೆಲುವು ಸಾಧಿಸಿದ್ದಾರೆ. ಸಾಲಗಾರರ ಕ್ಷೇತ್ರದಿಂದ ಮಾಣಿಕ್ಯನಹಳ್ಳಿಯಿಂದ ನಾಗಶೆಟ್ಟಿ–144, ಸುಂಕಾತೊಣ್ಣೂರಿನಿಂದ ಶಿವಣ್ಣ–45, ಚಿಕ್ಕಾಡೆಯಿಂದ ಎನ್.ಮುರುಳಿ–85, ಹಿರೇಮರಳಿಯಿಂದ ಚಲುವೇಗೌಡ–116, ಹರವು ಕ್ಷೇತ್ರದಿಂದ ಸುನಂದ–52, ಬನ್ನಂಗಾಡಿಯಿಂದ ನಂಜೇಗೌಡ ಜಿ.ಡಿ–62, ನಾರಾಯಣಪುರದಿಂದ ಕೆ.ಕುಮಾರ್–181 ಮತ ಪಡೆದು ಆಯ್ಕೆಯಾಗಿದ್ದಾರೆ.

ರೈತಸಂಘ–ಕಾಂಗ್ರೆಸ್: ಜಕ್ಕನಹಳ್ಳಿಯಿಂದ ಕೆ.ಆರ್.ಸುರೇಶ್–117, ಹಳೇಬೀಡಿನಿಂದ ಎಚ್.ಎನ್.ದಯಾನಂದ–91, ಮಹದೇಶ್ವರಪುರದಿಂದ ಎಸ್.ಯೋಗಲಕ್ಷ್ಮಿ–59, ಪಾಂಡವಪುರದಿಂದ ಹೆಚ್.ಎಂ.ಆಶಾ ಲತಾ–116, ಕೆ.ಬೆಟ್ಟಹಳ್ಳಿಯಿಂದ ಬಿ.ನರೇಂದ್ರ ಬಾಬು 105, ಚಿನಕುರಳಿಯಿಂದ ಸಿ.ಎಂ.ಚಂದ್ರಶೇಖರ್–112 ಮತ ಪಡೆದು ಗೆಲುವು ಸಾಧಿಸಿದ್ದಾರೆ.

ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತರು ಜಯ ಗಳಿಸುತ್ತಿದ್ದಂತೆಯೇ ಟಿಎಪಿಸಿಎಂಎಸ್ ನಿರ್ದೇಶಕ ರಾಮಕೃಷ್ಣೇಗೌಡರ ನೇತೃತ್ವದಲ್ಲಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಫೆ.8 ರಂದು ಪಿಎಲ್‌ಡಿ ಬ್ಯಾಂಕ್‌ನ 14 ಸ್ಥಾನಗಳಿಗೆ ಚುನಾವಣೆ ನಡೆದಿತ್ತು. ಅನರ್ಹ ಮತದಾರರಿಗೆ ಮತದಾನದ ಹಕ್ಕು ನೀಡಿದ್ದರಿಂದ ಅನರ್ಹ ಮತದಾರರ ಮತ ಎಣಿಕೆ ಮಾಡಬೇಕೋ, ಬೇಡವೋ ಎನ್ನುವ ವಿಚಾರವಾಗಿ ಕೋರ್ಟ್ ತಡೆಯಾಜ್ಞೆಯಿಂದ ಫಲಿತಾಂಶ ತಡವಾಗಿತ್ತು. ಕೋರ್ಟ್ ಅನರ್ಹ ಮತದಾರರ ಮತಗಳನ್ನು ಎಣಿಕೆ ಮಾಡುವಂತೆ ಆದೇಶಿಸಿದ ಬಳಿಕ ಮಾ.28ರಂದು ಶುಕ್ರವಾರ ಚುನಾವಣಾಧಿಕಾರಿ ತಾಪಂ ಇಓ ಲೋಕೇಶ್‌ಮೂರ್ತಿ ಪಟ್ಟಣದ ಟಿಎಪಿಸಿಎಂಎಸ್ ಸಭಾಂಗಣದಲ್ಲಿ ಮತ ಎಣಿಕೆ ನಡೆಸಿದರು.

ತಿ.ನರಸೀಪುರ ಪುರಸಭೆ ಸಾಮಾಜಿಕ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ತುಂಬಲ ಪ್ರಕಾಶ್ ಆಯ್ಕೆ



ತಿ.ನರಸೀಪುರ ಪುರಸಭೆಯ ಸಾಮಾಜಿಕ ಸ್ಥಾಯಿ ಸಮಿತಿ ಅಧ್ಯಕ್ಷರನ್ನಾಗಿ ತುಂಬಲ ಪ್ರಕಾಶ್ ಅವರನ್ನು ಪುರಸಭೆಯಲ್ಲಿ ಶುಕ್ರವಾರ ನಡೆದ ಸಾಮಾನ್ಯ ಸಭೆಯಲ್ಲಿ ಆಯ್ಕೆ ಮಾಡಲಾಗಿದೆ.

ತಿ.ನರಸೀಪುರ, ಮಾ.28– ಪಟ್ಟಣ ಪುರಸಭೆಯ ಸಾಮಾಜಿಕ ಸ್ಥಾಯಿ ಸಮಿತಿ ಅಧ್ಯಕ್ಷರನ್ನಾಗಿ 7ನೇ ವಾರ್ಡಿನ ಸದಸ್ಯ ತುಂಬಲ ಪ್ರಕಾಶ್ ಅವರನ್ನು ಪಟ್ಟಣ ಪುರಸಭೆಯಲ್ಲಿ ಶುಕ್ರವಾರ ನಡೆದ ಸಾಮಾನ್ಯ ಸಭೆಯಲ್ಲಿ ಆಯ್ಕೆ ಮಾಡಲಾಗಿದೆ.


ಮೊದಲಿಗೆ ಸ್ಥಾಯಿ ಸಮಿತಿ ಸದಸ್ಯರನ್ನು ಆಯ್ಕೆ ಮಾಡಿ ನಂತರ ಅಧ್ಯಕ್ಷರನ್ನು ಆಯ್ಕೆ ಮಾಡುವ ಪ್ರಕ್ರಿಯೆ ನಡೆಯಿತು. ಸ್ಥಾಯಿ ಸಮಿತಿ ಸದಸ್ಯರನ್ನಾಗಿ ಮಾಜಿ ಅಧ್ಯಕ್ಷ ಎಸ್.ಮದನ್ ರಾಜ್, ಟಿ.ಎಂ.ನಂಜುಂಡಸ್ವಾಮಿ, ಎನ್.ಸೋಮು, ಶೋಭಾ ರಾಣಿ, ಪ್ರೇಮ ಹಾಗೂ ರೂಪಶ್ರೀ ಅವರನ್ನು ಆಯ್ಕೆ ಮಾಡಿ ನಂತರ ಅಧ್ಯಕ್ಷರ ಆಯ್ಕೆಗೆ ಅವಕಾಶ ಮಾಡಿಕೊಡಲಾಯಿತು.

ಪುರಸಭೆಯ 7ನೇ ವಾರ್ಡಿನ ಸದಸ್ಯ ತುಂಬಲ ಪ್ರಕಾಶ್‌ರವರನ್ನು ಆಯ್ಕೆ ಮಾಡಿ ಸದಸ್ಯರು ಸಮ್ಮತಿ ಸೂಚಿಸಿದರು. ಪ್ರಕಾಶ್ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಆಯ್ಕೆಯಾಗುತ್ತಿದ್ದಂತೆ ಬೆಂಬಲಿಗರು ಪಟಾಕಿ ಸಿಡಿಸಿ ಸಂಭ್ರಮಿಸಿದರು. ಹಲವಾರು ಮುಖಂಡರು ಪುರಸಭೆಗೆ ಆಗಮಿಸಿ ಅಧ್ಯಕ್ಷರನ್ನು ಅಭಿನಂದಿಸಿದರು. ಈ ವೇಳೆ ಮಾತನಾಡಿದ ನೂತನ ಅಧ್ಯಕ್ಷ ತುಂಬಲ ಪ್ರಕಾಶ್ ಪುರಸಭೆಯಲ್ಲಿ ಖಾಲಿ ಉಳಿದಿದ್ದ ಸ್ಥಾಯಿ ಸಮಿತಿ ಅಧ್ಯಕ್ಷ ಸ್ಥಾನವನ್ನು ಆಯ್ಕೆ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಮಹದೇವಪ್ಪ, ಸಂಸದ ಸುನೀಲ್ ಬೋಸ್ ಹಾಗೂ ಎಂಎಲ್‌ಸಿ ಯತೀಂದ್ರ ಸಿದ್ದರಾಮಯ್ಯ ಅವರನ್ನು ಕೇಳಿಕೊಂಡ ಹಿನ್ನೆಲೆಯಲ್ಲಿ ಆಯ್ಕೆಗೆ ಅವಕಾಶ ಮಾಡಿಕೊಡಲಾಗಿದೆ ಎಂದರು.

ಪುರಸಭೆಯ ಅಧಿಕಾರಾವಧಿ ಮುಗಿಯುತ್ತಾ ಬಂದಿದೆ. ಈ ವೇಳೆ ಅವಕಾಶ ಕಲ್ಪಿಸಿಕೊಟ್ಟ ಎಲ್ಲ ಮುಖಂಡರಿಗೆ ಧನ್ಯವಾದಗಳನ್ನು ಸಲ್ಲಿಸಲು ಬಯಸುತ್ತೇನೆ, ಸ್ಥಾಯಿ ಸಮಿತಿಯ ನೂತನ ಸದಸ್ಯರ ಸಹಕಾರದೊಂದಿಗೆ ಅಧ್ಯಕ್ಷರ ಜವಾಬ್ದಾರಿ ಅರಿತು ಕೆಲಸ ಮಾಡುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಪುರಸಭೆ ಅಧ್ಯಕ್ಷೆ ವಸಂತ ಬಿ.ಶ್ರೀಕಂಠ, ಉಪಾಧ್ಯಕ್ಷೆ ರಾಜೇಶ್ವರಿ ಎಂ.ರಾಘವೇಂದ್ರ, ಮಾಜಿ ಅಧ್ಯಕ್ಷರಾದ ಟಿ.ಎಂ.ನಂಜುಂಡಸ್ವಾಮಿ, ಎಸ್. ಮದನ್ ರಾಜ್, ಎನ್.ಸೋಮು, ಸದಸ್ಯರಾದ ಅರ್ಜುನ್ ರಮೇಶ್, ಬಾದಾಮಿ ಮಂಜು, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಸಿಸ್ಟಮ್ ಸಿದ್ದು, ಎಲ್. ಮಂಜುನಾಥ್, ಎಸ್.ಕೆ. ಕಿರಣ್, ವಿ.ಮೋಹನ್, ಮೆಡಿಕಲ್ ನಾಗರಾಜು, ಬೇಬಿ ಹೇಮಂತ್, ನಾಗರತ್ನ, ಮಾದೇಶ್ ರೂಪಾಪರಮೇಶ್, ಶೋಭಾರಾಣಿ, ತೇಜಸ್ವಿನಿ, ಮಹದೇವಮ್ಮ, ಆಲಗೂಡು ಮಾದೇವಿ, ಮುಖಂಡರಾದ ಕರಿಯಪ್ಪ ಆಲಗೂಡು ಶಿವಕುಮಾರ್, ಹೊನ್ನಯ್ಯ ಹಿರಿಯೂರು ನವೀನ್, ಉಕ್ಕಲಗೆರೆ ರಾಜು, ಸೋಮಣ್ಣ, ಸ್ವಾಮಿಗೌಡ, ದಿವಾಕರ್, ನಿಲಸೋಗೆ ಸೋಮಣ್ಣ ಆಲಗೂಡು ರಾಜು ಮತ್ತಿತರರಿದ್ದರು.

ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ



ನಂಜನಗೂಡು ತಾಲೂಕು ಹದಿನಾರು ಮೋಳೆ ಗ್ರಾಮದ ಮೀನುಗಾರರ ಸಹಕಾರ ಸಂಘದ ಅಧ್ಯಕ್ಷರಾಗಿ ಬಸವರಾಜು ಮತ್ತು ಉಪಾಧ್ಯಕ್ಷರಾಗಿ ರಂಗಸ್ವಾಮಿ ಅವಿರೋಧವಾಗಿ ಆಯ್ಕೆಯಾದರು. ಮಾಜಿ ಅಧ್ಯಕ್ಷ ಸಿದ್ದಶೆಟ್ಟಿ, ರಿಟರ್ನಿಂಗ್ ಆಫೀಸರ್ ಧನಲಕ್ಷ್ಮಿ, ನಿರ್ದೇಶಕರುಗಳಾದ ಸಿದ್ದಶೆಟ್ಟಿ, ಗೋವಿಂದಶೆಟ್ಟಿ ಎ.ಮಹದೇವು, ಅಂಕಶೆಟ್ಟಿ ತಾಯಮ್ಮ, ಮಂಜುಳಮ್ಮ, ಮಾದೇಶನಾಯಕ, ಜಯರಾಂ, ಕಾರ್ಯದರ್ಶಿ ಸಿದ್ದರಾಜು, ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.


ಹಿರಿಯ ರಂಗಭೂಮಿ ಕಲಾವಿದ ಸದಾನಂದ ನಿಧನ



ಬೆಟ್ಟದಪುರ: ಬೆಟ್ಟದಪುರದ ಹಿರಿಯ ರಂಗಭೂಮಿ ಕಲಾವಿದ ಬಿ.ಪಿ ಸದಾನಂದ(80) ನಿಧನರಾಗಿದ್ದಾರೆ. ಸದಾನಂದ ಅವರು ಹಲವಾರು ಪೌರಾಣಿಕ ನಾಟಕಗಳಲ್ಲಿ ಅಭಿನಯಿಸಿದ್ದರು. 'ರತ್ನ ಮಾಂಗಲ್ಯ' ವೆಂಬ ಸಾಮಾಜಿಕ ನಾಟಕವನ್ನು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಅಭಿನಯಿಸಿ ರಾಜ್ಯ ಪ್ರಶಸ್ತಿಯನ್ನು ಸಹ ಪಡೆದಿದ್ದಾರೆ. ರಂಗಭೂಮಿಯಲ್ಲಿ ಪೌರಾಣಿಕ ನಾಟಕದಲ್ಲಿ ಕೃಷ್ಣ, ಅರ್ಜುನ, ಬಲರಾಮ, ಧರ್ಮರಾಯ ಸೇರಿದಂತೆ ಹಲವಾರು ಪಾತ್ರಗಳನ್ನು ಅಭಿಯಾನಿಸಿ ಸುಮಾರು 50ಕ್ಕೂ ಹೆಚ್ಚು ಪೌರಾಣಿಕ ನಾಟಕಗಳನ್ನು ಅಭಿನಯಿಸಿದರು. ದಿವಂಗತರು ನಾಲ್ವರು ಸಹೋದರರು, ಓರ್ವ ಸಹೋದರಿ, ಪುತ್ರ ಶಿಕ್ಷಕ ಬಿಎಸ್. ಸಂತೋಷ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಶ್ರೀಮತಿ ಸಹನಾ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ ಇವರ ಅಂತ್ಯ ಸಂಸ್ಕಾರವನ್ನು ಮೈಸೂರಿನ ವಿದ್ಯಾರಣ್ಯ ರುದ್ರ ಭೂಮಿಯಲ್ಲಿ ಶುಕ್ರವಾರ ಮಧ್ಯಾಹ್ನ ನೆರವೇರಿಸಲಾಯಿತು.

ಜಿಮಾರಳ್ಳಿ ಸಿದ್ದಮ್ಮ

ಸುತ್ತೂರು: ನಂಜನಗೂಡು ತಾಲೂಕು ಜಿಮಾರಳ್ಳಿ ಗ್ರಾಮದ ದಿವಂಗತ ಬೋರಯ್ಯನ ಮಹದೇವಪ್ಪನವರ ಪತ್ನಿ ಸಿದ್ದಮ್ಮ(89)ನವರು ಇಂದು ನಿಧನರಾದರು. ಮೂವರು ಪುತ್ರರು. ಹಾಗೂ ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ (ಶನಿವಾರ) ಮಧ್ಯಾಹ್ನ 12 ಗಂಟೆಗೆ ಸ್ವಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.



ನಂಜುಂಡಸ್ವಾಮಿ

ಮಲ್ಲುಪುಡಿ: ನಂಜನಗೂಡು ತಾಲೂಕಿನ ನಲ್ಲಿತಾಳಪುರ ಗ್ರಾಪಂ ಸದಸ್ಯ, ಮಾದನಹಳ್ಳಿ ಗ್ರಾಮದ ನಿವಾಸಿ ನಂಜುಂಡಸ್ವಾಮಿ ಶುಕ್ರವಾರ ಮುಂಜಾನೆ ನಿಧನರಾಗಿದ್ದಾರೆ. ಮೃತರು ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಶುಕ್ರವಾರ ಸ್ವಗ್ರಾಮವಾದ ಮಾದನಹಳ್ಳಿ ಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ದ್ರಾಕ್ಷಯಣಮ್ಮ

ಸರಗೂರು: ಪಟ್ಟಣದ ಸ್ಥಾಯಿ ಸಮಿತಿ ಅಧ್ಯಕ್ಷೆ ಉಮಾರಾಮು ಅವರ ಅತ್ತೆ ಭಜರಂಗದಳ ಕಾರ್ಯಕರ್ತ ರಾಮ್‌ಜೀ ಅವರ ತಾಯಿ ದ್ರಾಕ್ಷಯಣಮ್ಮ(86) ಶುಕ್ರವಾರ ನಿಧನರಾಗಿದ್ದಾರೆ. ಮೃತರು ಇಬ್ಬರು ಪುತ್ರಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಬಳಗವನ್ನು ಅಗಲಿದ್ದಾರೆ, ಮೃತರ ಅಂತ್ಯಕ್ರಿಯೇಯನ್ನು ಪಟ್ಟಣದ ಸೋಮೇಶ್ವರ ದೇವಸ್ಥಾನದ ಕಪಿಲಾ ನದಿ ದಡದಲ್ಲಿ ನಡೆಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಹಾಲು, ವಿದ್ಯುತ್ ದರ ಏರಿಕೆ ಖಂಡಿಸಿ ಪ್ರತಿಭಟನೆ



ರಾಜ್ಯ ಸರ್ಕಾರ ಹಾಲಿನ ದರ ಹಾಗೂ ವಿದ್ಯುತ್ ದರವನ್ನು ಏರಿಕೆ ಮಾಡಿರುವುದನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ಮಹಾರಾಜ ಕಾಲೇಜು ಮೈದಾನದ ಮುಂಭಾಗವಿರುವ ನಂದಿನಿ ಡೈರಿ ಬಳಿ ಪ್ರತಿಭಟನೆ ನಡೆಸಲಾಯಿತು.



ಹಾಲಿನ ದರ ಏರಿಕೆ ಖಂಡಿಸಿ ಕರ್ನಾಟಕ ಹಿತರಕ್ಷಣಾ ವೇದಿಕೆ ವತಿಯಿಂದ ಹಾಲು ಮೊಸರು ಪ್ಯಾಕೆಟ್‌ಗಳನ್ನು ತಲೆ ಮೇಲೆ ಹೊತ್ತು ಅಣುಕು ಪ್ರದರ್ಶನ ಮಾಡುವ ಮೂಲಕ ಪ್ರತಿಭಟನೆ ನಡೆಸಿದರು.

ಬಂಡೀಪುರ ಅಭಯಾರಣ್ಯದಲ್ಲಿ ರಾತ್ರಿ ವಾಹನ ಸಂಚಾರ

ಸಿಎಂ ಜೊತೆ ಚರ್ಚಿಸಿ ತೀರ್ಮಾನ: ಖಂಡ್ರೆ



ನವದೆಹಲಿ, ಮಾ.28– ಬಂಡೀಪುರ ಅಭಯಾರಣ್ಯದಲ್ಲಿ ರಾತ್ರಿ ವಾಹನ ಸಂಚಾರ ನಿರ್ಬಂಧ ವಿಷಯ ಅತ್ಯಂತ ಸೂಕ್ಷ್ಮವಾದುದು. ಮುಖ್ಯಮಂತ್ರಿಯವರೊಂದಿಗೆ ಸಮಾಲೋಚಿಸಿ, ಕಾನೂನು ತಜ್ಞರ ಅಭಿಪ್ರಾಯ ಪಡೆದು ಸರ್ವಸಮ್ಮತ ನಿರ್ಧಾರ ಕೈಗೊಳ್ಳಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದರು.

ಶುಕ್ರವಾರ ಇಲ್ಲಿ ಸುದ್ದಿಗಾರರ ಜತೆಗೆ ಮಾತನಾಡಿದ ಅವರು, ಪ್ರಸ್ತುತ ಈ ಪ್ರಕರಣ ಸುಪ್ರೀಂ ಕೋರ್ಟ್‌ನಲ್ಲಿದೆ. ಪ್ರಸ್ತುತ ರಾತ್ರಿ 9ರಿಂದ ಬೆಳಿಗ್ಗೆ 6 ಗಂಟೆಯವರೆಗೆ ನಿರ್ಬಂಧ ಜಾರಿಯಲ್ಲಿದೆ. ಹೊಸ ಪ್ರಕರಣಕ್ಕೆ ಸಂಬಂಧಿಸಿದಂತೆ ಎರಡೂ ರಾಜ್ಯಗಳ ಬಾಂಧವ್ಯ, ಗಮನದಲ್ಲಿಟ್ಟುಕೊಂಡು, ಎಲ್ಲರೊಂದಿಗೆ ಚರ್ಚಿಸಿ ಸೂಕ್ತ ತೀರ್ಮಾನ ಮಾಡಲು ಕ್ರಮ ವಹಿಸಲಾಗುವುದು ಎಂದರು. ಇದಕ್ಕೂ ಮುನ್ನ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರನ್ನು ಭೇಟಿ ಮಾಡಿ ಇಲಾಖೆಯಲ್ಲಿ ಕೈಗೊಂಡ ಪ್ರಗತಿ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.

ಬಂಡೀಪುರದಲ್ಲಿ ರಾತ್ರಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ವಯನಾಡು ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಾವು ಈ ಪತ್ರ ನೋಡುತ್ತೇವೆ, ಪರಿಶೀಲನೆ ಮಾಡಿ, ಚರ್ಚಿಸುತ್ತೇವೆ. ಆನಂತರ ತೀರ್ಮಾನ ಮಾಡುತ್ತೇವೆ ಎಂದರು.

ಐಎಎಸ್, ಕೆಎಎಸ್ ಪರೀಕ್ಷೆಗಳಿಗೆ ತರಬೇತಿ

ಮೈಸೂರು: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಐಎಎಸ್ ಹಾಗೂ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಆಸಕ್ತರು ಏ.2ರೊಳಗಾಗಿ ಬೆಳಗ್ಗೆ 10ರಿಂದ ಸಂಜೆ 4ರವರೆಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ದೂ.ಸಂ: 0821–2515944 ಸಂಪರ್ಕಿಸಬಹುದು ಎಂದು ಕರಾಮುವಿ ಕುಲಸಚಿವ ಪ್ರೊ.ಪ್ರವೀಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪೌರ ಕಾರ್ಮಿಕರಿಗೆ ಸರ್ಕಾರದ ಸೌಲಭ್ಯ ತಲುಪಿಸಿ

ಪಾಲಿಕೆ, ಸ್ಥಳೀಯ ಸಂಸ್ಥೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ನಿರ್ದೇಶನ



ಜಿಲ್ಲಾ ಜಾಗೃತಿ ಸಭೆ ನಡೆಸಿದ ಡಿಸಿ ಲಕ್ಷ್ಮೀಕಾಂತ ರೆಡ್ಡಿ

ಮೈಸೂರು, ಮಾ.28(ಆರ್‌ಕೆ)–ಸ್ವಚ್ಛತಾ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳನ್ನು ತಲುಪಿಸಬೇಕೆಂದು ಮೈಸೂರು ಮಹಾನಗರ ಸೇರಿದಂತೆ ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ನಿರ್ದೇಶನ ನೀಡಿದ್ದಾರೆ.

ಮೈಸೂರಿನ ಪಡುವಾರಹಳ್ಳಿಯಲ್ಲಿರುವ ಜಗಜೀವನ ರಾಂ ಭವನದಲ್ಲಿ ಇಂದು ನಡೆದ ಜಿಲ್ಲಾ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಪೌರ ಕಾರ್ಮಿಕರು ಮತ್ತು ಸ್ವಚ್ಛತಾಗಾರರ ಸೇವೆ ಅತ್ಯಗತ್ಯವಾಗಿದ್ದು, ನಿಯಮಾನುಸಾರ ಸರ್ಕಾರವು ಕಾಲ ಕಾಲಕ್ಕೆ ನೀಡುವ ಸೌಲಭ್ಯಗಳು ಪರಿಣಾಮಕಾರಿಯಾಗಿ ಒದಗಿಸಲು ಆದ್ಯತೆ ನೀಡಿ ಎಂದರು.

ಪುರಸಭೆ, ನಗರ ಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರಿಗೆ ವಸತಿ, ಆರೋಗ್ಯ ವ್ಯವಸ್ಥೆಯನ್ನು ಆಯಾ ವ್ಯಾಪ್ತಿಯಲ್ಲೇ ಮಾಡಬೇಕು. ಒಳ ಚರಂಡಿ, ಮ್ಯಾನ್‌ಹೋಲ್ ಸ್ವಚ್ಛಗೊಳಿಸಲು ಯಂತ್ರಗಳನ್ನು ಮಾತ್ರ ಬಳಸಬೇಕು ಎಂದು ಅವರು ಸಲಹೆ ನೀಡಿದರು.

ಕಳೆದ ವರ್ಷ ನಡೆದ ಸಮೀಕ್ಷೆಯಲ್ಲಿ ಜಿಲ್ಲೆಯಾದ್ಯಂತ ಒಂದೇ ಒಂದು ಮ್ಯಾನುಯಲ್ ಸ್ಕ್ಯಾವೆಂಜರ್ ಇಲ್ಲ ಎಂಬುದು ತಿಳಿದಿದೆ. ಮುಂದೆಯೂ ಸಹ ಇದೇ ಅಂಕಿ–ಅಂಶ ಬರುವಂತೆ ನಿಗಾ ವಹಿಸಿ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ನಿವೇಶನ, ಮನೆ ರಹಿತ ಪೌರ ಕಾರ್ಮಿಕರನ್ನು ಗುರ್ತಿಸಿ ಅವರಿಗೆ ನಿವೇಶನ ನೀಡಿ ಆಶ್ರಯ ಒದಗಿಸಲು ಪ್ರಯತ್ನಿಸಿ ಕಾರ್ಯಗತಗೊಳಿಸುವಂತೆಯೂ ತಾಲೂಕು ತಹಶೀಲ್ದಾರ್‌ಗಳು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಲಕ್ಷ್ಮೀಕಾಂತ ರೆಡ್ಡಿ ಅವರು ಇದೇ ಸಂದರ್ಭ ಸೂಚನೆ ನೀಡಿದರು.

ಶ್ರೀ ಪಂಚಮುಖಿ ಆಂಜನೇಯ ದೇವಸ್ಥಾನದಲ್ಲಿ ವಿಶೇಷ ಪೂಜೆ

ಮೈಸೂರು, ಮಾ.28(ಆರ್‌ಕೆ)– ಮೈಸೂರಿನ ಇರ್ವಿನ್ ರಸ್ತೆಯಲ್ಲಿರುವ ಶ್ರೀ ಪಂಚಮುಖಿ ಆಂಜನೇಯ ದೇವಸ್ಥಾನದಲ್ಲಿ ಚಾಂದ್ರಮಾನ ಯುಗಾದಿ ಪ್ರಯುಕ್ತ ಭಾನುವಾರ ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿವೆ ಶ್ರೀ ರಾಮ ತಾರಕ ಹೋಮ, ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ, ಶನಿ ಶಾಂತಿ, ನವಗ್ರಹ ಪೂಜೆ, ಸಂಕಲ್ಪ ಸೇವೆ ಮುಂತಾದ ಧಾರ್ಮಿಕ ವಿಧಿ–ವಿಧಾನಗಳು ನಡೆಯಲಿವೆ.

ಇ–ಖಾತಾ ವಿತರಣೆಯಲ್ಲಿ ಮೈಸೂರು ರಾಜ್ಯದಲ್ಲೇ ಎರಡನೇ ಸ್ಥಾನದಲ್ಲಿದೆ

• ಶಾಸಕ ಶ್ರೀವತ್ಸರಿಂದ ಇ–ಖಾತಾ ವಿತರಣೆಗೆ ಚಾಲನೆ • ಪಾಲಿಕೆ ಆಯುಕ್ತರ ತ್ವರಿತ ಪ್ರಕ್ರಿಯೆಗೆ ಪ್ರಶಂಸೆ

ಮೈಸೂರು, ಮಾ.28(ಎಸ್‌ಬಿಡಿ)– ಆಸ್ತಿ ಮಾಲೀಕರಿಗೆ ಇ–ಖಾತಾ ವಿತರಣೆಯಲ್ಲಿ ರಾಜ್ಯದಲ್ಲೇ ಮೈಸೂರು ಎರಡನೇ ಸ್ಥಾನದಲ್ಲಿದೆ ಎಂದು ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಹೇಳಿದರು.

ಮೈಸೂರು ಮಹಾನಗರ ಪಾಲಿಕೆ ವಲಯ ಕಚೇರಿ 1ರ ವ್ಯಾಪ್ತಿಯ ಆಸ್ತಿ ಮಾಲೀಕರಿಗೆ ಇ–ಖಾತೆ ವಿತರಣೆಗೆ ಶುಕ್ರವಾರ ವಿಧ್ಯುಕ್ತವಾಗಿ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ ಬಿ–ಖಾತೆ ನೀಡಲು ಆರಂಭಿಸಿದ ನಂತರ ಮೈಸೂರು ಇ–ಖಾತೆ ವಿತರಣೆಯಲ್ಲಿ ಎರಡನೇ ಸ್ಥಾನದಲ್ಲಿದೆ. ಇಷ್ಟೊಂದು ವೇಗ ಪಡೆಯಲು ಪಾಲಿಕೆ ಆಯುಕ್ತರಾದ ಶೇಖ್ ತನ್ವೀರ್ ಆಸಿಫ್ ಅವರೇ ಕಾರಣ ಎಂದರೆ ಅತಿಶಯವಾಗದು. ಗುಣಕ್ಕೆ ಮತ್ಸರವಿಲ್ಲ. ಅಧಿಕಾರಿಗಳು ಹಾಗೂ ಸಿಬ್ಬಂದಿಗಳೊಂದಿಗೆ ಅತ್ಯಂತ ಉತ್ಸಾಹದಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದರು.

ವಲಯ ಕಚೇರಿ 1ರ ಆಯುಕ್ತರಾದ ಮಂಜುನಾಥ್ ರೆಡ್ಡಿ ಅವರ ಕಾರ್ಯ ವೈಖರಿಯೂ ಶ್ಲಾಘನೀಯ. ಅರ್ಜಿ ಹಾಕಿದ 7ರಿಂದ 10 ದಿನಗಳಲ್ಲಿ ಇ–ಖಾತಾ ವಿತರಿಸಲು ಕ್ರಮ ಕೈಗೊಂಡಿದ್ದಾರೆ. ಈ ದಿನ 66 ಮಂದಿಗೆ ಇ–ಖಾತಾ ವಿತರಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ವ್ಯಾಪಕವಾಗಿ ಜಾಗೃತಿ ಮೂಡಿಸಿ, ಅದಾಲತ್ ಮೂಲಕ ಆಸ್ತಿ ಮಾಲೀಕರಿಂದ ಅರ್ಜಿ ಸ್ವೀಕರಿಸಿ, ಶೀಘ್ರ ವಿಲೇವಾರಿ ಮಾಡಲಾಗುವುದು. ನಗರ ಪಾಲಿಕೆಯಲ್ಲಿ ನಗರಾಭಿವೃದ್ಧಿ ಸಚಿವರು ಸಭೆ ನಡೆಸಿದ್ದಾಗ ವಿದ್ಯುತ್ ಹಾಗೂ ನೀರಿನ ಬಿಲ್ ಆಧಾರದಲ್ಲಿ ಆಸ್ತಿ ಮಾಲೀಕರಿಗೆ ಬಿ–ಖಾತಾ ಮಾಡಿಕೊಡುವಂತೆ ಮನವಿ ಮಾಡಿದ್ದೆ. ಅದು ಶೀಘ್ರದಲ್ಲೇ ಈಡೇರಬಹುದೆಂಬ ವಿಶ್ವಾಸವಿದೆ ಎಂದು ಹೇಳಿದರು.



ಮೈಸೂರಿನ ಅಗ್ರಹಾರದಲ್ಲಿರುವ ಪಾಲಿಕೆ ವಲಯ ಕಚೇರಿ 1ರಲ್ಲಿ ಶುಕ್ರವಾರ ಶಾಸಕ ಟಿ.ಎಸ್.ಶ್ರೀವತ್ಸ ಅವರು ಆಸ್ತಿ ಮಾಲೀಕರಿಗೆ ಇ–ಖಾತೆ ವಿತರಿಸಿದರು. ಈ ವೇಳೆ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಇನ್ನಿತರ ಅಧಿಕಾರಿಗಳಿದ್ದರು.

ಗುರಿ ಸಾಧಿಸುವ ವಿಶ್ವಾಸ: ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಮಾತನಾಡಿ, ಸರ್ಕಾರದ ಸೂಚನೆಯಂತೆ ನಿಗದಿತ ಅವಧಿಯಲ್ಲಿ ಶೇ.100ರಷ್ಟು ಇ–ಖಾತೆ ವಿತರಣೆ ಮಾಡುವ ಗುರಿಯೊಂದಿಗೆ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದೇವೆ. ಇದಕ್ಕೆ ಶಾಸಕರ ಸಹಕಾರ ಮಹತ್ವದ್ದಾಗಿದೆ. ಕಳೆದ 45 ದಿನಗಳಲ್ಲಿ 9 ಸಾವಿರ ಇ–ಆಸ್ತಿ ನೀಡಿರುವುದು ದಾಖಲೆಯಾಗಿದೆ. ಸಾರ್ವಜನಿಕರು ಅರ್ಜಿಯೊಂದಿಗೆ ಅಗತ್ಯ ದಾಖಲೆ ಒದಗಿಸಿದರೆ ಶೀಘ್ರ ಇ–ಖಾತೆ ಪಡೆಯಬಹುದು. ಸಾರ್ವಜನಿಕರಿಗೆ ಸಮಸ್ಯೆ ಆಗದಂತೆ ಅದಾಲತ್ ಮಾದರಿಯಲ್ಲಿ ಅರ್ಜಿ ಹಾಗೂ ದಾಖಲೆ ಸಂಗ್ರಹಿಸಿ, ವಿಲೇವಾರಿ ಮಾಡುವ ಚಿಂತನೆ ಇದೆ ಎಂದು ತಿಳಿಸಿದರು.

ತ್ವರಿತ ವಿಲೇವಾರಿ: ವಲಯ ಕಚೇರಿ 1ರ ಸಹಾಯಕ ಆಯುಕ್ತ ಮಂಜುನಾಥ್ ರೆಡ್ಡಿ ಮಾತನಾಡಿ, ನಮ್ಮ ವಲಯ ವ್ಯಾಪ್ತಿಯಲ್ಲಿ ಜನವರಿಯಿಂದ ಈವರೆಗೆ ಎ–ಖಾತಾಗೆ ಸಲ್ಲಿಕೆಯಾಗಿದ್ದ 1002 ಅರ್ಜಿಗಳಲ್ಲಿ 800 ವಿಲೇವಾರಿ ಮಾಡಿದ್ದು, 125 ಬಾಕಿ ಇವೆ. 77 ಅರ್ಜಿಗಳಿಗೆ ಹಿಂಬರಹ ನೀಡಲಾಗಿದೆ. ಹಾಗೆಯೇ ಬಿ–ಖಾತಾ ನೀಡಲು ಆದೇಶವಾದ ಬಳಿಕ ಫೆಬ್ರವರಿ ಹಾಗೂ ಮಾರ್ಚ್‌ನಲ್ಲಿ 478 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಇದರಲ್ಲಿ 333 ವಿಲೇವಾರಿ ಆಗಿದೆ. ಇನ್ನು 117 ಬಾಕಿಯಿದ್ದು, 28ಕ್ಕೆ ಹಿಂಬರಹ ನೀಡಲಾಗಿದೆ. ಅರ್ಜಿ ಸಲ್ಲಿಸಿದ 7ರಿಂದ 10 ದಿನದಲ್ಲಿ ಇ–ಖಾತೆ ನೀಡುತ್ತಿರುವುದರಿಂದ ಸಾರ್ವಜನಿಕರು ಸಂತಸ ವ್ಯಕ್ತಪಡಿಸಿದ್ದಾರೆ ಎಂದರು.

ತೆರಿಗೆ ಸಂಗ್ರಹದಲ್ಲೂ ಮುಂದು: ಇದೇ ವೇಳೆ ನಗರ ಪಾಲಿಕೆ ಉಪ ಆಯುಕ್ತ ಸೋಮಶೇಖರ್, ತೆರಿಗೆ ಸಂಗ್ರಹದಲ್ಲೂ ವಲಯ ಕಚೇರಿ 1ರ ವ್ಯಾಪ್ತಿಯಲ್ಲಿ ಗಣನೀಯ ಸಾಧನೆ ಆಗಿದೆ. ಅಧಿಕಾರಿಗಳು ಹಾಗೂ ಸಿಬ್ಬಂದಿ ಪರಿಶ್ರಮದ ಫಲವಾಗಿ 2–3 ತಿಂಗಳಲ್ಲಿ ಮೂರೂವರೆ ಕೋಟಿಗೂ ಹೆಚ್ಚು ತೆರಿಗೆ ಸಂಗ್ರಹಿಸಿದ್ದು, ಬಾಕಿ ವಸೂಲಿಯಲ್ಲೂ ಈ ವಲಯ ಮುಂದಿದೆ ಎಂದು ಶ್ಲಾಘಿಸಿದರು. ವಲಯ ಕಚೇರಿ 1ರ ಕಂದಾಯಾಧಿಕಾರಿ ಸ್ವರ್ಣಲತಾ, ಎಆರ್‌ಓ ಪ್ರತಾಪ್ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಸ್ವಚ್ಛತಾ ಅಭಿಯಾನಕ್ಕೆ ಸಹಕರಿಸಿ...

ಸ್ವಚ್ಛ ಭಾರತ ಅಭಿಯಾನದಲ್ಲಿ ಏಳೆಂಟು ವರ್ಷಗಳ ಹಿಂದೆ ಮೈಸೂರು ನಗರಕ್ಕೆ ಪ್ರಥಮ ಸ್ಥಾನ ದಕ್ಕಿತ್ತು. ಕಳೆದ ವರ್ಷ 29ನೇ ಸ್ಥಾನಕ್ಕಿಳಿದಿದೆ. ಇದು ಸಾಂಸ್ಕೃತಿಕ ನಗರಿ ಮೈಸೂರಿಗೆ ಶೋಭೆಯಲ್ಲ. ಈ ಬಾರಿಯಾದರೂ ಉತ್ತಮ ಸ್ಥಾನ ಪಡೆಯಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಸ್ವಚ್ಛತೆಗೆ ಆದ್ಯತೆ ನೀಡುವುದರ ಜೊತೆಗೆ ದಯಮಾಡಿ ಅಭಿಯಾನದಲ್ಲಿ ಭಾಗವಹಿಸಿ, ಪ್ರತಿಕ್ರಿಯೆ ನೀಡಬೇಕು.

-ಶೇಖ್ ತನ್ವೀರ್ ಆಸಿಫ್, ಆಯುಕ್ತ
ಮೈಸೂರು ಮಹಾನಗರ ಪಾಲಿಕೆ

ವಕೀಲ ಅರುಣ್ ಕುಮಾರ್ ನೇತೃತ್ವದ ಒಳಮೀಸಲಾತಿ ಹೋರಾಟಕ್ಕೆ ರಾಷ್ಟ್ರೀಯ ನಾಯಕ ಮಂದಕೃಷ್ಣ ಮಾದಿಗ ಬೆಂಬಲ

ಬೆಂಗಳೂರು, ಮಾ.28– ಒಳಮೀಸಲಾತಿ ಜಾರಿಗೆ ಕರ್ನಾಟಕದಲ್ಲಿ ನಡೆಯಲಿರುವ ಚಳವಳಿಗಳಲ್ಲೂ ಭಾಗಿಯಾಗುವುದಾಗಿ ಪದ್ಮಶ್ರೀ ಪುರಸ್ಕೃತರಾದ ರಾಷ್ಟ್ರೀಯ ನಾಯಕ ಮಂದಕೃಷ್ಣ ಮಾದಿಗ ಭರವಸೆ ನೀಡಿದ್ದಾಗಿ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷರಾದ ಮೈಸೂರಿನ ಹಿರಿಯ ವಕೀಲ ಎಸ್.ಅರುಣ್ ಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನ ಕುಮಾರಕೃಪಾ ಅತಿಥಿಗೃಹದಲ್ಲಿ ಒಳಮೀಸಲಾತಿ ಚಳುವಳಿಯ ದಕ್ಷಿಣ ಭಾರತದ ನಾಯಕರಾದ ಮಂದಕೃಷ್ಣ ಮಾದಿಗ ಅವರನ್ನು ಭೇಟಿ ಮಾಡಿ ಗೌರವಿಸಿದೆವು. ಈ ವೇಳೆ ಅವರು ಆಂಧ್ರಪ್ರದೇಶ ಮತ್ತು ತೆಲಂಗಾಣದ ಮೀಸಲಾತಿ ಮಾದರಿಯನ್ನು ಕರ್ನಾಟಕದಲ್ಲೂ ಜಾರಿಗೊಳಿಸಬೇಕು. ಒಳ ಮೀಸಲಾತಿ ಜಾರಿಯಾಗುವವರೆಗೆ ಹೋರಾಟಗಳನ್ನು ತೀವ್ರಗೊಳಿಸಿ, ನಾನು ಕೂಡ ನಿಮ್ಮೊಂದಿಗೆ ಭಾಗಿಯಾಗುತ್ತೇನೆ ಒಳ ಮೀಸಲಾತಿ ಜಾರಿಗೊಳಿಸುವವರೆಗೂ ಹೋರಾಟ ಕೈಬಿಡಬಾರದು ಎಂದು ಸಲಹೆ ನೀಡಿದ್ದಾಗಿ ಹೇಳಿದ್ದಾರೆ.



ಒಳಮೀಸಲಾತಿ ಚಳುವಳಿಯ ನಾಯಕ ಮಂದಕೃಷ್ಣ ಮಾದಿಗ ಅವರನ್ನು ಮೈಸೂರಿನ ಹಿರಿಯ ವಕೀಲ ಎಸ್.ಅರುಣ್ ಕುಮಾರ್ ನೇತೃತ್ವದಲ್ಲಿ ಶುಕ್ರವಾರ ಬೆಂಗಳೂರಲ್ಲಿ ಗೌರವಿಸಲಾಯಿತು.

ಈ ವೇಳೆ ಸಾಮಾಜಿಕ ಚಳುವಳಿಗಾರರಾದ ಬಿ.ಆರ್.ಭಾಸ್ಕರ್ ಪ್ರಸಾದ್, ಬೂದಿತಿಟ್ಟು ರಾಜೇಂದ್ರ, ಮಾಳಪ್ಪ ಕುರ್ಕಿ, ಸುರೇಂದ್ರ ಕುಮಾರ್, ಶಿವಕುಮಾರ ಎಂ ಬೆಳ್ತೂರು, ರಾಜು ಬೈಲಪ್ಪದೊಡ್ಡೇರಿ, ಕನಕರಾಜು, ರಮೇಶ್ ಸೇರಿದಂತೆ ಅನೇಕ ವಕೀಲ ಮಿತ್ರರು, ಮಂದಕೃಷ್ಣ ಮಾದಿಗ ಅವರೊಂದಿಗೆ ಮುಂದಿನ ಹೋರಾಟದ ರೂಪರೇಷೆಗಳ ಬಗ್ಗೆ ಚರ್ಚಿಸಿದ್ದಾಗಿ ವಕೀಲ ಅರುಣ್‌ಕುಮಾರ್ ತಿಳಿಸಿದ್ದಾರೆ.

ಈದ್ಗಾ ಮ್ಯಾನೇಜ್‌ಮೆಂಟ್ ಕಮಿಟಿಯಿಂದ ಇಫ್ತಾರ್ ಕೂಟ

ಮೈಸೂರು, ಮಾ.28(ಎಂಕೆ)– ಮೈಸೂರಿನ ಈದ್ಗಾ ಮೈದಾನದಲ್ಲಿ ಈದ್ಗಾ ಮ್ಯಾನೇಜ್‌ಮೆಂಟ್ ಕಮಿಟಿ ವತಿಯಿಂದ ರಂಜಾನ್ ಹಬ್ಬದ ಅಂಗವಾಗಿ ಶುಕ್ರವಾರ ಇಫ್ತಾರ್ ಕೂಟ ನಡೆಯಿತು.

ಮೈಸೂರು ಸರ್ ಖಾಜಿ ಮೊಹಮ್ಮದ್ ಉಸ್ಮಾನ್ ಷರೀಫ್ ಅಧ್ಯಕ್ಷತೆಯಲ್ಲಿ ನಡೆದ ಇಫ್ತಾರ್ ಕೂಟದಲ್ಲಿ ಪರಸ್ಪರ ಸಿಹಿ ತಿನಿಸುವ ಮೂಲಕ ಉಪವಾಸ ಅಂತ್ಯಗೊಳಿಸಿ, ಶುಭಾಶಯ ವಿನಿಮಯ ಮಾಡಿಕೊಳ್ಳಲಾಯಿತು. ಇಫ್ತಾರ್ ಕೂಟದಲ್ಲಿ ಭಾಗವಹಿಸಿದ್ದ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ರಂಜಾನ್ ಹಬ್ಬ ಪವಿತ್ರವಾದ ಹಬ್ಬವಾಗಿದ್ದು, ಎಲ್ಲರೂ ಅಣ್ಣ–ತಮ್ಮಂದಿರಂತೆ ಬದುಕಬೇಕು ಎಂದು ಸಾರುವ ಹಬ್ಬವಾಗಿದೆ ಎಂದರು.

ಸಮುದಾಯದವನ್ನೇ ಹೊಡೆಯುವ ರಾಜಕಾರಣ ಸರಿಯಲ್ಲ. ಕಾಂಗ್ರೆಸ್ ಮುಸ್ಲಿಮರನ್ನು ತುಷ್ಟೀಕರಣಗೊಳಿಸುವ ಪಕ್ಷವಲ್ಲ. ದೇಶದ ಎಲ್ಲಾ ಧರ್ಮೀಯರನ್ನು ಸಮಾನವಾಗಿ ಕಾಣುವ ಪಕ್ಷವಾಗಿದೆ. ನಾವೆಲ್ಲರೂ ಒಟ್ಟಿಗೆ ಇರಬೇಕು. ಒಂದಾಗಿಯೇ ಬಾಳಬೇಕು. ದೇಶವನ್ನು ಅಭಿವೃದ್ಧಿಯತ್ತ ತೆಗೆದುಕೊಂಡು ಹೋಗಬೇಕಿದೆ ಎಂದು ಆಶಯ ವ್ಯಕ್ತಪಡಿಸಿದರು.



ಮೈಸೂರು ಈದ್ಗಾ ಮೈದಾನದಲ್ಲಿ ಶುಕ್ರವಾರ ರಂಜಾನ್ ಅಂಗವಾಗಿ ಇಫ್ತಾರ್ ಕೂಟ ನಡೆಯಿತು.

ಸರ್ ಖಾಜಿ ಮೊಹಮ್ಮದ್ ಉಸ್ಮಾನ್ ಷರೀಫ್ ಮಾತನಾಡಿ, ಹಿಂದೂಗಳಿಗೆ ಯುಗಾದಿ ಹಬ್ಬದಂತೆ, ಮುಸ್ಲಿಂ ಸಮುದಾಯಕ್ಕೆ ರಂಜಾನ್ ಆಗಿದೆ. ಎಲ್ಲಾ ಧರ್ಮೀಯರು ಸಹಬಾಳ್ವೆಯಿಂದ ಬದುಕಬೇಕು. ಎಲ್ಲರಿಗೂ ಒಳಿತಾಗಬೇಕು ಎಂದು ಪ್ರಾರ್ಥಿಸುತ್ತೇನೆ ಎಂದರು. ಇಫ್ತಾರ್ ಕೂಟದಲ್ಲಿ ಮಂಡಿ ಪೊಲೀಸ್ ಠಾಣೆ ಇನ್‌ಸ್ಪೆಕ್ಟರ್ ನಾಗರಾಜು, ಜಿಲ್ಲಾ ವಕ್ಫ್ ಬೋರ್ಡ್ ಅಧಿಕಾರಿ ಮೊಹಮ್ಮದ್ ಮುಷ್ತಾಕ್, ಈದ್ಗಾ ಮ್ಯಾನೇಜ್‌ಮೆಂಟ್ ಕಮಿಟಿ ಸದಸ್ಯರಾದ ಮಾಜಿ ನಗರಪಾಲಿಕೆ ಸದಸ್ಯ ಸುಹೇಲ್ ಬೇಗ್, ಮೊಹಮ್ಮದ್ ಮುಮ್ತಾಜ್, ಜಮೀರ್ ಅಹ್ಮದ್ ಅಶ್ರಫಿ, ಸಬನಮ್ ಸಯೀದ್, ಇಕ್ಬಾಲ್ ಮತ್ತಿತರರಿದ್ದರು.

ಮೈಸೂರು ಜೆಎಸ್‌ಎಸ್ ವೈದ್ಯಕೀಯ ಕಾಲೇಜಲ್ಲಿ 208 ಎಂಬಿಬಿಎಸ್ ಪದವೀಧರರಿಗೆ ಪದವಿ ಪ್ರದಾನ

ಬಿಹಾರ ಪಟ್ನಾದ ಡಾ.ನಿಮಿಷಾ ಸಿನ್ಹಾಗೆ 6 ಚಿನ್ನ; 3 ನಗದು ಬಹುಮಾನ



ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎಂಬಿಬಿಎಸ್ ಪದವೀಧರರಿಗೆ ಪದವಿ ಪ್ರದಾನ ಮಾಡಲಾಯಿತು.

ಮೈಸೂರು, ಮಾ.28(ಎಂಕೆ)– ಮೈಸೂರಿನ ಶಿವರಾತ್ರೀಶ್ವರ ನಗರದಲ್ಲಿರುವ ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯದಲ್ಲಿ 208 ಎಂಬಿಬಿಎಸ್ ಪದವೀಧರರಿಗೆ ಶುಕ್ರವಾರ ಪದವಿ ಪ್ರದಾನ ಮಾಡಲಾಯಿತು.

ಅವರಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಬಿಹಾರ ಪಟ್ನಾದ ಡಾ.ನಿಮಿಷಾ ಸಿನ್ಹಾ(6 ಚಿನ್ನ, 3 ನಗದು ಬಹುಮಾನ), ಮಹಾರಾಷ್ಟ್ರದ ಡಾ.ಇಶಾ ಕುಮ್ಠೇಕರ್(2 ಚಿನ್ನ, 4 ನಗದು ಬಹುಮಾನ), ಉತ್ತರ ಪ್ರದೇಶದ ಡಾ.ಉದಿಶಾ ಆರ್ಯ(2 ಚಿನ್ನ, 2 ನಗದು ಬಹುಮಾನ), ಕೇರಳ ಕಣ್ಣೂರಿನ ಡಾ.ಆರ್.ಕೀರ್ತನಾ(1 ಚಿನ್ನ, 1 ನಗದು ಬಹುಮಾನ), ಉತ್ತರ ಪ್ರದೇಶದ ಡಾ.ವೈಷ್ಣವಿ ಭಾರದ್ವಾಜ್(1 ಚಿನ್ನ), ದೆಹಲಿಯ ಡಾ.ಶ್ರಿಸ್ತಿ ಕಿಶೋರ್(1 ನಗದು ಬಹುಮಾನ) 12 ಚಿನ್ನದ ಪದಕ ಹಾಗೂ 11 ನಗದು ಬಹುಮಾನಗಳನ್ನು ಪಡೆದರು.

ಪದವೀಧರರಿಗೆ ಪದವಿ ಪ್ರದಾನ ಮಾಡಿ ಮಾತನಾಡಿದ ಜೈಪುರದ ಮಹಾತ್ಮಗಾಂಧಿ ವೈದ್ಯಕೀಯ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಅಚಲ್ ಗುಲಾಟಿ, ವೈದ್ಯಕೀಯ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ (ಎಐ)ಯನ್ನು ಮಾಹಿತಿ ಕಲೆಹಾಕಲು ಹಾಗೂ ಇನ್ನಿತರೆ ಸಂಶೋಧನೆ, ಸಹಕಾರಗಳಿಗೆ ಬಳಸಬಹುದೇ ಹೊರತು ಅದು ಮಾನವೀಯ ಗುಣಗಳನ್ನು ಹೊಂದಿರುವ ವೈದ್ಯರಿಗೆ ಪರ್ಯಾಯವಲ್ಲ ಎಂದು ಹೇಳಿದರು.

ಎಂಬಿಬಿಎಸ್ ಪದವಿ ಪಡೆದಿರುವ ಎಲ್ಲರೂ ಇವಾಗಷ್ಟೇ ನಿಜವಾಗಿ ವೈದ್ಯಕೀಯ ಕ್ಷೇತ್ರದ ಮೊದಲ ಪುಟದ ಅಧ್ಯಯನ ಪ್ರಾರಂಭಿಸಿದ್ದೀರಿ. ಕಲಿಕೆ ಎಂಬುದು ಜೀವನ ಪರ್ಯಂತ ನಡೆಯುವ ಪ್ರಕ್ರಿಯೆಯಾಗಿದ್ದು, ವೈದ್ಯರು ನಿರಂತರ ಕಲಿಯುವ ಪ್ರವೃತ್ತಿಯನ್ನು ಅಳವಡಿಸಿಕೊಳ್ಳಬೇಕು. ಸಮಸ್ಯೆಗಳನ್ನು ಎದುರಿಸುವ ಧೈರ್ಯವನ್ನು ಮೈಗೂಡಿಸಿಕೊಳ್ಳಬೇಕು. ಸ್ಪರ್ಧಾತ್ಮಕ ಯುಗದಲ್ಲಿ ಕೌಶಲ್ಯತೆ ಇದ್ದವರಿಗಷ್ಟೇ ಆದ್ಯತೆ ಎಂಬಂತಾಗಿದೆ. ಈ ನಿಟ್ಟಿನಲ್ಲಿ ವೃತ್ತಿ ಕೌಶಲ್ಯತೆಗಳ ಕಲಿಕೆಯ ಕಡೆಗೂ ಗಮನ ಹರಿಸಬೇಕು. ನಿಮ್ಮನ್ನು ವೈದ್ಯರನ್ನಾಗಿ ರೂಪುಗೊಳಿಸಿದ ತಂದೆ–ತಾಯಿ, ಪೋಷಕರು, ಗುರುಗಳು ಹಾಗೂ ಸಂಸ್ಥೆಗೆ ಋಣಿಯಾಗಿದ್ದು, ಆರೋಗ್ಯಯುತ ದೇಶವನ್ನು ಕಟ್ಟುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗುವಂತೆ ಕರೆ ನೀಡಿದರು.

ಸಮಯ ಯಾರನ್ನು ಕಾಯುವುದಿಲ್ಲ. ಹಾಗಾಗಿ ಸಮಯ ಪಾಲನೆ ಅವಶ್ಯ ಹೊಸ ವ್ಯವಸ್ಥೆಗಳಿಗೆ ಹೊಂದಿಕೊಳ್ಳುತ್ತಾ ಹೊಸ ವಿಧಾನಗಳನ್ನು ಅಳವಡಿಸಿಕೊಳ್ಳಬೇಕು. ಡಿಜಿಟಲ್ ಯುಗದಲ್ಲಿ ಎದುರಾಗುವ ಸಮಸ್ಯೆಗಳಿಗೆ ಪೂರ್ವ ತಯಾರಿ ಅಗತ್ಯವಾಗಿದೆ. ಗುರಿ ತಲುಪುವ ಜೊತೆಗೆ ಸಮುದಾಯದ ಆರೋಗ್ಯದ ಕಡೆಗೆ ಗಮನ ಹರಿಸಬೇಕು. ವೈಯಕ್ತಿಕವಾಗಿಯೂ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿದ್ದರು. ಜೆಎಸ್‌ಎಸ್ ಮಹಾ ವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ, ಸಮಕುಲಾಧಿಪತಿ ಡಾ.ಬಿ.ಸುರೇಶ್, ಕುಲಪತಿ ಡಾ.ಹೆಚ್.ಬಸವನಗೌಡಪ್ಪ, ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಕುಲಸಚಿವ ಡಾ.ಬಿ.ಮಂಜುನಾಥ, ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ.ಡಿ.ನಾರಾಯಣಪ್ಪ, ಉಪ ಪ್ರಾಂಶುಪಾಲರಾದ ಡಾ.ಎಂ.ಎನ್.ಸುಮ, ಡಾ.ಪ್ರವೀಣ್ ಕುಲಕರ್ಣಿ, ಡಾ.ಎಂ.ಮಹಾಂತಪ್ಪ, ಆಡಳಿತಾಧಿಕಾರಿ ಎಸ್.ಆರ್.ಸತೀಶ್ ಚಂದ್ರ ಉಪಸ್ಥಿತರಿದ್ದರು.

ಚೆಸ್ಕಾಂ ವತಿಯಿಂದ ಸಂಭ್ರಮದ ಮಹಿಳಾ ದಿನಾಚರಣೆ



ಚೆಸ್ಕಾಂ ವತಿಯಿಂದ ಮಹಿಳಾ ದಿನಾಚರಣೆಯನ್ನು ಆಚರಿಸಲಾಯಿತು

ಮೈಸೂರು, ಮಾ.28– ದಿನನಿತ್ಯದ ಕೆಲಸದ ಒತ್ತಡದಿಂದ ಕೊಂಚ ಬಿಡುವು ಪಡೆದು ಚೆಸ್ಕಾಂ ಮಹಿಳಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿವಿಧ ಆಟೋಟಗಳು, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಸಂತಸದ ಕ್ಷಣಗಳನ್ನು ಕಳೆದರು.

ಇಂತಹ ಸಂಭ್ರಮ ಹಾಗೂ ಅವಿಸ್ಮರಣೀಯ ಕ್ಷಣಗಳಿಗೆ ಸಾಕ್ಷಿಯಾಗಿದ್ದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ. ನಗರದ ಬಲ್ಲಾಳ್ ವೃತ್ತದ ಬಳಿಯಿರುವ ನಿತ್ಯೋತ್ಸವ ಸಭಾಂಗಣದಲ್ಲಿ ಶುಕ್ರವಾರ ಇಡೀ ದಿನ ನಡೆದ ಕಾರ್ಯಕ್ರಮದಲ್ಲಿ ನಿಗಮದ ಮಹಿಳಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಒಂದೆಡೆ ಸೇರಿ ನಾನಾ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಮಹಿಳಾ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಿದರು.

ಇದಕ್ಕೂ ಮುನ್ನ ನಡೆದ ವೇದಿಕೆ ಕಾರ್ಯಕ್ರಮವನ್ನು ಶಾಸಕರು ಹಾಗೂ ಸೆಸ್ಕ್ ಅಧ್ಯಕ್ಷ ರಮೇಶ್ ಬಂಡಿಸಿದ್ದೇಗೌಡ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ನಾನು, ನನ್ನದು ಎಂಬ ಮನಃಸ್ಥಿತಿ ಹೆಚ್ಚಾಗಿದೆ, ಇಂತಹ ಮನಸ್ಥಿತಿ ಬೆಳೆಸಿಕೊಂಡರೆ ನಾವು ಯಾವುದೇ ಕೆಲಸಗಳಲ್ಲೂ ಯಶಸ್ವಿಯಾಗಲು ಸಾಧ್ಯವಿಲ್ಲ ಅವಿಭಕ್ತ ಕುಟುಂಬದ ವ್ಯವಸ್ಥೆಯಿಂದ ನಾವು ಹೊರ ಬಂದಾಗಿನಿಂದ ಇಂತಹ ಪ್ರವೃತ್ತಿ ಹೆಚ್ಚಾಗಿದ್ದು, ಇಂತಹ ಪ್ರವೃತ್ತಿ ಬೆಳೆಸಿಕೊಳ್ಳಬಾರದು. ಮಹಿಳೆ ಕೇವಲ ಕುಟುಂಬದ ಬೆನ್ನೆಲುಬು ಮಾತ್ರವಲ್ಲದೆ, ದೇಶದ ಬೆನ್ನೆಲುಬಾಗಿದ್ದು, ಮಹಿಳೆಯರು ಎಂದಿಗೂ ತಮ್ಮ ತನವನ್ನು ಬಿಟ್ಟುಕೊಡದೆ, ನಮ್ಮ ಚಿಂತನೆಗಳೊಂದಿಗೆ ಮುನ್ನಡೆಯಬೇಕಿದೆ ಎಂದರು.

ನಿಗಮದ ಪ್ರಭಾರ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲ ರಾಜು ಮಾತನಾಡಿ, ಮಹಿಳಾ ದಿನಾಚರಣೆಯನ್ನು ಉತ್ತಮ ರೀತಿಯಲ್ಲಿ ಆಚರಣೆ ಮಾಡಬೇಕೆಂಬುದು ನಿಗಮದ ಅಧ್ಯಕ್ಷರ ಆಶಯವಾಗಿತ್ತು. ಅದರಂತೆ ಮಹಿಳಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಒಂದೆಡೆ ಸೇರಿ ಸಂಭ್ರಮದಿಂದ ಮಹಿಳಾ ದಿನವನ್ನು ಆಚರಿಸುತ್ತಿರುವುದು ಸಂತಸದ ಸಂಗತಿಯಾಗಿದೆ. ಜೀವ ಕೊಡುವ ತಾಯಿಯಾಗಿ ಧೈರ್ಯ ತುಂಬುವ ಸಹೋದರಿಯಾಗಿ, ಸ್ಫೂರ್ತಿ ತುಂಬುವ ಮಡದಿಯಾಗಿ, ಸ್ನೇಹಿತೆಯಾಗಿ ಮಹಿಳೆ ಸದಾ ಕಾಲವೂ ನಮ್ಮ ಏಳಿಗೆಯಲ್ಲಿ ಕೈಜೋಡಿಸುತ್ತಾರೆ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ನಿಗಮದ ನಿವೃತ್ತ ವ್ಯವಸ್ಥಾಪಕ ನಿರ್ದೇಶಕಿ ಜಿ. ಶೀಲಾ ಅವರು, ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಮಹಿಳಾ ದಿನಾಚರಣೆ ಶುಭಕೋರಿದರು. ಸಮಾರಂಭದಲ್ಲಿ ನಿಗಮದ ಮುಖ್ಯ ಆರ್ಥಿಕ ಅಧಿಕಾರಿ ಜಿ. ರೇಣುಕಾ, ತಾಂತ್ರಿಕ ಶಾಖೆಯ ಮುಖ್ಯ ಪ್ರಧಾನ ವ್ಯವಸ್ಥಾಪಕಿ ಎಸ್. ಶರಣಮ್ಮ, ಆಂತರಿಕ ಪರಿಶೋಧನೆ ಶಾಖೆಯ ಮುಖ್ಯ ಪ್ರಧಾನ ವ್ಯವಸ್ಥಾಪಕಿ ಲಿಂಗರಾಜಮ್ಮ ಸೇರಿದಂತೆ ನಿಗಮದ ಹಲವು ಅಧಿಕಾರಿಗಳು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

ದೇಶ – ವಿದೇಶ

ಹಾಸ್ಟೆಲ್‌ನಲ್ಲಿ ಅಗ್ನಿ ಅವಘಡ; ಜೀವ ಉಳಿಸಿಕೊಳ್ಳಲು 2ನೇ ಮಹಡಿಯಿಂದ ಜಿಗಿದ ವಿದ್ಯಾರ್ಥಿನಿಯರು

ಲಕ್ನೋ, ಮಾ.28–ಬಾಲಕಿಯರ ಹಾಸ್ಟೆಲ್‌ನಲ್ಲಿ ಬೆಂಕಿ ಕಾಣಿಸಿಕೊಂಡ ಪರಿಣಾಮ ಹಾಸ್ಟೆಲ್ ಒಳಗೆ ಸಿಲುಕಿಕೊಂಡಿದ್ದ ಇಬ್ಬರು ಹುಡುಗಿಯರು ಜೀವ ಉಳಿಸಿಕೊಳ್ಳಲು ಎರಡನೇ ಮಹಡಿಯಿಂದ ಜಿಗಿದಿರುವ ಘಟನೆ ಉತ್ತರ ಪ್ರದೇಶದ ಗ್ರೇಟರ್ ನೋಯ್ಡಾದಲ್ಲಿ ನಡೆದಿದೆ.

ಹಾಸ್ಟೆಲ್‌ನ ಎರಡನೇ ಮಹಡಿಯಲ್ಲಿ ಸಿಲುಕಿಕೊಂಡಿದ್ದ ಇಬ್ಬರು ಹುಡುಗಿಯರನ್ನು ಸ್ಥಳೀಯರು ಏಣಿಯ ಸಹಾಯದಿಂದ ರಕ್ಷಿಸಿದರು. ಆದರೆ, ಒಬ್ಬ ಹುಡುಗಿ ಏಣಿಗೆ ಕಾಲಿಡಲು ಪ್ರಯತ್ನಿಸುತ್ತಿದ್ದಾಗ ಕೆಳಕ್ಕೆ ಬಿದ್ದಳು. ಬಿದ್ದ ವಿದ್ಯಾರ್ಥಿನಿಗೆ ಯಾವುದೇ ಗಂಭೀರ ಗಾಯಗಳಾಗಿಲ್ಲ. ಮತ್ತೊಬ್ಬ ವಿದ್ಯಾರ್ಥಿನಿ ಏಣಿಯ ಸಹಾಯದಿಂದ ಕೆಳಗಿಳಿಯುವಲ್ಲಿ ಯಶಸ್ವಿಯಾದಳು ಎಂದು ಅಗ್ನಿಶಾಮಕ ಸಿಬ್ಬಂದಿ ತಿಳಿಸಿದ್ದಾರೆ. ಗುರುವಾರ ಸಂಜೆ 5 ಗಂಟೆ ಸುಮಾರಿಗೆ ನಾಲೆಡ್ಜ್ ಪಾರ್ಕ್ –3ರಲ್ಲಿರುವ ಅನ್ನಪೂರ್ಣ ಗರ್ಲ್ಸ್ ಹಾಸ್ಟೆಲ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂದು ನಮಗೆ ಮಾಹಿತಿ ಸಿಕ್ಕಿತು. ನಮ್ಮ ತಂಡ ತಕ್ಷಣ ಸ್ಥಳಕ್ಕಾಗಮಿಸಿ ಬೆಂಕಿಯನ್ನು ನಿಯಂತ್ರಿಸಿತು ಎಂದು ಅಗ್ನಿಶಾಮಕ ಅಧಿಕಾರಿ ಪ್ರದೀಪ್ ಕುಮಾರ್ ಚೌಬೆ ಮಾಹಿತಿ ನೀಡಿದರು.

ಬಾಲಕಿ ಮೇಲೆ ಅತ್ಯಾಚಾರ; ಕೈ ಕತ್ತರಿಸಿದ ಸ್ಥಿತಿಯಲ್ಲಿ ಶವ ಪತ್ತೆ


ನ್ಯೂಯಾರ್ಕ್, ಮಾ.28– ಅಮೆರಿಕದ ಓಹಿಯೋದಲ್ಲಿ 13 ವರ್ಷದ ಬಾಲಕಿ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಲಾಗಿದ್ದು, ಕೈಗಳನ್ನು ಕತ್ತರಿಸಿದ ಸ್ಥಿತಿಯಲ್ಲಿ ನಿರ್ಜನ ಮನೆಯೊಳಗೆ ಆಕೆಯ ಶವ ಪತ್ತೆಯಾಗಿದೆ. ತನ್ನ ಮಗಳ ನಾಪತ್ತೆ ಬಗ್ಗೆ ಟಿವಿಯಲ್ಲಿ ಕಾಣಿಸಿಕೊಂಡು ಮಾತನಾಡುತ್ತಿದ್ದ ಆಕೆ ತಂದೆಯನ್ನು ಪೊಲೀಸರು ಗುಂಡು ಹಾರಿಸಿ ಬಂಧಿಸಿದ್ದಾರೆ.

ನ್ಯೂಯಾರ್ಕ್ ಪೋಸ್ಟ್ ವರದಿಯ ಪ್ರಕಾರ ಕೀಮಾನಿ ಲ್ಯಾಟಿಗ್ ಎಂಬ ಬಾಲಕಿ ನಾಪತ್ತೆಯಾದ ಆರು ದಿನಗಳ ನಂತರ ಆಕೆಯ ಶವ ಟೋಲೆಡೊದಲ್ಲಿನ ಸುಟ್ಟುಹೋದ ಮನೆಯಲ್ಲಿ ಪತ್ತೆಯಾಗಿದೆ. ಆಕೆಯ ಕುಟುಂಬ ವಿವರಿಸಿದ ಪ್ರಕಾರ ನಾನು ಕೇಳಿದ ಅತ್ಯಂತ ಭಯಾನಕ ಪ್ರಕರಣಗಳಲ್ಲಿ ಇದು ಒಂದು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆಕೆಯ ತಂದೆ ಡಾರ್ನೆಲ್ ಜೋನ್ಸ್ ಸ್ಥಳೀಯ ಸುದ್ದಿ ವಾಹಿನಿ ಗಳಲ್ಲಿ ಕಾಣಿಸಿಕೊಂಡಿದ್ದು, ಮಾರ್ಚ್ 16 ರ ರಾತ್ರಿ ತನ್ನ ಮಗಳು ಮನೆಯಲ್ಲಿ ಒಬ್ಬಳೆ ಇರಲು ಭಯವಾಗುತ್ತಿದೆ ಎಂದು ಕರೆ ಮಾಡಿ ಹೇಳಿದ್ದಳು. ಇದು ಆಕೆಯೊಂದಿಗಿನ ಕೊನೆಯ ಸಂಭಾಷಣೆ ಎಂದು ಹೇಳಿದ್ದಾರೆ. ಕೀಮಾನಿ ತಾಯಿ ಟಿಯಾರಾ ಕ್ರಾಸ್ಟನ್ ಅವರು, ಮಾರ್ಚ್ 15 ರಂದು ಜೋನ್ಸ್, ಬಾಲಕಿಯನ್ನು ತನ್ನ ಮನೆಗೆ ಕರೆತಂದಾಗ ತನ್ನ ಮಗಳನ್ನು ಕೊನೆಯ ಬಾರಿಗೆ ನೋಡಿದೆ ಎಂದು ಹೇಳಿದ್ದಾರೆ.

ಇಸ್ರೇಲಿ ದಾಳಿಯಲ್ಲಿ ಹೆಜ್ಬೊಲ್ಲಾ ಕಮಾಂಡರ್ ಅಹ್ಮದ್ ಅದ್ನಾನ್ ಸಾವು

ಇಸ್ರೇಲ್, ಮಾ.28– ಇಸ್ರೇಲಿ ದಾಳಿಗಳು ಹೆಜ್ಬೊಲ್ಲಾದ ರಾಡ್ವಾನ್ ಪಡೆಯ ಬೆಟಾಲಿಯನ್ ಕಮಾಂಡರ್ ಅಹ್ಮದ್ ಅದ್ನಾನ್ ಬಾಜಿಜಾ ಅವರನ್ನು ಹತ್ಯೆ ಮಾಡಿವೆ ಎಂದು ಟೈಮ್ಸ್ ಆಫ್ ಇಸ್ರೇಲ್ ವರದಿ ಮಾಡಿದೆ. ವಾಯುದಾಳಿಗಳು ದಕ್ಷಿಣ ಲೆಬನಾನ್‌ನಲ್ಲಿರುವ ಹೆಜ್ಬೊಲ್ಲಾ ಕಾರ್ಯಕರ್ತರ ಮತ್ತೊಂದು ಗುಂಪನ್ನು ಗುರಿಯಾಗಿಸಿಕೊಂಡಿವೆ. ಈ ದಾಳಿಯಲ್ಲಿ ಇಸ್ರೇಲಿ ವಾಯುಪಡೆಯು ರಾತ್ರಿಯಿಡೀ ಸಿರಿಯಾದ ಲಟಾಕಿಯಾ ಬಂದರು ಪ್ರದೇಶವನ್ನು ಗುರಿಯಾಗಿಸಿಕೊಂಡು ದಾಳಿ ಮಾಡಿದೆ. ಇದರಿಂದ ಈ ಪ್ರದೇಶದಲ್ಲಿ ಭಾರಿ ಸ್ಫೋಟಗಳು ಸಂಭವಿಸಿದವು. ಇಸ್ರೇಲಿ ವಾಯುಪಡೆಯು ಎಕ್ಸ್ ನಲ್ಲಿ ವೀಡಿಯೊವನ್ನು ಪೋಸ್ಟ್ ಮಾಡಿದೆ. ಇತ್ತೀಚಿನ ದಿನಗಳಲ್ಲಿ ಹೆಜ್ಬೊಲ್ಲಾ ಕಾರ್ಯಕರ್ತರು ಮತ್ತು ಭಯೋತ್ಪಾದಕ ಗುಂಪುಗಳ ಸದಸ್ಯರ ಮೇಲೆ ಇಸ್ರೇಲ್ ತನ್ನ ದಾಳಿಗಳನ್ನು ಮುಂದುವರೆಸಿದೆ. ಇಸ್ರೇಲ್ ಹಮಾಸ್ ವಿರುದ್ಧ ಮತ್ತೆ ಯುದ್ಧವನ್ನು ಪ್ರಾರಂಭಿಸಿದೆ. ಇಸ್ರೇಲ್ ಮತ್ತು ಹಮಾಸ್ ನಡುವಿನ ಕದನ ವಿರಾಮ ಒಪ್ಪಂದದ ಮೊದಲ ಹಂತ ಮುಗಿದ ನಂತರ ಇಸ್ರೇಲ್ ಗಾಜಾದ ಮೇಲೆ ಹೊಸ ವೈಮಾನಿಕ ದಾಳಿಯನ್ನು ಪ್ರಾರಂಭಿಸಿತು. ನೂರಾರು ಪ್ಯಾಲೆಸ್ಟೀನಿಯನ್ನರನ್ನು ಕೊಂದಿತು. ಇಸ್ರೇಲ್ ಯುದ್ಧವನ್ನು ಪುನರಾರಂಭಿಸಿದ ನಂತರ ಸುಮಾರು 600 ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿದ್ದಾರೆ.

ಅನಿರ್ದಿಷ್ಟಾವಧಿ ಉಪವಾಸ ಅಂತ್ಯಗೊಳಿಸಿದ ರೈತ ನಾಯಕ ದಲ್ಲೆವಾಲ್



ನವದೆಹಲಿ, ಮಾ.28– ಕನಿಷ್ಠ ಬೆಂಬಲ ಬೆಲೆಗೆ ಕಾನೂನು ಖಾತರಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ರೈತ ನಾಯಕ ಜಗಜಿತ್ ಸಿಂಗ್ ದಲ್ಲೆವಾಲ್ ಅವರು ಶುಕ್ರವಾರ ಬೆಳಗ್ಗೆ ನೀರು ಕುಡಿಯುವ ಮೂಲಕ ಉಪವಾಸ ಅಂತ್ಯಗೊಳಿಸಿದ್ದಾರೆ ಎಂದು ಪಂಜಾಬ್ ಸರ್ಕಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ.

ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಎನ್ ಕೋಟೀಶ್ವರ್ ಸಿಂಗ್ ಅವರ ಪೀಠಕ್ಕೆ ಮಾಹಿತಿ ನೀಡಿದ ಪಂಜಾಬ್ ಪರ ಅಡ್ವೋಕೇಟ್ ಜನರಲ್ ಗುರ್ಮಿಂದರ್ ಸಿಂಗ್ ಅವರು, ಖಾನೌರಿ ಮತ್ತು ಶಂಭು ಗಡಿಗಳಲ್ಲಿ ಪ್ರತಿಭಟನಾನಿರತ ರೈತರನ್ನು ಚದುರಿಸಲಾಗಿದೆ ಮತ್ತು ಎಲ್ಲಾ ನಿರ್ಬಂಧಿತ ರಸ್ತೆಗಳು ಹಾಗೂ ಹೆದ್ದಾರಿಗಳನ್ನು ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ ಎಂದು ಹೇಳಿದರು. ಕೆಲವು ರೈತರ ಕುಂದುಕೊರತೆಗಳನ್ನು ಇತ್ಯರ್ಥಪಡಿಸಲು ಬಯಸಲಿಲ್ಲ ಎಂದು ನಮಗೆ ಗೊತ್ತು. ನಾವು ದಂತ ಗೋಪುರದಲ್ಲಿ ಕುಳಿತಿಲ್ಲ. ನಮಗೆ ಎಲ್ಲವೂ ತಿಳಿದಿದೆ ಎಂದ ಸುಪ್ರೀಂ ಪೀಠ, ಪ್ರಸ್ತುತ ಶಂಭು ಮತ್ತು ಖಾನೌರಿ ಗಡಿಯಲ್ಲಿನ ಪರಿಸ್ಥಿತಿಯ ಬಗ್ಗೆ ವರದಿ ಸಲ್ಲಿಸುವಂತೆ ಪಂಜಾಬ್ ಮತ್ತು ಹರಿಯಾಣ ಸರ್ಕಾರಕ್ಕೆ ಸೂಚಿಸಿದೆ.

ವ್ಯಕ್ತಿಯ ಮರ್ಮಾಂಗದಲ್ಲಿ ಸಿಲುಕಿದ ವಾಷರ್: ನೆರವಾದ ಅಗ್ನಿಶಾಮಕ ದಳ

ತಿರುವನಂತಪುರಂ, ಮಾ.28– ಅಗ್ನಿ ಅವಘಡ ಸೇರಿದಂತೆ ಇನ್ನಿತರ ಕಾರ್ಯಾಚರಣೆಗಳ ಮೂಲಕ ಜನರ ಜೀವ ಉಳಿಸುವ ಅಗ್ನಿಶಾಮಕ ದಳದ ಸಿಬ್ಬಂದಿ ಕೇರಳದ ಕಾಸರಗೋಡಿನ ವ್ಯಕ್ತಿಯೊಬ್ಬನ ಶಸ್ತ್ರಚಿಕಿತ್ಸೆಯಲ್ಲಿ ಪ್ರಮುಖ ಪಾತ್ರವಹಿಸಿ ಸೈ ಎನಿಸಿಕೊಂಡಿದ್ದಾರೆ.

ಕೇರಳದಲ್ಲಿ ವ್ಯಕ್ತಿಯ ಮರ್ಮಾಂಗದಲ್ಲಿ ಸಿಲುಕಿದ ವಾಷರ್‌ನ್ನು ತೆಗೆಯಲು ಉತ್ತರ ಕೇರಳ ಜಿಲ್ಲೆಯ ಕನ್ಹಂಗಾಡ್‌ನಲ್ಲಿರುವ ಜಿಲ್ಲಾ ಆಸ್ಪತ್ರೆ ವೈದ್ಯರು ಅಗ್ನಿಶಾಮಕ ದಳದ ಸಹಾಯ ಕೋರಿದ್ದರು. ಅದರಂತೆ ಅಗ್ನಿಶಾಮಕ ಸಿಬ್ಬಂದಿಯ ಚಾಣಕ್ಷತನದಿಂದ ವ್ಯಕ್ತಿಯೊಬ್ಬನ ಜೀವ ಉಳಿದಂತಾಗಿದೆ.

ಮೂರು ದಿನಗಳಿಂದ 46 ವರ್ಷದ ವ್ಯಕ್ತಿಯ ಜನನಾಂಗದ ಭಾಗದಲ್ಲಿ ಯಂತ್ರದ ವಾಷರ್ ಸಿಲುಕಿತ್ತು. ಇದರಿಂದ ವ್ಯಕ್ತಿಯ ಖಾಸಗಿ ಭಾಗದಲ್ಲಿ ತೀವ್ರ ಊತವಿತ್ತು. ಇದು ಮೂತ್ರ ವಿಸರ್ಜನೆಗೆ ತೊಡಕಾಗಿತ್ತು. ಈ ವಾಷರ್ ತೆಗೆಯಲು ವೈದ್ಯರು ಅಗ್ನಿಶಾಮಕ ಸಿಬ್ಬಂದಿಯ ಸಹಾಯ ಕೇಳಿದ್ದರು. ಅಗ್ನಿಶಾಮಕ ಸಿಬ್ಬಂದಿ ಬೆರಳುಗಳಲ್ಲಿ ಸಿಲುಕಿಕೊಂಡಿರುವ ಉಂಗುರಗಳನ್ನು ತೆಗೆಯಲು ಬಳಸುವ ಸಾಧನವಾದ ರಿಂಗ್ ಕಟ್ಟರ್ ಬಳಸಿ ವಾಷರ್‌ನ್ನು ಕತ್ತರಿಸಿ ತೆಗೆದಿದ್ದಾರೆ. ಇದು ಎರಡು ಗಂಟೆಗಳ ಕಾಲ ನಡೆದ ಪ್ರಕ್ರಿಯೆಯಾಗಿತ್ತು ಎಂದು ಕಾಞಂಗಾಡ್ ಠಾಣೆಯ ಅಗ್ನಿಶಾಮಕ ಮತ್ತು ರಕ್ಷಣಾ ಠಾಣಾಧಿಕಾರಿ ಪಿ.ವಿ.ಪವಿತ್ರನ್ ತಿಳಿಸಿದ್ದಾರೆ.


ಜನಪ್ರಿಯ ಯುವನಾಯಕರಾದ
ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ
ಶ್ರೀ ದರ್ಶನ್ ಧ್ರುವನಾರಾಯಣ ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಶುಭಕೋರುವವರು :
ಕೆ. ಮಾರುತಿ
ಅಧ್ಯಕ್ಷರು,
ಗ್ಯಾರಂಟಿ ಅನುಷ್ಠಾನ ಸಮಿತಿ ನಂಜನಗೂಡು ತಾಲ್ಲೂಕು
ಅಧ್ಯಕ್ಷರು, ಹಿಂದುಳಿತ ವರ್ಗಗಳ ವಿಭಾಗ,
ಮೈಸೂರು (ಜಿಲ್ಲಾ) ಗ್ರಾಮಾಂತರ ಕಾಂಗೆಸ್ ಸಮಿತಿ
ಮಾಜಿ ಜಿಲ್ಲಾ ಪಂಚಾಯತ್ ವಿರೋಧಪಕ್ಷದ ನಾಯಕರು
ಮೈಸೂರು ಜಿಲ್ಲೆ
ಸಿ.ಎಂ. ಶಂಕರ್
ಅಧ್ಯಕ್ಷರು,
ನಗರ ಕಾಂಗ್ರೆಸ್ ಸಮಿತಿ
ನಂಜನಗೂಡು ನಗರ
ಮಾಜಿ ನಗರಸಭೆ ಅಧ್ಯಕ್ಷರು,
ನಂಜನಗೂಡು
ಹಾಗೂ ಅಭಿಮಾನಿಗಳು


ನಂಜನಗೂಡಿನ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿರುವ ಜನಪ್ರಿಯ ಯುವ ಶಾಸಕರಾದ
ಸನ್ಮಾನ್ಯ ಶ್ರೀ ದರ್ಶನ್ ಧ್ರುವನಾರಾಯಣ್‌ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಶುಭಕೋರುವವರು: ಉಮೇಶ್‌ಗೌಡ, ಪ್ರಥಮ ದರ್ಜೆ ಗುತ್ತಿಗೆದಾರರು, ನಂಜನಗೂಡು
ವಿನ್ಯಾಸ ಮತ್ತು ಮುದ್ರಣ
PRINT SOLUTIONS
9448389861
ಜೆಎಸ್ಎಸ್ ಹೊಸ ಆಸ್ಪತ್ರೆ ಎದುರು, ಅಗ್ರಹಾರ, ಮೈಸೂರು


ನಂಜನಗೂಡಿನ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿರುವ ಜನಪ್ರಿಯ ಯುವ ಶಾಸಕರಾದ
ಸನ್ಮಾನ್ಯ ಶ್ರೀ ದರ್ಶನ್ ಧ್ರುವನಾರಾಯಣ್‌ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಶುಭಕೋರುವವರು:
ಆರ್. ಧ್ರುವನಾರಾಯಣ್ ಅಭಿಮಾನಿಗಳ ಬಳಗ
ನಂಜನಗೂಡು
PRINT SOLUTIONS
9448389861